ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 118 RNI Number : KNKAN/25/A2770 07-05-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :118 ರಾಯಚೂರು 07-05-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ರಾಜ್ಯಪಾಲರ ಭೇಟಿಯಾಗಿ ಸರ್ಕಾರ ರಚನೆಗೆ ಹಕ್ಕು ಮಂಡಿಸಿದ ವಿಜಯ್

ಚೆನ್ನೈ (ತಮಿಳುನಾಡು):

ರಾಜ್ಯದಲ್ಲಿ ರಾಜಕೀಯ ಮನ್ವಂತರಕ್ಕೆ ಕಾರಣವಾಗಿರುವ ತಮಿಳಗ ವೆಟ್ರಿ ಕಳಗಂ (ಟಿವಿಕೆ) ಮುಖ್ಯಸ್ಥ ಮತ್ತು ನಟ ವಿಜಯ್ ಅವರು ಬುಧವಾರ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರನ್ನು ಭೇಟಿ ಮಾಡಿ ನೂತನ ಸರ್ಕಾರ ರಚನೆಗೆ ಹಕ್ಕು ಮಂಡಿಸಿದ್ದಾರೆ.

ಇಂದು ಮುಂಜಾನೆ ವಿಜಯ್ ಅವರು ಚೆನ್ನೈನಲ್ಲಿ ತಮ್ಮ ನಿವಾಸದಿಂದ ರಾಜ್ಯಪಾಲರನ್ನು ಭೇಟಿ ಮಾಡಲು ಲೋಕಭವನಕ್ಕೆ ಹೊರಟರು. ಈ ವೇಳೆ ಪಕ್ಷದ ಮುಖಂಡರು ಜೊತೆಗಿದ್ದರು. ಇದಕ್ಕೂ ಮೊದಲು, ಮಂಗಳವಾರವಷ್ಟೆ ತಮ್ಮ ಪಕ್ಷದ ನೇತೃತ್ವದಲ್ಲಿ ಸರ್ಕಾರ ರಚಿಸಲು ಮತ್ತು ಬಹುಮತ ಸಾಬೀತುಪಡಿಸಲು ಕಾಲಾವಕಾಶ ನೀಡಲು ಕೋರಿ ಲೋಕ ಭವನಕ್ಕೆ ಇಮೇಲ್ ಕಳುಹಿಸಿದ್ದರು. ಜೊತೆಗೆ ಅವರು, ಬಹುಮತ ಸಾಬೀತುಪಡಿಸುವ ವಿಶ್ವಾಸವನ್ನೂ ವ್ಯಕ್ತಪಡಿಸಿದ್ದರು.

ನಟ ವಿಜಯ್ ಅವರ ಪಕ್ಷವು ಇತ್ತೀಚೆಗೆ ಮುಗಿದ ವಿಧಾನಸಭೆ ಚುನಾವಣೆಯಲ್ಲಿ ದ್ರಾವಿಡ ಸಂಪ್ರದಾಯದ ಡಿಎಂಕೆ ಮತ್ತು ಎಡಿಎಂಕೆ ಪಕ್ಷಗಳನ್ನು ಧೂಳೀಪಟ ಮಾಡಿ ಏಕಾಂಗಿಯಾಗಿ 108 ಸ್ಥಾನಗಳನ್ನು ಗೆದ್ದಿತು. ಆದರೆ, ಬಹುಮತಕ್ಕೆ ಬೇಕಾಗಿದ್ದು 118 ಸ್ಥಾನ. ಇನ್ನೂ 10 ಸ್ಥಾನ ಕೊರತೆ ಇರುವ ಕಾರಣ, ಇತರ ಪಕ್ಷಗಳ ನೆರವನ್ನು ಕೋರಿದ್ದಾರೆ.

ಐದು ಸ್ಥಾನ ಗೆದ್ದಿರುವ ಕಾಂಗ್ರೆಸ್ ಸರ್ಕಾರ ರಚನೆಗೆ ಷರತ್ತುಬದ್ಧ ಬೆಂಬಲವನ್ನು ಘೋಷಿಸಿದೆ. ಇದರಿಂದ, ಸದ್ಯ ಸದಸ್ಯ ಬಲವು 113 ಆಗಿದೆ. ಆದಾಗ್ಯೂ, ಬಹುಮತಕ್ಕೆ ಇನ್ನೂ ಐದು ಸ್ಥಾನಗಳು ಕೊರತೆ ಇವೆ. ಹೀಗಾಗಿ, ಇತರ ಪಕ್ಷಗಳ ಬೆಂಬಲವನ್ನು ವಿಜಯ್ ಪಕ್ಷವು ಕೋರಿದೆ.

ನಾಳೆ ಪ್ರಮಾಣವಚನ ಕಾರ್ಯಕ್ರಮ?: ರಾಜ್ಯಪಾಲರ ಭೇಟಿಯ ವೇಳೆ ತಮ್ಮ ಬಳಿ ಇರುವ ಶಾಸಕರ ಪಟ್ಟಿಯನ್ನು ಟಿವಿಕೆ ಮುಖ್ಯಸ್ಥ ವಿಜಯ್ ಅವರು ಸಲ್ಲಿಸಿದ್ದಾರೆ. ನೂತನ ಸರ್ಕಾರ ರಚನೆಗೆ ಬೇಕಾದಷ್ಟು ಬೆಂಬಲ ನಮ್ಮ ಬಳಿ ಇದೆ ಎಂದು ಅವರು ತಿಳಿಸಿದ್ದಾರೆ. ಹೀಗಾಗಿ, ಇನ್ನೆರಡು ದಿನದಲ್ಲಿ ಬಹುಮತ ಸಾಬೀತುಪಡಿಸುವಂತೆ ರಾಜ್ಯಪಾಲರು ವಿಜಯ್‌ಗೆ ತಿಳಿಸಿದ್ದಾರೆ.


ಮೇ 7 ರಂದು ಬೆಳಗ್ಗೆ 11:30 ಕ್ಕೆ ಪ್ರಮಾಣ ವಚನ ಸ್ವೀಕಾರ ಸಮಾರಂಭವನ್ನು ನಿಗದಿಪಡಿಸುವಂತೆ ಕೋರಿ ರಾಜ್ಯಪಾಲರಿಗೆ ವಿಜಯ್ ಪತ್ರ ಸಲ್ಲಿಸಿದ್ದಾರೆ. ಏತನ್ಮಧ್ಯೆ, ಪೊಲೀಸ್ ಅಧಿಕಾರಿಗಳು ಚೆನ್ನೈನ ನೆಹರೂ ಕ್ರೀಡಾಂಗಣದಲ್ಲಿ ಸಮಾರಂಭಕ್ಕೆ ವ್ಯವಸ್ಥೆ ಮಾಡಲು ಪ್ರಾರಂಭಿಸಿದ್ದಾರೆ.

ಚುನಾವಣೆಗೂ ಮೊದಲೇ ಚರ್ಚೆ ನಡೆದಿತ್ತು: ಡಿಎಂಕೆ ಜೊತೆಗಿನ ಮೈತ್ರಿ ಕಡಿದುಕೊಂಡು ಟಿವಿಕೆಗೆ ಕಾಂಗ್ರೆಸ್ ಬೆಂಬಲ ನೀಡಿದ್ದನ್ನು ಟೀಕಿಸಲಾಗುತ್ತಿದೆ. ಆದರೆ, ಚುನಾವಣಾ ಪೂರ್ವದಲ್ಲಿಯೇ ವಿಜಯ್ ಜೊತೆಗೆ ಕಾಂಗ್ರೆಸ್ ಮೈತ್ರಿಗೆ ಮುಂದಾಗಿತ್ತು. ಈ ಬಗ್ಗೆ ಚರ್ಚೆ ನಡೆದಿದ್ದವು ಎಂದು ಕೇಂದ್ರ ಸಚಿವ ಪಿ.ಚಿದಂಬರಂ ಅವರ ಪುತ್ರ ಕಾರ್ತಿ ಚಿದಂಬರಂ ಅವರು ತಿಳಿಸಿದ್ದಾರೆ.

ಚುನಾವಣೆಗೂ ಮುನ್ನ ಟಿವಿಕೆ ಜೊತೆಗೆ ಮೈತ್ರಿ ಮಾಡಿಕೊಳ್ಳುವ ಬಗ್ಗೆ ಕಾಂಗ್ರೆಸ್‌ನಲ್ಲಿ ಮಾತುಕತೆಗಳು ನಡೆದಿದ್ದವು. ಆದರೆ, ದೀರ್ಘ ಅವಧಿಯ ಪಾಲುದಾರ ಡಿಎಂಕೆ ಜೊತೆಗೆ ಮುಂದುವರಿಸಲು ನಾಯಕತ್ವವು ನಿರ್ಧರಿಸಿತು. ಕಾಂಗ್ರೆಸ್ ಜಾತ್ಯತೀತ ಸರ್ಕಾರವನ್ನು ಬಯಸುತ್ತದೆ. ಆ ತತ್ವದಲ್ಲಿ ಯಾವುದೇ ರಾಜಿ ಇಲ್ಲ ಎಂದು ಅವರು ಹೇಳಿದರು.



ದೇವದುರ್ಗ ಬೆಟ್ಟದಲ್ಲಿ ಆಕಸ್ಮಿಕ ಬೆಂಕಿ: ಬೆಂಕಿ ನಂದಿಸಲು ಅಗ್ನಿಶಾಮಕ ದಳದಿಂದ ಹರಸಾಹಸ



ದೇವದುರ್ಗ,ಮೇ.06-

ಪಟ್ಟಣದ ಗೌರಂಪೇಟ್ ಹತ್ತಿರದ ಭಾರತ ಪೆಟ್ರೋಲ್ ಬಂಕ್ ಹಿಂಭಾಗದ ಬೆಟ್ಟದಲ್ಲಿ ಮಂಗಳವಾರ ರಾತ್ರಿ ಸುಮಾರು 9.30ರ ವೇಳೆಗೆ ಆಕಸ್ಮಿಕವಾಗಿ ಬೆಂಕಿ ಕಾಣಿಸಿ ಕೊಂಡು ಹೊತ್ತಿ ಉರಿದ ಪರಿಣಾಮ ಸ್ಥಳೀಯರಲ್ಲಿ ಆತಂಕದ ವಾತಾ ವರಣ ನಿರ್ಮಾಣವಾಗಿದೆ.

ಸುಡುಬಿಸಿಲಿನ ಪರಿಣಾಮ ವಾಗಿ ಈ ರೀತಿಯ ಬೆಂಕಿ ಅವ ಘಡಗಳು ಸಂಭವಿಸುತ್ತಿರುವುದಾಗಿ ತಿಳಿದು ಬಂದಿದೆ. ಬೆಂಕಿ ಕಾಣಿಸಿ ಕೊಂಡ ತಕ್ಷಣ ಸ್ಥಳೀಯರು ಮಾಹಿತಿ ನೀಡಿದ್ದು, ಅಗ್ನಿಶಾಮಕ ದಳದ ಸಿಬ್ಬಂದಿಗಳು ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸಲು ಹರಸಾಹಸ ಪಡು ತ್ತಿದ್ದಾರೆ.

ಆದರೆ, ಬೆಟ್ಟದ ಮೇಲೆ ಅಗ್ನಿಶಾಮಕ ವಾಹನಗಳು ತೆರಳಲು ಸೂಕ್ತ ರಸ್ತೆ ಸಂಪರ್ಕ ಇಲ್ಲದ ಕಾರಣ ಬೆಂಕಿ ನಂದಿಸುವ ಕಾರ್ಯಕ್ಕೆ ಅಡ ಚಣೆ ಉಂಟಾಗಿದೆ. ರಸ್ತೆ ಸೌಲಭ್ಯಗಳ ಕೊರತೆಯಿಂದ ಕಾರ್ಯಾಚರಣೆ ಕಷ್ಟವಾಗುತ್ತಿದೆ. ಆದರೂ ಬೆಂಕಿ ನಂದಿಸಲು ಎಲ್ಲ ರೀತಿಯ ಪ್ರಯತ್ನಗಳನ್ನು ಮಾಡುತ್ತಿದ್ದೇವೆ ಎಂದು ಅಗ್ನಿಶಾಮಕ ಅಧಿಕಾರಿ ರವಿಕುಮಾರ್ ತಿಳಿಸಿದ್ದಾರೆ.

ಇನ್ನೊಂದೆಡೆ ಅರಣ್ಯ ವಲಯಾಧಿಕಾರಿ ಅಲಿಮುದ್ದೀನ್ ಅವರು, ಬಿಸಿಲಿನ ತಾಪಮಾನ ಹೆಚ್ಚಿರುವುದರಿಂದ ಬೆಂಕಿ ಹೊತ್ತಿಕೊಂಡಿರುವ ಸಾಧ್ಯತೆ ಇದೆ ಎಂದು ಹೇಳಿದ್ದಾರೆ.

ಬೆಟ್ಟದ ಸುತ್ತಮುತ್ತ ಹಾಗೂ ಕೆಳಭಾಗದಲ್ಲಿ ವಾಸಿಸುವ ಜನರು ಭಯಭೀತರಾಗಿದ್ದು, ಬೆಂಕಿ ನಿಯಂತ್ರಣಕ್ಕೆ ತರುವ ಕಾರ್ಯಾಚರಣೆ ಮುಂದುವರಿದಿದೆ.



ಗೌರಂಪೇಟೆ ಯುವಕರು ಜೀವದ ಹಂಗು ತೊರೆದು ಕೈಗಳಿಂದ ಬೆಂಕಿ ನಂದಿಸುವ ದೃಶ್ಯ

ಕನ್ನಡ ಸಾಹಿತ್ಯ ಪರಿಷತ್ತು ಕನ್ನಡಿಗರ ಒಗ್ಗಟ್ಟು, ಆಸ್ಮಿತೆ ಸಂಕೇತ : ಡಾ.ಅಂಬಿಕಾ

ಮಾನ್ವಿ, ಮೇ.06-

ಕನ್ನಡ ಸಾಹಿತ್ಯ ಪರಿಷತ್ತು ಕನ್ನಡಿಗರ ಒಗ್ಗಟ್ಟು ಮತ್ತು ಅಸ್ಮಿತೆಯ ಸಂಕೇತವಾಗಿದೆ. ನಾವೆಲ್ಲಾ ಒಂದಾಗಿ ಬಾಳಲು ನಮಗೆ ಸಾಹಿತ್ಯದ ಜ್ಞಾನ ಅಗತ್ಯವಾಗಿದೆ. ಇಂತಹ ಜ್ಞಾನ ನೀಡುವ ಸಂಸ್ಥೆಯಾಗಿ ಕನ್ನಡ ಸಾಹಿತ್ಯ ಪರಿಷತ್ತು ನಿರಂತರವಾಗಿ ಶ್ರಮಿಸುತ್ತಿದೆ ಎಂದು ಖ್ಯಾತ ವೈದ್ಯೆ ಡಾ.ಅಂಬಿಕಾ ಮಧುಸೂದನ್ ಹೇಳಿದರು.
ಪಟ್ಟಣದ ಪತ್ರಿಕಾ ಭವನದಲ್ಲಿ ಮಾನ್ವಿ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ತಾಲೂಕ ಘಟಕದ ವತಿಯಿಂದ ಏರ್ಪಡಿಸಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ 112 ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.ಕನ್ನಡ ಸಾಹಿತ್ಯ ಪರಿಷತ್ತು (ಕಸಾಪ) 1915ರ ಮೇ 5 ರಂದು ಬೆಂಗಳೂರಿನಲ್ಲಿ ಸ್ಥಾಪನೆಯಾಯಿತು. ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಆಳ್ವಿಕೆಯಲ್ಲಿ ಮತ್ತು ಸರ್ ಎಂ. ವಿಶ್ವೇಶ್ವರಯ್ಯನವರ ದಿವಾನಗಿರಿಯಲ್ಲಿ ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಪೋಷಿಸುವ ಉದ್ದೇಶದಿಂದ ಇದು ಜನ್ಮತಾಳಿತು. ಪ್ರತಿವರ್ಷ ಮೇ 5ರಂದು ಪರಿಷತ್ತಿನ ಸಂಸ್ಥಾಪನಾ ದಿನಾಚರಣೆಯನ್ನು



ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾ ಗುತ್ತದೆ ಎಂದರು.

ನಮ್ಮ ಮಾತೃಭೂಮಿ ಸ್ವರ್ಗಕ್ಕಿಂತ ಮಿಗಿಲಾದುದು. ತಾಯಿ ಭಾಷೆ ಹೃದಯದ ಭಾಷೆ. ರಾಜ್ಯದಲ್ಲಿ ಮಾತೃಭಾಷೆಗೆ ಪ್ರಾಧಾನ್ಯತೆ ಇದ್ದರೂ ರಾಜಧಾನಿಯಲ್ಲೇ ಕನ್ನಡದ ಉಳಿವಿಗೆ ಸವಾಲು ಎದುರಾಗಿದೆ. ಕಾರಣ ಅನ್ಯಭಾಷಿಗರ ಆಕ್ರಮಣ ಕನ್ನಡ ಭಾಷೆಯನ್ನು ಮುಂದಿನ ಅನೇಕ ವರ್ಷಗಳವರೆಗೆ ಜೀವಂತವಾಗಿರಿಸಲು ಕನ್ನಡ ನಾಡು, ನುಡಿ, ಸಂಸ್ಕೃತಿ ಭಾಷೆಯ ಸಂವರ್ಧ ನೆಗೆ ಭಾಷೆಯ ಆಸ್ಮಿತೆಯಾದ ಕನ್ನಡ ಸಾಹಿತ್ಯ ಪರಿಷತ್ತನ್ನು ಬಲಗೊಳಿಸೋಣ ಎಂದು ಡಾ.ಅಂಬಿಕಾ ಮಧುಸೂದನ್ ತಿಳಿಸಿದರು.

ಇಂದಿನ ಮೊಬೈಲ್ ಹಾಗೂ ಫಾಸ್ಟ್‌ಫುಡ್ ಯುಗದಲ್ಲಿ ವಿದ್ಯಾರ್ಥಿಗಳಲ್ಲಿ ಓದುವ, ಬರೆಯುವ ಹವ್ಯಾಸ ಮರೆಯಾಗುತ್ತಿದೆ. ಅದಕ್ಕಾಗಿ ಪ್ರತಿ ಹೋಬಳಿ ಮಟ್ಟದಲ್ಲಿ, ತಾಲೂಕು ಮಟ್ಟದಲ್ಲಿ ಕನ್ನಡ ಭಾಷೆಯಲ್ಲಿ ಸಂವಾದ, ಕವಿ, ಕವನಗಳನ್ನು ಬೆಂಬಲಿಸುವ, ಕನ್ನಡ ಭಾಷೆಯಲ್ಲಿ ಬರೆಯುವ ಕಾರ್ಯಕ್ರಮ ಹಮ್ಮಿಕೊಳ್ಳಬೇಕಾಗಿದೆ. ವಿದ್ಯಾರ್ಥಿ ಜೀವನದಲ್ಲಿ ಶ್ರೇಷ್ಠವಾದದ್ದು ತನ್ನತ್ತ ಆವರಿಸುವ ಸಲುವಾಗಿ ಓದುವ ಹವ್ಯಾಸವನ್ನು ರೂಢಿಸಿಕೊಳ್ಳಿ ಎಂದು ಸಲಹೆ ನೀಡಿದರು

ಸಮಾಜಕ್ಕೆ ಹಿತವಾದ ಸಾಹಿತ್ಯ ನೀಡುವ ಸಾಹಿತ್ಯ ಕೃಷಿ ಬೆಳೆಯಬೇಕಿದೆ. ಆದರೆ ಇಂದು ವಿಕೃತಿಯೆಡೆಗೆ ಕೊಂಡೊಯ್ಯುವ ಸಾಹಿತ್ಯ ದಿಂದ ಅಪಾಯವಿದೆ. ನಮ್ಮನ್ನು ಜೀವನ ಪರ್ಯಂತ ಉಳಿಸಿಕೊಳ್ಳಬಹುದಾದ ಹವ್ಯಾಸ ಇದ್ದರೆ ಅದು ಓದುವ ಹವ್ಯಾಸ ಎಂದ ಅವರು ಎಲ್ಲ ಭಾಷೆಗಳನ್ನು ಗೌರವಿಸಿ, ಕನ್ನಡ ಭಾಷೆಯನ್ನು ಪ್ರೀತಿಸಿ. ನಮ್ಮ ಕನ್ನಡ ಭಾಷಾ ಸಂಸ್ಕೃತಿಯಿಂದ ಸಾಹಿತ್ಯವನ್ನು ಗಟ್ಟಿಗೊಳಿಸುವ ಕೆಲಸವಾಗಲಿ. ಸಾಹಿತ್ಯ ಯಾವತ್ತೂ ವಿಕೃತಿಯ ಕಡೆಗೆ ಕೊಂಡುಹೋಗಬಾರದು. ಪ್ರಕೃತಿ ಸಂಸ್ಕೃತಿಯಾಗಿ ಪರಿವರ್ತನೆಯಾಗುವ ಸಾಹಿತ್ಯ ಸೃಷ್ಟಿಯಾಗಬೇಕು. ಸಂಸ್ಕೃತಿಯಿಂದ ಸಾಹಿತ್ಯವನ್ನು ಗಟ್ಟಿಗೊಳಿಸುವ ಪ್ರಯತ್ನ ನಡೆಸಬೇಕು ಎಂದರು. ತಾಕಸಾಪ ಅಧ್ಯಕ್ಷ ಶರಣಬಸವ ನೀರಮಾನ್ವಿ ಅವರು ಹಲವಾರು ದತ್ತಿ ದಾನಿಗಳಿಂದ ದತ್ತಿಯನ್ನು ಪಡೆದು ಕನ್ನಡ ಸಾಹಿತ್ಯ ಪರಿಷತ್ತಿನ ಚಟುವಟಿಕೆಗಳನ್ನು

3 ನೇ ಪುಟಕ್ಕೆ

ರಾಯಚೂರು ಜಿಲ್ಲಾಧಿಕಾರಿಯಾಗಿ ಪೂವಿತಾ ಎಸ್. ನೇಮಕ: ಹೈನುಗಾರನ ಮಗಳಿಂದ ಐಎಎಸ್‌ವರೆಗಿನ ಸ್ಫೂರ್ತಿದಾಯಕ ಪಯಣ

ರಾಯಚೂರು, ಮೇ.06-

ರಾಜ್ಯ ಸರ್ಕಾರವು 2016ನೇ ಬ್ಯಾಚ್‌ನ ಕರ್ನಾಟಕ ಕೇಡರ್‌ನ ಐಎಎಸ್ ಅಧಿಕಾರಿ ಪೂವಿತಾ ಎಸ್. ಅವರನ್ನು ರಾಯಚೂರು ಜಿಲ್ಲೆಯ ಜಿಲ್ಲಾಧಿಕಾರಿಯಾಗಿ ನೇಮಕ ಮಾಡಿ ಆದೇಶ ಹೊರಡಿಸಿದೆ. ಪ್ರಸ್ತುತ ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ () ವ್ಯವಸ್ಥಾಪಕ ನಿರ್ದೇಶಕಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆ ಮಾಡಲಾಗಿದೆ.

ತಮಿಳುನಾಡಿನ ಕರೂರಿನಲ್ಲಿ ಜೂನ್ 23, 1988ರಂದು ಹೈನುಗಾರನ ಕುಟುಂಬದಲ್ಲಿ ಜನಿಸಿದ ಪೂವಿತಾ, ಸಾಮಾನ್ಯ ಹಿನ್ನೆಲೆಯಿಂದ ಹೊರಹೊಮ್ಮಿ ಆಡಳಿತ ಸೇವೆಯಲ್ಲಿ



ಗಮನಾರ್ಹ ಸಾಧನೆ ಮಾಡಿರುವ ಅಧಿಕಾರಿಯಾಗಿದ್ದಾರೆ. ಲಿಂಗ ತಾರತಮ್ಯ ಮತ್ತು ಸಾಮಾಜಿಕ ಅಡೆತಡೆಗಳನ್ನು ಮೀರಿ ತಮ್ಮ ದೃಢಸಂಕಲ್ಪದ ಮೂಲಕ ಅವರು ಸಾಧನೆಯ ಶಿಖರ ತಲುಪಿದ್ದಾರೆ.

ಬಿ.ಟೆಕ್ ಪದವೀಧರೆಯಾದ ಅವರು 2015ರ ಯುಪಿಎಸ್‌ಸಿ ಪರೀಕ್ಷೆಯಲ್ಲಿ 175ನೇ ರ್‍ಯಾಂಕ್ ಪಡೆದು, ಎರಡನೇ ಪ್ರಯತ್ನದಲ್ಲೇ ಐಎಎಸ್‌ಗೆ ಆಯ್ಕೆಯಾಗಿದ್ದರು. ತಮ್ಮ ಪರಿಶ್ರಮ ಮತ್ತು ಸಮರ್ಪಣೆಯಿಂದ ಆಡಳಿತ ಕ್ಷೇತ್ರದಲ್ಲಿ ವಿಶಿಷ್ಟ ಗುರುತನ್ನು ಮೂಡಿಸಿಕೊಂಡಿದ್ದಾರೆ.

ಪೂವಿತಾ ಅವರು ತಮ್ಮ ಸೇವಾ ಜೀವನವನ್ನು ತಿಪಟೂರಿನ ಸಹಾಯಕ ಆಯುಕ್ತರಾಗಿ ಆರಂಭಿಸಿ, ಬಳಿಕ ಚಾಮರಾಜನಗರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಯಾಗಿ ಸೇವೆ ಸಲ್ಲಿಸಿದ್ದಾರೆ. ಅಲ್ಲದೆ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ವಿಶೇಷ ಅಧಿಕಾರಿಯಾಗಿ ಕಾರ್ಯನಿರ್ವಹಿಸಿ, ವಿವಿಧ ಆಡಳಿತ ವಿಭಾಗಗಳಲ್ಲಿ ಅನುಭವವನ್ನು

3 ನೇ ಪುಟಕ್ಕೆ

ನಗರಾಭಿವೃದ್ಧಿಗೆ ಕೋಟ್ಯಾಂತರ ಅನುದಾನ ಇದ್ದರೂ ಕಾಮಗಾರಿ ಸ್ಥಗಿತ: ಡಾ. ಬಾಬುರಾವ್ ಎಚ್ಚರಿಕೆ

ರಾಯಚೂರು, ಮೇ.06-

ನಗರಾಭಿವೃದ್ಧಿಗೆ ಬಿಡುಗಡೆಯಾದ ಕೋಟ್ಯಾಂತರ ರೂಪಾಯಿ ಅನುದಾನ ಇದ್ದರೂ ಕಾಮಗಾರಿಗಳು ನೆಮ್ಮದಿಯಾಗಿ ಸಾಗದಿರುವುದರ ಹಿಂದೆ ''ಕಾಣದ ಕೈಗಳ'' ಹಸ್ತಕ್ಷೇಪವಿದೆಯೇ ಎಂಬ ಗಂಭೀರ ಪ್ರಶ್ನೆ ಉದ್ಭವಿಸಿದೆ ಎಂದು ಎಪಿಎಂಸಿ ಮಾಜಿ ಉಪಾಧ್ಯಕ್ಷರು ಹಾಗೂ ಸಮಾಜಸೇವಕರಾದ ಡಾ. ಬಾಬುರಾವ್ ಆರೋಪಿಸಿದ್ದಾರೆ.



ನಗರದ ಪ್ರಮುಖ ಕಾಮಗಾರಿಗಳಾದ ರಾಂಪೂರ ಕೆರೆ ಅಭಿವೃದ್ಧಿ, ರೈಲ್ವೆ ಸ್ಟೇಷನ್ ರಸ್ತೆಯ ಉದ್ಯಾನವನ, ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನರಾಂ ವೃತ್ತಗಳ ಸೌಂದರ್ಯೀಕರಣ ಸೇರಿದಂತೆ ಅನೇಕ ಯೋಜನೆಗಳಿಗೆ ನಗರಾಭಿವೃದ್ಧಿ ಪ್ರಾಧಿಕಾರದಿಂದ ಕೋಟಿ ಕೋಟಿ ಅನುದಾನ ಬಿಡುಗಡೆಯಾಗಿದೆ. ಆದಾಗ್ಯೂ, ಲೋಕೋಪಯೋಗಿ ಇಲಾಖೆಯಿಂದ ಕಾಮಗಾರಿಗಳ ಅನುಷ್ಠಾನದಲ್ಲಿ ಗಮನಾರ್ಹ ವಿಳಂಬವಾಗುತ್ತಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.

ರಾಂಪೂರ ಕೆರೆಗೆ ರೂ. 5 ಕೋಟಿ, ಉದ್ಯಾನವನಕ್ಕೆ ರೂ. 2 ಕೋಟಿ, ಪ್ರಮುಖ ವೃತ್ತಗಳಿಗೆ ತಲಾ ರೂ. 1 ಕೋಟಿ ಹಾಗೂ ಇತರ ವೃತ್ತಗಳ ಸೌಂದರ್ಯೀಕರಣಕ್ಕೆ ತಲಾ ರೂ. 25 ಲಕ್ಷ ಸೇರಿದಂತೆ ಹಲವು ಯೋಜನೆಗಳಿಗೆ ಹಣ ಮೀಸಲಿದ್ದರೂ, ಮೂರ್ನಾಲ್ಕು ತಿಂಗಳು ಕಳೆದರೂ ಪ್ರಗತಿ ಕಾಣದಿರುವುದು ಅನುಮಾನಕ್ಕೆ ದಾರಿಯಾಗಿದೆ.

''ಅಭಿವೃದ್ಧಿಗೆ ಸಹಕಾರ ನೀಡಬೇಕಾದವರೇ ಅಡ್ಡಿಯಾಗುತ್ತಿರುವರೇ? ಅಧಿಕಾರಿಗಳ ವಿಳಂಬದ ಹಿಂದೆ ಯಾರ ಒತ್ತಡ ಇದೆ?'' ಎಂದು ಪ್ರಶ್ನಿಸಿರುವ ಡಾ. ಬಾಬುರಾವ್, ತಕ್ಷಣ ಸಂಬಂಧಪಟ್ಟ ಜನಪ್ರತಿನಿಧಿಗಳು ಮಧ್ಯಪ್ರವೇಶಿಸಿ ಕಾಮಗಾರಿಗಳಿಗೆ ವೇಗ ನೀಡಬೇಕೆಂದು ಒತ್ತಾಯಿಸಿದ್ದಾರೆ.

ವಿಳಂಬ ಮುಂದುವರಿದರೆ ಸಾರ್ವಜನಿಕರೊಂದಿಗೆ ಬೀದಿಗಿಳಿದು ಹೋರಾಟ ನಡೆಸುವುದು ಅನಿವಾರ್ಯವಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.



ಪಕ್ಷ ಸಂಘಟನೆಗೆ ಒತ್ತು ಕೊಡೋಣ - ಪರಮೇಶ ನಾಯ್ಕ್

ಸಿರವಾರ.ಮೇ.06-

ಸಣ್ಣ ಪುಟ್ಟ ಕಾರ್ಯಕರ್ತರನ್ನು ಗುರುತಿಸಿ ಸೂಕ್ತ ಸಮಯದಲ್ಲಿ ಸ್ಥಾನಮಾನ ಸಿಗುವುದು ಜೆಡಿಎಸ್ ಪಕ್ಷದಲ್ಲಿ ಮಾತ್ರ, ಪಕ್ಷ ಸಂಘಟನೆಗೆ ಒತ್ತು ನೀಡುವ ಮೂಲಕ ಮುಂಬರುವ ಗ್ರಾ.ಪಂ, ತಾ.ಪಂ, ಜಿ.ಪಂ ಚುನಾವಣೆಯಲ್ಲಿ ಅತೀ ಹೆಚ್ಚು ಸ್ಥಾನಗಳನ್ನು ಗೆಲ್ಲೋಣ ಎಂದು ಜೆಡಿಎಸ್ ಎಸ್ ಸಿ ಘಟಕ ತಾಲೂಕ ಅಧ್ಯಕ್ಷ ಪರಮೇಶ ನಾಯ್ಕ್, ಹೇಳಿದರು. ಪಟ್ಟಣದ ಜೆಡಿಎಸ್ ಪಕ್ಷದ ಕಛೇರಿಯಲ್ಲಿ ಜೆಡಿಎಸ್ ಸಿರವಾರ ತಾಲೂಕ ಘಟಕ ಪ್ರ.ಕಾರ್ಯದರ್ಶಿ ದಾನಪ್ಪ ಅವರ ಹುಟ್ಟುಹಬ್ಬದ ಅಂಗವಾಗಿ ಸನ್ಮಾನಿಸಿ, ಸಿಹಿ ತಿನ್ನಿಸಿ ನಂತರ ಮಾತನಾಡಿದ ಅವರು ಅಧಿಕಾರ, ಸ್ಥಾನಮಾನಕ್ಕಾಗಿ ಪಕ್ಷದಲ್ಲಿ ಇರಬಾರದು, ನಾವು ಪಕ್ಷ ಸಂಘಟನೆಗೆ ಶ್ರಮಿಸಿದಾಗ ಮಾತ್ರ ಅಧಿಕಾರಿ, ಸ್ಥಾನಮಾನ ನಮ್ಮನು ಹುಡುಕೊಂಡು ಬರುತ್ತವೆ ಎಂದರು. ಜೆಡಿಎಸ್ ಸಿರವಾರ ತಾಲೂಕ ಅಧ್ಯಕ್ಷ ದಾನಪ್ಪ, ರಾಮಾಚಾರಿ, ಲಕ್ಷ್ಮಣ,ದೊಡ್ಡ ಹನುಮಂತ ನಾಯಕ ಮಲ್ಲಯ್ಯ ನಾಯಕ ಬಾಬು ರಾಠೋಡ್, ವಸಂತಕುಮಾರ ರಾಠೋಡ್, ಸಂತೋಷ ಕುಮಾರ ರಾಠೊಡ್. ಭೀಮರಾಯ ಅಂಬಿಗ, ರಾಮು ಸೇರಿದಂತೆ ಇನ್ನಿತರರು ಇದರು.

ಕ. ಸಾ. ಪರಿಷತ್ 112 ನೇ ಸಂಸ್ಥಾಪನೆ ದಿನಾಚರಣೆ
21 ವಿದ್ಯಾರ್ಥಿಗಳಿಗೆ ಸನ್ಮಾನ. ಕನ್ನಡ ಭಾಷೆ ಎಲ್ಲಾ ಲಿಪಿಗಳ ರಾಣಿಯಾಗಿದೆ : ಚನ್ನಬಸವ

ಸಿರವಾರ.ಮೇ.5-

ಕಡಲಾಳದಿಂದ ಮುತ್ತುಗಳನ್ನ ಹೆಕ್ಕಿ ತೆಗೆದು ಪೋಣಿಸಿದ ಮುತ್ತಿನ ಹಾರದಂತೆ ಕನ್ನಡ ಒಂದು ಸುಂದರ ಲಿಪಿಯಾಗಿದೆ ಎಂದು ದೇವದುರ್ಗ ಕ. ರಾ. ಸರ. ನೌಕರರ ಸಂಘ ಉಪಾದ್ಯಕ್ಷ, ಮೈಸೂರು ಶರಣು ವಿಶ್ವ ವಚನ ಫೌಂಡೇಶನ್ ತಾಲೂಕು ಘಟಕ ಅಧ್ಯಕ್ಷ ಹಾಗೂ ಹೆಗ್ಗಡದಿನ್ನಿ ಶಾಲೆಯ ಶಿಕ್ಷಕ ಚನ್ನಬಸವ ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ಸಂಸ್ಥಾಪನೆ ಗೊಂಡು 112ನೆಯ ವರ್ಷಾಚರಣೆಯನ್ನು ಪಟ್ಟಣದ ಶ್ರೀ ವಿನಾಯಕ ಪಿ.ಯು. ಕಾಲೇಜಿನಲ್ಲಿ ಹಮ್ಮಿಕೊಳಲಾಯಿತು. ವಿಶೇಷ ಉಪನ್ಯಾಸಕರಾಗಿ ಆಗಮಿಸಿದ ಅವರು ಕನ್ನಡ ಭಾಷೆ ಸರ್ವೋತ್ತಮ ಭಾಷೆಯಾಗಿದೆ ಕನ್ನಡ ಭಾಷೆಯ ಉಗಮ ನಡೆದು ಬಂದ ದಾರಿ ಕನ್ನಡ ಭಾಷೆಯು ಎದುರಿಸಿರುವಂತಹ ಸವಾಲುಗಳು ಕುರಿತು ಸುಧೀರ್ಘವಾಗಿ ಮಾತನಾಡುತ್ತಾ ವಿಶೇಷವಾಗಿ ವಚನ ಸಾಹಿತ್ಯವು ಕನ್ನಡದ ಬಹುದೊಡ್ಡ ಪರಂಪರೆಯಾಗಿದೆ ಮಾನವನ ಕಲ್ಯಾಣಕ್ಕಾಗಿ , ಮಾನವನ ಸರ್ವೋತ್ತಮ ಅಭಿವೃದ್ಧಿಗಾಗಿ ರಚಿಸಿದ ಏಕೈಕ



ಸಾಹಿತ್ಯ ವಚನ ಸಾಹಿತ್ಯವಾಗಿದೆ ಶ್ರೀ ಜಗಜ್ಯೋತಿ ಬಸವಣ್ಣನವರು ಕಳಸಮುದಾಯದ ಎಲ್ಲಾ ಕಾಯಕ ವರ್ಗದ ಜನರನ್ನ ಒಗ್ಗೂಡಿಸಿ ವಚನ ಸಾಹಿತ್ಯದ ಕೃಷಿಯನ್ನು ಮಾಡಿರುವುದು ಅನನ್ಯ ಕಾರ್ಯವಾಗಿದೆ ಮತ್ತು ಕನ್ನಡ ಸಾಹಿತ್ಯ ಪರಿಷತ್ 1915 ರಲ್ಲಿ ರಚಿಸುವ ಮೂಲಕ ಕನ್ನಡ ಸಾಹಿತ್ಯ ಸಮ್ಮೇಳನಗಳನ್ನು ಪ್ರತಿ ವರ್ಷವೂ ಆಚರಿಸುತ್ತಾ ಕನ್ನಡದ ಸರ್ವೋತ್ತಮ ಪುಸ್ತಕಗಳನ್ನು ಪ್ರಕಟಿಸುತ್ತಾ ತನ್ನದೇ ಆದ ಕಾರ್ಯವನ್ನು ನಿರ್ವಹಿಸುತ್ತಾ ಕನ್ನಡ ಭಾಷೆಯು ಮನೆ ಮನಗಳನ್ನ ಮುಟ್ಟುವಲ್ಲಿ ಬಹುದೊಡ್ಡ ಪಾತ್ರವನ್ನು ವಹಿಸುತ್ತಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಕಸಾಪ ಗೌರವ ಅಧ್ಯಕ್ಷರಾದ ಚುಕ್ಕಿ ಸೂಗಪ್ಪ ಸಾಹುಕಾರ ಮಾತನಾಡಿ ಕನ್ನಡ ಭಾಷೆ ಉಳಿಸುವುದು ಬೆಳೆಸುವುದು ಕನ್ನಡವನ್ನು ಬಳಸುವುದು

3 ನೇ ಪುಟಕ್ಕೆ

ಕಾರ್ಮಿಕ ದಿನಾಚರಣೆ: ಹೂವಿನಾಳದಲ್ಲಿ ಕಾನೂನು ಅರಿವು ನೆರವು



ಕೊಪ್ಪಳ ಮೇ 06-

ಜ್ಲಅಂತಾರಾಷ್ಟ್ರೀಯ ಕಾರ್ಮಿಕ ದಿನಾಚರಣೆಯ ಅಂಗವಾಗಿ ಕೊಪ್ಪಳ ತಾಲೂಕಿನ ಹೂವಿನಾಳ ಗ್ರಾಮದ ಶ್ರೀ ಆಂಜನೇಯ ದೇವಸ್ಥಾನದಲ್ಲಿ ಇತ್ತೀಚೆಗೆ ಕಾನೂನು ಅರಿವು ನೆರವು ಕಾರ್ಯಕ್ರಮ ನಡೆಯಿತು.

ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ಬಳಿಕ ಮಾತನಾಡಿ, ಅಂತರಾಷ್ಟ್ರೀಯ ಕಾರ್ಮಿಕ ದಿನ ಎನ್ನುವ ಬದಲು ಶ್ರಮಯೋಗಿ ದಿನ ಎಂದು ಕರೆಯುವುದು ಹೆಚ್ಚು ಸೂಕ್ತ. ಹಿಂದೆ ಶರಣಾಧಿ ಪ್ರಮಥರು ವಾಣಿಗಳಂತೆ ಕಾಯಕದ ಮಹತ್ವವನ್ನು ಬಸವಣ್ಣನವರು ಕಾಯಕವೇ ಕೈಲಾಸ ಎಂದು ನುಡಿದು ಕಾಯಕದ ಮಹತ್ವವನ್ನು ಸಾರಿದ್ದಾರೆ. ಅದೇ ರೀತಿ ನೀನು ಅಧ್ಯಕ್ಷನಾಗಿರು, ಚಮ್ಮಾರನಾಗಿರು, ಕಮ್ಮಾನಾಗಿರು, ಏನೇ ಆಗಿದ್ದರೂ ಮೊದಲು ಶ್ರಮಯೋಗಿ ಆಗಿ ಕೆಲಸಗಾರನಾಗು, ಕಾರ್ಮಿಕನಾಗಿರು ಎಂದು ಡಾ. ಬಿ.ಆರ್.ಅಂಬೇಡ್ಕರ್ ರವರು ಹೇಳಿದ್ದಾರೆ. ಹಾಗಾಗಿ ಶ್ರಮಿಕ ವರ್ಗ ದೇಶದ ಅಭಿವೃದ್ಧಿ, ಉನ್ನತಿಗೆ ಮುನ್ನುಡಿಯಾಗಿದ್ದಾರೆ ಎಂದರು.

ಕಲ್ಯಾಣ ಕರ್ನಾಟಕ ಜಿಲ್ಲೆಗಳ ನೋಂದಾಯಿತ ಕಾರ್ಮಿಕ ಸಂಘಗಳ ಒಕ್ಕೂಟ ಅಧ್ಯಕ್ಷರಾದ ರಮೇಶ ಘೋರ್ಪಡೆ ಅವರು ಮಾತನಾಡಿ, ಕಾರ್ಮಿಕ ಇಲಾಖೆಯಿಂದ ನಮ್ಮ ಕಾರ್ಮಿಕರಿಗೆ ಒಳ್ಳೆಯ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಇದರಿಂದ ನಮ್ಮ ಕಾರ್ಮಿಕರು ಉತ್ತಮ ಜೀವನ ಕಟ್ಟಿಕೊಳ್ಳಲು ಕಟ್ಟಡ ನಿರ್ಮಾಣ ಕಾರ್ಮಿಕರಿಗೆ ಜೀವನ ಮಟ್ಟವನ್ನು ಸುಧಾರಿಸಿಕೊಳ್ಳಲು ಸಾಧ್ಯವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾರ್ಮಿಕ ನಿರೀಕ್ಷಕರಾದ ಮಂಜುಳಾ ವಿಶ್ವನಾಥ ಅವರು ಮಾತನಾಡಿ, ಪಾಶ್ಚಿಮಾತ್ಯ ದೇಶಗಳಲ್ಲಿ ಕಾರ್ಮಿಕರ ದಂಗೆಗಳು 1883 ರಲ್ಲಿ ಪ್ರಾರಂಭವಾದವು. ಚಿಕ್ಕಾಗೋದಲ್ಲಿ ಕಾರ್ಮಿಕ ಸಂಘಟನೆಗಳು ಹೋರಾಟವನ್ನು ಕೆಲಸದ ಅವಧಿ ನಿರ್ಧರಿಸುವ ಸಲುವಾಗಿ ಮತ್ತು ಅನೇಕ ಶೋಷಣೆಗಳ ವಿರುದ್ಧ ಹೋರಾಟ ಪ್ರಾರಂಭಿಸಿದರು. 1886ರಲ್ಲಿ 8 ಗಂಟೆಗಳ ಕೆಲಸದ ಅವಧಿಯನ್ನು ನಿರ್ಣಯಿಸಲಾದ ಪ್ರಯುಕ್ತ ಮೇ 1ರ 1886 ರಿಂದ ಜಾಗತಿಕ ಮಟ್ಟದಲ್ಲಿ ಅಂತರಾಷ್ಟ್ರೀಯ ಕಾರ್ಮಿಕ ದಿನವನ್ನು ಆಚರಣೆ ಮಾಡುತ್ತಾ ಬರಲಾಯಿತು. ಭಾರತದಲ್ಲಿ 1937 ರಲ್ಲಿ ಚೆನ್ನೈನಲ್ಲಿ ಕಾರ್ಮಿಕ ಸಂಘಟನೆಗಳು ಹೋರಾಟದ ನೆನಪಿಗಾಗಿ ಭಾರತದಲ್ಲಿಯೂ ಕೂಡಾ ಕಾರ್ಮಿಕ ದಿನ ಆಚರಿಸುತ್ತಾ ಬರಲಾಯಿತು. ಈ ದಿನದಂದು ಕಾರ್ಮಿಕರ ಕುರಿತು ಕಾರ್ಯನಿರ್ವಹಿಸಿದ ಕಾರ್ಮಿಕ ಪ್ರತಿನಿಧಿ ಸಂಘಟನೆಗಳು, ಸಂಘ ಸಂಸ್ಥೆಗಳನ್ನು ಗುರುತಿಸಿ ಪ್ರೋತ್ಸಾಹ ನೀಡಲು ಆಚರಿಸುತ್ತಾ ಬರುತ್ತಿದೆ ಎಂದು ಕಾರ್ಮಿಕ ದಿನ ಇತಿಹಾಸ ತಿಳಿಸುತ್ತಾ ಕಾರ್ಮಿಕ ಇಲಾಖೆಯಲ್ಲಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಅಡಿ ಕಟ್ಟಡಕ್ಕೆ ಸಂಬಂಧಿಸಿದಂತೆ ಕೆಲಸ ನಿರ್ವಹಿಸುತ್ತಿರುವವರು ನೋಂದಣಿಯಾಗಲು, ನೋಂದಣಿ ಪೂರ್ವದ 12 ತಿಂಗಳಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕನಿಷ್ಠ 90 ದಿನಗಳು ಕೆಲಸ ನಿರ್ವಹಿಸಿರಬೇಕು. 18 ರಿಂದ 60 ವರ್ಷದೊಳಗಿರಬೇಕು. ಉದ್ಯೋಗ ದೃಢೀಕರಣ ಪತ್ರ, ಅರ್ಜಿದಾರ ಹಾಗೂ ಅವಲಂಬಿತರ ಆಧಾರ ಕಾರ್ಡ್ ಪ್ರತಿ, ಅರ್ಜಿದಾರರ ಬ್ಯಾಂಕ್ ಪಾಸ್‌ಬುಕ್ ಪ್ರತಿ, ಅರ್ಜಿದಾರರ ಆಧಾರ್ ಕಾರ್ಡ್‌ಗೆ ಲಿಂಕ್ ಆಗಿರುವ ದೂರವಾಣಿ ಸಂಖ್ಯೆ, ಹೊಂದಿರಬೇಕೆಂದು ತಿಳಿಸಿ ದರು.

ಇದಲ್ಲದೇ ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ನೀಡಲಾಗುವ ಸೌಲಭ್ಯಗಳಾದ, ಮದುವೆ ಧನಸಹಾಯ, ಹೆರಿಗೆ ಧನಸಹಾಯ, ಅಂತ್ಯಕ್ರಿಯೆ ವೆಚ್ಚ, ಶೈಕ್ಷಣಿಕ ಧನಸಹಾಯ, ವೈದ್ಯಕೀಯ ಸಹಾಯಧನ, ಅಪಘಾತ ಪರಿಹಾರ, ಪ್ರಮುಖ ವೈದ್ಯಕೀಯ ಸಹಾಯಧನ, ತಾಯಿ ಮಗು ಸಹಾಯ ಹಸ್ತ, ಪಿಂಚಣಿ ಸೌಲಭ್ಯಗಳನ್ನು ಪಡೆಯಬಹುದಾಗಿರುತ್ತದೆ. ಈ ಸೌಲಭ್ಯಗಳನ್ನು ಪಡೆಯಲು ಕಾಲಕ್ಕೆ ಗುರುತಿನ ಚೀಟಿಯ ನವೀಕರಣವನ್ನು ಮಾಡಿಸುವುದು ಕಡ್ಡಾಯವಾಗಿರುತ್ತದೆ ಎಂದು ತಿಳಿಸಿ, ಅಸಂಘಟಿತ ಸಾಮಾಜಿಕ ಭದ್ರತಾ ಮಂಡಳಿ ಅಡಿ ಸಿಗುವ ಸೌಲಭ್ಯಗಳ ಕುರಿತು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕರಾದ ಬಸವರಾಜ ಹಿರೇಗೌಡ್ರ, ಕಾರ್ಮಿಕ ಇಲಾಖೆಯ ಕ್ಷೇತ್ರ ನಿರ್ವಾಹಕ ಹೇಮಂತ್ ಸಿಂಗ್, ಬಹದ್ದೂರ ಬಂಡಿ ಕಾರ್ಮಿಕ ಸಂಘದ ಅಧ್ಯಕ್ಷರಾದ ಮಹಿಬೂಬ ಮಣ್ಣೂರ, ಹೂವಿನಾಳ ಕಟ್ಟಡ ಕಾರ್ಮಿಕ ಸಂಘದ ಅಧ್ಯಕ್ಷರಾದ ಇಂದ್ರಾ ನಾಯಕ ಸೇರಿದಂತೆ ವಿವಿಧ ಸಂಘಟನೆಯ ಪದಾಧಿಕಾರಿಗಳು, ಕಾರ್ಮಿಕರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಇಂತಹ ನವೀನ ಕಾರ್ಯಕ್ರಮಗಳು ಅವಶ್ಯ

ಬೀದರ, ಮೇ.06

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಹಮ್ಮಿಕೊಳ್ಳುವ ಇಂತಹ ನವೀನ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಲು ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಬಹಳ ಮುಖ್ಯವಾಗಿದೆ ಎಂದು ಬೆಂಗಳೂರು ಅಕ್ಕಪಡೆ ರಾಜ್ಯ ಮಟ್ಟದ ಸಲಹೆಗಾರರಾದ ಶೈನಿ ಪ್ರದೀಪ ಗುಂಟಿ ಹೇಳಿದರು.

ಅವರು ಇತ್ತೀಚಿಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಬೀದರ ಇವರ ಸಂಯುಕ್ತಾಶ್ರಯದಲ್ಲಿ 2025-26ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಸರಕಾರಿ ಬಾಲಕರ ಮತ್ತು ಬಾಲಕಿಯರ ಬಾಲಮಂದಿರಗಳ ವಿದ್ಯಾರ್ಥಿಗಳಿಗೆ ಸನ್ಮಾನ ಹಾಗೂ ವಿದ್ಯಾರ್ಥಿಗಳ ಮುಂದಿನ ಶೈಕ್ಷಣಿಕ ಪ್ರಗತಿಗಾಗಿ ಬೀದರ ಮೈಲೂರಿನ ಸರಕಾರಿ ಬಾಲಕಿಯರ ಬಾಲಂದಿರದಲ್ಲಿ ಹಮ್ಮಿಕೊಂಡಿದ್ದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ರಾಜ್ಯದ ಎಲ್ಲಾ ಕಡೆ ಇಂತಹ ಕಾರ್ಯಕ್ರಮ ಆಗಬೇಕು. ಮಕ್ಕಳು ಶ್ರಮ ಪಟ್ಟು ಕಲಿತಾಗ ಮಾತ್ರ ಇಂತಹ ಸಾಧನೆ ಮಾಡಲು ಸಾಧ್ಯ. ನಾನು ಕೂಡ ತಂದೆ ಇಲ್ಲದೇ ಬೆಳೆದವಳು ಜೀವನದಲ್ಲಿ ತುಂಬಾ ಕಷ್ಟಪಟ್ಟು ಓದಿ ಇಂಜೀನಿಯರಿಂಗ್ ಮಾಡಿ ಪಿ.ಹೆಚ್.ಡಿ ಮಾಡುತ್ತಿದ್ದೇನೆ. ನೀವು ಕೂಡ ಎದೆಗುಂದದೆ ನಿಮ್ಮ ಜೀವನದಲ್ಲಿ ಸಾಧನೆ ಮಾಡಬೇಕು ನಿಮಗೆ ಯಾವಾಗಲು ನನ್ನ ಬೆಂಬಲ ಇರುತ್ತದೆಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಶ್ರೀಧರ ಮಾತನಾಡಿ, ಎಸ್.ಎಸ್.ಎಲ್.ಸಿ ಪರೀಕ್ಷೆ ಜೀವನವನ್ನು ಬದಲಾಯಿಸುವ ಘಟ್ಟ ಆಗಿದೆ. ವಿದ್ಯಾರ್ಥಿಗಳ ಜೀವನದ ಸಾಧನೆಗೆ ಇದು ಮೊದಲನೇ ಮೆಟ್ಟಲಾಗಿದೆ. ತಾವುಗಳು ಕಷ್ಟಪಟ್ಟು ಓದಿದರೆ ಮಾತ್ರ ಮುಂದೆ ಹೋಗಲು ಸಾಧ್ಯ. ತಮಗೆ ಕೊರತೆಯಿರುವುದರಿಂದ ಇಲ್ಲಿಗೆ ಬಂದಿರುತ್ತೀರಿ. ನಿಮ್ಮ ಜೊತೆ ಯಾವಾಗಲು ನಾವು ಸದಾ ಇದ್ದೇವೆ ಎಂದು ಹೇಳಿದರು.



ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶಾರದಾ ಎನ್. ಕಲ್ಮಲಕರ್ ಮಾತನಾಡಿ, ಈ ಒಂದು ಕಾರ್ಯಕ್ರಮ 9ನೇ ಮಕ್ಕಳಿಗೆ ಸ್ಫೂರ್ತಿ ನೀಡಲು ಹಮ್ಮಿಕೊಳ್ಳಲಾಗಿದೆ. ಇಂತಹ ಕಾರ್ಯಕ್ರಮ ಮೊದಲನೇ ಸಲ ಆಯೋಜಿಸಲಾಗಿದೆ. ಜೀವನದಲ್ಲಿ ಸಾಧನೆ ಮಾಡಬೇಕೆಂದರೆ ಪರಿಶ್ರಮ ತುಂಬಾ ಅಗತ್ಯ. ಪರಿಶ್ರಮ ಇಲ್ಲದೇ ಏನು ಮಾಡಲು ಸಾಧ್ಯವಿಲ್ಲ. ಎಸ್.ಎಸ್.ಎಲ್.ಸಿ ಮಕ್ಕಳಿಗೆ ಅವರ ಇಚ್ಛೆಗನುಗುಣವಾಗಿ ಮುಂದಿನ ಶೈಕ್ಷಣಿಕ ಅಥವಾ ಕೌಶಲ್ಯ ತರಬೇತಿಯನ್ನು ನೀಡಬೇಕಾಗಿರುತ್ತದೆ. ಅದೇ ರೀತಿ 10ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳಿಗೆ ಹೋಮ್ ಗಾರ್ಡ ಹುದ್ದೆಯನ್ನು ನೀಡುವಂತೆ ಶ್ರೀಮತಿ. ಶೈನಿ, ರಾಜ್ಯ ಮಟ್ಟದ ಸಲಹೆಗಾರರು ಅಕ್ಕಪಡೆ ಬೆಂಗಳೂರು ಅವರಿಗೆ ಮನವಿ ಮಾಡಿಕೊಂಡರು. ಅದೇ ರೀತಿ ಬಾಲಕರ ಬಾಲಮಂದಿರದ ಶಿವಕುಮಾರ ತಂದೆ ಚಿದಾನಂದ್ ಇವನು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ 80% ಅಂಕಗಳನ್ನು ಪಡೆದು ಉತ್ತೀರ್ಣನಾಗಿರುತ್ತಾನೆ. ಇವನ ಈ ಸಾಧನೆಗೆ ಮೆಚ್ಚಿ ಬೀದರನ ಪ್ರತಿಷ್ಠಿತ ಶಾಹೀನ ಶಿಕ್ಷಣ ಸಂಸ್ಥೆಯವರು ಸದರಿ ಬಾಲಕನಿಗೆ ಉಚಿತ ಶಿಕ್ಷಣ ಮತ್ತು ವಸತಿಯನ್ನು ನೀಡಿರುತ್ತಾರೆಂದು ತಿಳಿಸಿದರು.

10ನೇ ಪರೀಕ್ಷೆಯಲ್ಲಿ ಉತ್ತೀರ್ಣರಾದ 06 ಮಕ್ಕಳಿಗೆ ತಲಾ ರೂ. 2500/- ಮೊತ್ತವನ್ನು ಬಹುಮಾನವಾಗಿ ನೀಡಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಬೀದರ ಸರಕಾರಿ ಬಾಲಕರ ಬಾಲಮಂದಿರದ ಅಧೀಕ್ಷಕಿ ರೂಪ ಎಸ್. ಕೋಟೆ ಗೌಡರ್, ಸರಕಾರಿ ಬಾಲಕಿಯರ ಬಾಲಮಂದಿರದ ಅಧೀಕ್ಷಕಿ ಮಹಾನಂದಾ, ಸರಕಾರಿ ವೀಕ್ಷಣಾಲಯದ ಅಧೀಕ್ಷಕಿ ಸುನೀತಾ ರಾಠೋಡ ಸೇರಿದಂತೆ ಮಕ್ಕಳು, ಪಾಲಕರು/ಪೋಷಕರು ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆ ಗೌರಿಶಂಕರ ಪರತಾಪೂರೆ ನಿರ್ವಹಿಸಿದರು, ಪ್ರಶಾಂತ ಬಿರಾದಾರ ಸ್ವಾಗತವನ್ನು ಕೋರಿದರು. ರಘುನಾಥ ವಂದನಾರ್ಪಣೆಯೊಂದಿಗೆ ಕಾರ್ಯಕ್ರಮವನ್ನು ಮುಕ್ತಾಯಗೊಳಿಸಿದರು.



ಸುರಪುರ:ಸ್ವಚ್ಛತೆಗೆ ಕ್ರಮ ಕೈಗೊಳ್ಳಲು ನಗರಸಭೆಗೆ ಸಾರ್ವಜನಿಕರ ಒತ್ತಾಯ

ಸುರಪುರ,ಮೇ.06-

ನಗರದ ಅನೇಕ ಕಡೆಗಳಲ್ಲಿ ಸ್ವಚ್ಛತೆ ಇಲ್ಲದೆ ಚರಂಡಿಗಳು ತುಂಬಿ ಹರಿಯುತ್ತಿದ್ದು ಕೂಡಲೇ ಸ್ವಚ್ಛತೆಗೆ ಕ್ರಮ ಕೈಗೊಳ್ಳುವಂತೆ ನಗರಸಭೆ ಅಧಿಕಾರಿಗಳಿಗೆ ಸಾರ್ವಜನಿಕರು ಒತ್ತಾಯಿಸಿದ್ದಾರೆ.

ನಗರದ ತಿಮ್ಮಾಪುರದ ವಾರ್ಡ್ ಸಂಖ್ಯೆ 27ರ ಮಾರ್ಕಂಡೇಯ ದೇವಸ್ಥಾನದ ಬಳಿಯ ಚರಂಡಿ ತುಂಬಿ ನಿಂತಿದ್ದರಿಂದ ದುರ್ನಾತ ಬೀರುತ್ತಿದೆ. ಸಾರ್ವಜನಿಕರು ಮನೆಯಿಂದ ಹೊರ ಬಂದರೆ ಮೂಗು ಮುಚ್ಚಿಕೊಂಡು ಓಡಾಡುವ ಪರಿಸ್ಥಿತಿ ಉಂಟಾಗಿದೆ. ನಗರಸಭೆ ಅಧಿಕಾರಿಗಳು ಇದರತ್ತ ಗಮನಹರಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. ಇಲ್ಲಿಯ ಚರಂಡಿಗಳು ತುಂಬಿ ನಿಂತಿದ್ದರಿಂದ ಬೇಸತ್ತು ಸಾರ್ವಜನಿಕರೇ ಚರಂಡಿಗಳನ್ನು ಸ್ವಚ್ಛಗೊಳಿಸಿ ಅದರಲ್ಲಿ ಇರುವ ಹೂಳು ಬೇರೆ ಕಡೆಗೆ ಸಾಗಿಸುತ್ತಿದ್ದೇವೆ ಎಂದು ಸ್ಥಳೀಯರು ನಗರಸಭೆ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತ ಪಡಿಸಿದ್ದಾರೆ.

ವಿಷ್ಣುಸೇನಾ ಸಂಘಟ ನೆಯ ತಾಲೂಕ ಅಧ್ಯಕ್ಷ ಮಲ್ಲು ವಿಷ್ಣುಸೇನಾ ಈ ಕುರಿತು ಬೇಸರ ವ್ಯಕ್ತಪಡಿಸಿ, ನಗರಸಭೆ ಅಧಿಕಾರಿಗಳು ಕೂಡಲೇ ಈ ಸ್ಥಳಕ್ಕೆ ಭೇಟಿ ನೀಡಿ ಸ್ವಚ್ಛತೆಗೆ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರೇ ಚರಂಡಿ ಸ್ವಚ್ಛ ಗೊಳಿಸುತ್ತಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ. ದುರ್ವಾಸನೆ ಬೀರುತ್ತಿರುವುದರಿಂದ ಸಾಂಕ್ರಮಿಕ ರೋಗಗಳ ಭೀತಿಯು ಸಾರ್ವಜನಿ ಕರನ್ನು ಕಾಡುತ್ತಿದೆ. ಅಧಿಕಾರಿಗಳು ಇನ್ನಾದರೂ ಸ್ವಚ್ಛತೆಗೆ ಕ್ರಮ ಕೈಗೊಳ್ಳ ಬೇಕು ಎಂದು ಆಗ್ರಹಿಸಿದ್ದಾರೆ.

ಜೀವನಶೈಲಿ ಕಾಯಿಲೆಗಳಿಗೆ ಹೋಮಿಯೋಪತಿ ಸಮಗ್ರ ಪರಿಹಾರ

-ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್

ಬೆಂಗಳೂರು,ಮೇ 06-

ಭಾರತದಲ್ಲಿ ಹೋಮಿಯೋಪತಿ ಒಂದು ಶಕ್ತಿಶಾಲಿ ಮತ್ತು ಜನಪ್ರಿಯ ವೈದ್ಯಕೀಯ ಪದ್ಧತಿಯಾಗಿ ಸ್ಥಾಪಿಸಿಕೊಳ್ಳುತ್ತಿದೆ. ದೇಶಾದ್ಯಂತ ಲಕ್ಷಾಂತರ ಜನರು ಈ ಪದ್ಧತಿಯಿಂದ ಪ್ರಯೋಜನ ಪಡೆಯುತ್ತಿದ್ದಾರೆ. ಭಾರತ ಸರ್ಕಾರದ ಆಯು ಸಚಿವಾಲಯವು ಈ ದಿಕ್ಕಿನಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸುತ್ತಿದ್ದು, ಇಂದಿನ ಜೀವನಶೈಲಿ ಕಾಯಿಲೆಗಳಿಗೆ ಹೋಮಿ ಯೋಪತಿ ಸಮಗ್ರ ಪರಿಹಾರವಾಗಿದೆ ಎಂದು ಗೌರವಾನ್ವಿತ ರಾಜ್ಯಪಾಲ ರಾದ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ಹೋಮಿಯೋಪತಿ ಫೌಂಡೇಶನ್ ಮತ್ತು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ ಸಹಯೋಗದಲ್ಲಿ ಆಯೋಜಿಸಿದ್ದ ಕರ್ನಾಟಕ ''ವಿಶ್ವ ಹೋಮಿಯೋಪತಿ ದಿನ 2026'' ಆಚರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕರ್ನಾಟಕ ರಾಜ್ಯದಲ್ಲಿ ಉತ್ತಮ ಗುಣಮಟ್ಟದ ವೈದ್ಯಕೀಯ ಶಿಕ್ಷಣ, ಸಮರ್ಪಿತ ವೈದ್ಯರು ಮತ್ತು ಸಂಶೋಧನಾ-ಆಧಾರಿತ ವಿಧಾನವು ಹೋಮಿಯೋಪತಿಯ ಬೆಳವಣಿಗೆಗೆ ಸಹಕಾರ ನೀಡುತ್ತಿದೆ ಎಂದರು.

ವಿಶ್ವ ಹೋಮಿಯೋಪತಿ ದಿನವನ್ನು ಪ್ರತಿ ವರ್ಷ ಏಪ್ರಿಲ್ 10 ರಂದು ಆಚರಿಸಲಾಗುತ್ತದೆ. ಇದು ಲಕ್ಷಾಂತರ ಜನರನ್ನು ತಲೆಮಾರುಗಳಿಂದ ಬೆಂಬಲಿಸಿರುವ ಮತ್ತು



ಆರೋಗ್ಯ ಗುಣಪಡಿಸುವಿಕೆಗೆ ಸೌಮ್ಯ ಮತ್ತು ಸಮಗ್ರ ವಿಧಾನವನ್ನು ನೀಡುವ ವೈದ್ಯಕೀಯ ವ್ಯವಸ್ಥೆಯನ್ನು ಪ್ರತಿಬಿಂಬಿಸುವ ದಿನವಾಗಿದೆ. ವಿಶ್ವ ಹೋಮಿಯೋಪತಿ ದಿನವನ್ನು ಮಹಾನ್ ವೈದ್ಯ ಡಾ. ಸ್ಯಾಮ್ಯುಯೆಲ್ ಹ್ಯಾನೆಮನ್ ಅವರ ಜನ್ಮ ವಾರ್ಷಿಕೋತ್ಸವವನ್ನು ಗುರುತಿಸಲು ಆಚರಿಸಲಾಗುತ್ತದೆ. ಅವರು ರೋಗಗಳ ಚಿಕಿತ್ಸೆಗೆ ಸೀಮಿತವಾಗಿರದೆ, ರೋಗಿಯ ದೇಹ, ಮನಸ್ಸು ಮತ್ತು ಆತ್ಮದ ಸಮ ತೋಲನಕ್ಕೆ ಪ್ರಾಮುಖ್ಯತೆಯನ್ನು ನೀಡುವ ವೈದ್ಯಕೀಯ ವ್ಯವಸ್ಥೆಯನ್ನು ನೀಡಿದರು. ಹೋಮಿಯೋಪತಿಯ ಮೂಲಭೂತ ತತ್ವವೆಂದರೆ ಚಿಕಿತ್ಸೆಯ ಹಾಗೆ ರೋಗಗಳಿಗೂ ಪರಿಹಾರಗಳು ಪ್ರಕೃತಿಯಲ್ಲೇ ಇವೆ ಎಂಬುದನ್ನು ಕಲಿಸುತ್ತದೆ ಎಂದು ಹೇಳಿದರು.

ಸಣ್ಣ ಪ್ರಮಾಣದಲ್ಲಿ ನೀಡಲಾಗುವ ಔಷಧಿಗಳು ದೇಹದ ನೈಸರ್ಗಿಕ ರೋಗನಿರೋಧಕ ಶಕ್ತಿಯನ್ನು ಜಾಗೃತಗೊಳಿಸುತ್ತವೆ ಮತ್ತು ಅದು ತನ್ನನ್ನು ತಾನೇ ಗುಣಪಡಿಸಿಕೊಳ್ಳಲು ಉತ್ತೇಜಿಸುತ್ತವೆ. ಇಂದಿಗೂ, ವೈದ್ಯಕೀಯ ವಿಜ್ಞಾನವು ಬಹಳ ಮುಂದುವರಿದಿದ್ದರೂ, ಜೀವನಶೈಲಿ ಕಾಯಿಲೆಗಳು, ಮಾನಸಿಕ ಒತ್ತಡ ಮತ್ತು ದೀರ್ಘಕಾಲದ ಕಾಯಿಲೆಗಳು ಹೆಚ್ಚುತ್ತಿವೆ. ಅಂತಹ ಸಮಯದಲ್ಲಿ, ಹೋಮಿಯೋಪತಿಯ ಸಮಗ್ರ ವಿಧಾನವು ಸಮತೋಲಿತ ಮತ್ತು ಶಾಶ್ವತ ಆರೋಗ್ಯದ ಕಡೆಗೆ ನಮ್ಮನ್ನು ಕರೆದೊಯ್ಯುತ್ತದೆ ಎಂದು ತಿಳಿಸಿದರು. ''ಸುಸ್ಥಿರ ಆರೋಗ್ಯಕ್ಕಾಗಿ ಹೋಮಿ ಯೋಪತಿ'' ಈ ವರ್ಷದ ಧ್ಯೇಯ ವಾಕ್ಯವು ಅತ್ಯಂತ ಅರ್ಥಪೂರ್ಣ ಮತ್ತು ಸಮಯೋಚಿತವಾಗಿದೆ. ಸುಸ್ಥಿರ ಆರೋಗ್ಯ ಎಂದರೆ ಕೇವಲ ರೋಗದಿಂದ ಮುಕ್ತಿ ಎಂದಲ್ಲ, ಬದಲಾಗಿ ದೀರ್ಘಕಾಲೀನ, ಪರಿಸರ ಸ್ನೇಹಿ ಮತ್ತು ಎಲ್ಲರಿಗೂ ಪ್ರವೇಶಿಸಬಹುದಾದ ಆರೋಗ್ಯ. ಈ ವಿಷಯದಲ್ಲಿ ಹೋಮಿಯೋಪತಿ ಒಂದು ಆದರ್ಶ ವ್ಯವಸ್ಥೆಯಾಗಿದೆ. ಏಕೆಂದರೆ ಅದು ಕೈಗೆಟಕಲಿದೆ. ವ್ಯಕ್ತಿ ಕೇಂದ್ರಿತ ಚಿಕಿತ್ಸೆಯನ್ನು ಒದಗಿಸುತ್ತದೆ. ಇದು ನೈಸರ್ಗಿಕ ಸಂಪನ್ಮೂಲಗಳ ಸಮತೋಲಿತ ಬಳಕೆಯನ್ನು ಉತ್ತೇಜಿಸುತ್ತದೆ. ಯಾವುದೇ ವೈದ್ಯಕೀಯ ವ್ಯವಸ್ಥೆಯ ಪ್ರಸ್ತುತತೆ ನಿರಂತರ ಸಂಶೋಧನೆ ಮತ್ತು ನಾವೀನ್ಯತೆಯನ್ನು ಅವಲಂಬಿಸಿರುತ್ತದೆ. ಇಂದು, ಹೋಮಿಯೋಪತಿಯಲ್ಲಿ ವೈದ್ಯಕೀಯ ಸಂಶೋಧನೆಯನ್ನು ಉತ್ತೇಜಿಸುವ, ಆಧುನಿಕ ತಂತ್ರಜ್ಞಾನಗಳನ್ನು - ಡಿಜಿಟಲ್ ಆರೋಗ್ಯ ಮತ್ತು ಕೃತಕ ಬುದ್ಧಿಮತ್ತೆ - ಬಳಸಿಕೊಳ್ಳುವ ಮತ್ತು ಅದರ ಫಲಿತಾಂಶಗಳನ್ನು ಜಾಗತಿಕ ವೇದಿಕೆಯಲ್ಲಿ ಪ್ರಸ್ತುತಪಡಿಸುವ ಅವಶ್ಯಕತೆಯಿದೆ. ಇದು ಅದರ ವಿಶ್ವಾಸಾರ್ಹತೆಯನ್ನು ಹೆಚ್ಚಿಸುತ್ತದೆ ಮತ್ತು ಜಾಗತಿಕ ಆರೋಗ್ಯ ವ್ಯವಸ್ಥೆಯಲ್ಲಿ ಹೆಚ್ಚು ಬಲವಾದ ಸ್ಥಾನವನ್ನು ಪಡೆಯಲು ಅನುವು ಮಾಡಿಕೊಡುತ್ತದೆ ಎಂದು ಅಭಿಪ್ರಾಯಪಟ್ಟರು.

ಹೊಮಿಯೋಪತಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳೇ ಈ ಕ್ಷೇತ್ರದ ಭವಿಷ್ಯ. ಸಾಂಪ್ರದಾಯಿಕ ಜ್ಞಾನವನ್ನು ಆಧುನಿಕ ವಿಜ್ಞಾನದೊಂದಿಗೆ ಸಂಯೋಜಿಸಲು, ಸಂಶೋಧನೆಯಲ್ಲಿ ಹೊಸ ನೆಲೆಯನ್ನು ಕಂಡುಕೊಳ್ಳಲು ಮತ್ತು ಹೋಮಿಯೋಪತಿಯನ್ನು ಜಾಗತಿಕ ಮನ್ನಣೆಗೆ ತರಲು ನಿಮಗೆ ಅವಕಾಶವಿದೆ. ನಿಮ್ಮ ಶಕ್ತಿ, ನಿಮ್ಮ ಕುತೂಹಲ ಮತ್ತು ನಿಮ್ಮ ಬದ್ಧತೆಯು ಈ ಅಭ್ಯಾಸವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುತ್ತದೆ. ಇಂದು ಸಮಗ್ರ ಆರೋಗ್ಯ ರಕ್ಷಣೆಯ ಯುಗ, ಅಲ್ಲಿ ವಿವಿಧ ವೈದ್ಯಕೀಯ ವ್ಯವಸ್ಥೆಗಳು ಮಾನವೀಯತೆಗೆ ಸೇವೆ ಸಲ್ಲಿಸಲು ಒಗ್ಗೂಡುತ್ತವೆ. ಹೋಮಿಯೋಪತಿಯು ಈ ಸಮಗ್ರ ವಿಧಾನದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಏಕೆಂದರೆ ಇದು ರೋಗದ ಮೂಲ ಕಾರಣವನ್ನು ಪರಿಹರಿಸುತ್ತದೆ. ವ್ಯಕ್ತಿಯ ಒಟ್ಟಾರೆ ಜೀವನಶೈಲಿಯನ್ನು ಪರಿಗಣಿಸುತ್ತದೆ ಮತ್ತು ದೀರ್ಘಕಾಲೀನ ಆರೋಗ್ಯವನ್ನು ಖಚಿತಪಡಿಸುತ್ತದೆ. ಆರೋಗ್ಯವು ಕೇವಲ ವೈಯಕ್ತಿಕ ವಿಷಯವಲ್ಲ; ಅದು ಸಾಮಾಜಿಕ ಜವಾಬ್ದಾರಿಯೂ ಆಗಿದೆ. ನಾವು ಒಟ್ಟಾಗಿ, ಗ್ರಾಮೀಣ ಮತ್ತು ದೂರದ ಪ್ರದೇಶಗಳಲ್ಲಿ ಹೋಮಿಯೋಪತಿಯ ವ್ಯಾಪ್ತಿಯನ್ನು ವಿಸ್ತರಿಸಬೇಕು. ಸಾರ್ವಜನಿಕ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಮತ್ತು ಸಮಾಜದ ಪ್ರತಿಯೊಂದು ವರ್ಗಕ್ಕೂ ಕೈಗೆಟುಕುವ ಮತ್ತು ಪರಿಣಾಮಕಾರಿ ಚಿಕಿತ್ಸೆಯನ್ನು ಲಭ್ಯವಾಗುವಂತೆ ಮಾಡಬೇಕು ಎಂದು ಕರೆ ನೀಡಿದರು. ಬೆಂಗಳೂರಿನ ಹೋಮಿಯೋಪತಿ ಫೌಂಡೇಶನ್ ಮತ್ತು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯವು ಶಿಕ್ಷಣ, ಸಂಶೋಧನೆ ಮತ್ತು ಸಾರ್ವಜನಿಕ ಜಾಗೃತಿ ಕ್ಷೇತ್ರದಲ್ಲಿ ಮಹತ್ವದ ಕೆಲಸ ಮಾಡುತ್ತಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿದ ಅವರು, ವೈದ್ಯಕೀಯ ಪದ್ಧತಿಯ ಜೊತೆಗೆ, ಹೋಮಿಯೋಪತಿಯು ಜೀವನದ ತತ್ವಶಾಸ್ತ್ರವೂ ಆಗಿದೆ, ಇದು ಪ್ರಕೃತಿಯೊಂದಿಗೆ ಸಮತೋಲನವನ್ನು ಕಾಪಾಡಿಕೊಳ್ಳುವ ಮೂಲಕ ನಮ್ಮನ್ನು ಆರೋಗ್ಯವಾಗಿರಲು ಪ್ರೇರೇಪಿ ಸುತ್ತದೆ ಎಂದು ಹೇಳಿದರು. ಸಮಾರಂಭದಲ್ಲಿ ಸಿ.ಕೆ. ರಾಮಮೂರ್ತಿ, ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೊಹ್ಸಿನ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ ಕುಲಪತಿ ಡಾ. ಬಿ.ಸಿ. ಭಗವಾನ್, ಕರ್ನಾಟಕ ಹೋಮಿಯೋಪತಿ ಮಂಡಳಿ ಅಧ್ಯಕ್ಷರಾದ ನಾಡೋಜ ಡಾ. ಬಿ.ಟಿ. ರುದ್ರೇಶ್, ವಿಶ್ವವಿದ್ಯಾಲಯದ ರಿಜಿಸ್ಟ್ರಾರ್ ಅರ್ಜುನ್ ಒಡ್ಯೆರ್ ಸೇರಿದಂತೆ ಮುಂತಾದ ಗಣ್ಯರು ಉಪಸ್ಥಿತರಿದ್ದರು.

ಹುಲಿಗಿ ಜಾತ್ರಾ ಅವಧಿಯಲ್ಲಿ ಹೆಚ್ಚು ಬಸ್‌ಗಳ ವ್ಯವಸ್ಥೆ ಮಾಡಿ, ಅಗ್ನಿಶಾಮಕ ವಾಹನ ಕಾಯ್ದಿರಿಸಿ: ಡಾ. ಸುರೇಶ ಬಿ. ಇಟ್ನಾಳ

ಕೊಪ್ಪಳ ಮೇ 06

ಶ್ರೀ ಕ್ಷೇತ್ರ ಹುಲಿಗಿಯ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ 2026ರ ವಾರ್ಷಿಕ ಜಾತ್ರಾ ಅವಧಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬಸ್‌ಗಳ ವ್ಯವಸ್ಥೆ ಮಾಡಬೇಕು ಮತ್ತು ಜಾತ್ರಾ ಸಮಯದಲ್ಲಿ ಅಗ್ನಿಶಾಮಕ ವಾಹನವನ್ನು ಕ್ಷೇತ್ರದಲ್ಲಿ ಕಾಯ್ದಿರಿಸುವಂತೆ ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಹುಲಿಗಿ ಜಾತ್ರೆಯ ಪ್ರಯುಕ್ತ ಸಾಕಷ್ಟು ಸಂಖ್ಯೆಯಲ್ಲಿ ಭಕ್ತಾದಿಗಳು ರಾಜ್ಯದ ವಿವಿಧ ಭಾಗಗಳಿಂದ ಕ್ಷೇತ್ರಕ್ಕೆ ಬರುತ್ತಿದ್ದು, ಭಕ್ತರ ಅನುಕೂಲಕ್ಕಾಗಿ ಬಂದು ಹೋಗಲು ಹೆಚ್ಚುವರಿ ಬಸ್ಸುಗಳನ್ನು ಸಂಚಾರಕ್ಕೆ ಒದಗಿಸಲು ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯ ಕೊಪ್ಪಳ, ಹೊಸಪೇಟೆ, ಕುಷ್ಟಗಿ



ಗಂಗಾವತಿ, ಡಿಪೋಗಳ ವ್ಯವಸ್ಥಾಪಕರು ಅಗತ್ಯ ಕ್ರಮ ಕೈಗೊಳ್ಳಬೇಕು. ಭಕ್ತರ ಪ್ರಮಾಣಕ್ಕೆ ಯಾವುದೇ ರೀತಿಯ ಅನಾನುಕೂಲತೆ ಆಗದಂತೆ ಹೆಚ್ಚಿನ ಸಂಖ್ಯೆಯ ಬಸ್ಸುಗಳನ್ನು ಬಿಡುವ ಬಗ್ಗೆ ಇತ್ತೀಚೆಗೆ ನಡೆದ ಸಭೆಯಲ್ಲಿ ನಿರ್ಣಯಿಸಲಾಗಿದೆ. ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ಬಸ್‌ಗಳ ನಿಲುಗಡೆ ಸ್ಥಳ ಗುರುತಿಸಲು ಸಹ ಕ್ರಮ ವಹಿಸುವಂತೆ ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಕೊಪ್ಪಳ ವಿಭಾಗದ ವಿಭಾಗೀಯ ನಿಯಂತ್ರಕರು ಮತ್ತು ಇತರೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಾತ್ರಾ ಅವಧಿಯಲ್ಲಿ ಅಗ್ನಿಶಾಮಕ ವಾಹನ ಕಾಯ್ದಿರಿಸಿ: ಜಾತ್ರಾ ಅವಧಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಹಾಗೂ ವಾಹನಗಳು ಬರುವುದರಿಂದ ಹಾಗೂ ವಿವಿಧ ರೀತಿಯ ಅಂಗಡಿಗಳು ಜಾತ್ರಾ ಅವಧಿಯಲ್ಲಿ ಹಾಕುವುದರಿಂದ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಮೇ 10 ರಿಂದ 14ರ ವರೆಗೆ ನದಿತೀರದಲ್ಲಿ ಬೋಟ್, ರೋಪ್ ಹಾಗೂ ಒಂದು ಅಗ್ನಿಶಾಮಕ ವಾಹನವನ್ನು ಜಾತ್ರಾ ಅವಧಿಯಲ್ಲಿ ಕಾಯ್ದಿರಿಸಲು ಅಗ್ನಿಶಾಮಕ ಅಧಿಕಾರಿಗಳಿಗೆ ಕ್ರಮ ವಹಿಸಬೇಕು. ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.

ದೇಸಾಯಿ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗಾಗಿ ಕನ್ನಡದ ಕೋಟ್ಯಾಧಿಪತಿ ವಿಶೇಷ ಕಾರ್ಯಕ್ರಮ

ಕಲಬುರಗಿ,ಮೇ.06-

ವಿದ್ಯಾರ್ಥಿಗಳ ಜ್ಞಾನಾಭಿವೃದ್ಧಿ, ಚಿಂತನಾ ಶಕ್ತಿ ವೃದ್ಧಿ ಹಾಗೂ ಮನರಂಜನೆಗೆ ಉತ್ತೇಜನ ನೀಡುವ ಉದ್ದೇಶದಿಂದ ಎಂ.ಎನ್. ದೇಸಾಯಿ ಪದವಿ ಮಹಾವಿದ್ಯಾಲಯ ವತಿಯಿಂದ ವಿಶೇಷ ಕನ್ನಡದ ಕೋಟ್ಯಾಧಿಪತಿ ಕಾರ್ಯಕ್ರಮವನ್ನು ಮಹಾವಿದ್ಯಾಲಯದಲ್ಲಿ ಅದ್ದೂರಿಯಾಗಿ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ದಿ.ಪುನಿತ್ ರಾಜಕುಮಾರ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಚಾಲನೆ ನೀಡಲಾಯಿತು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ ತಮ್ಮ ಪ್ರತಿಭೆ, ಜ್ಞಾನ ಹಾಗೂ ಚಾತುರ್ಯವನ್ನು ಪ್ರದರ್ಶಿಸಿದರು.

ಪ್ರಶ್ನೋತ್ತರ ಸ್ಪರ್ಧೆಯ ಮಾದರಿಯಲ್ಲಿ ನಡೆದ ಈ ವಿಶೇಷ ಕಾರ್ಯಕ್ರಮದಲ್ಲಿ ವಿಜೇತರಾಗಿ ಹೊರಹೊಮ್ಮಿದ ವಿದ್ಯಾರ್ಥಿಗಳಿಗೆ ಆಕರ್ಷಕ ಬಹುಮಾನಗಳನ್ನು ವಿತರಿಸಿ ಪ್ರೋತ್ಸಾಹಿಸಲಾಯಿತು.

ಈ ಸಂದರ್ಭದಲ್ಲಿ ಕಾಲೇಜಿನ ಕಾರ್ಯದರ್ಶಿ ಜಗನ್ನಾಥ ನಾಗೂರ, ಕಾಲೇಜಿನ ಅಧ್ಯಕ್ಷ ಸಂದೀಪ್ ದೇಸಾಯಿ, ಮಂಜುನಾಥ್ ಬನ್ನೂರ್, ಅಮರ್ ಹಾಗರಗಿ, ನಾಗರಾಜ್ ಪಟ್ಟಣಕರ, ಶಿವಶರಣಪ್ಪ ಪೂಜಾರಿ, ರೇವಣಸಿದ್ದಪ್ಪ ಹೂಗಾರ್, ಶ್ರೀದೇವಿ ಹಿರೇಮಠ, ಗುರುವಾಯಿ ವಾಡಿ, ಅಂಬಿಕಾ ಪಟ್ಟೆ, ರಾಧಿಕಾ ಗುತ್ತೇದಾರ್, ರೇಷ್ಮಾ ರಾಥೋಡ್, ಚೆನ್ನಮ್ಮ ಮೇಡಂ, ಜ್ಯೋತಿ ಹಂಗರಗಿ, ಶಿಲ್ಪಾ ಶೆಟ್ಟಿ, ಗೀತಾ ಇಂಗಿನ, ಸಂತೋಷ್ ಲರ್ಸ್ಕರ್, ಕಾಶಿಬಾಯಿ ವಗ್ಗೆ ಸೇರಿದಂತೆ ಕಾಲೇಜಿನ ಎಲ್ಲಾ ಸಿಬ್ಬಂದಿ ವರ್ಗ ಹಾಗೂ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಿಗೆ ಶೂನ್ಯ ನೆರಳು ದಿನ ಕಾರ್ಯಕ್ರಮ



ಬಾಗಲಕೋಟೆ, ಮೇ 06

ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ, ಹಾಗೂ ಬ್ರಿಲಿಯಂಟ್ ಅಕಾಡೆಮಿ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ ಶೂನ್ಯ ನೆರಳು ದಿನದ ಕಾರ್ಯಕ್ರಮವನ್ನು ಬ್ರಿಲಿಯಂಟ್ ಅಕಾಡೆಮಿಯ ಕಾರ್ಯದರ್ಶಿ ಆನಂದ ರಾಠೋಡ ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಮಾತನಾಡಿದ ಆನಂದ ರಾಠೋಡ ಅವರು ಶೂನ್ಯ ನೆರಳಿನ ದಿನದ ಬಗ್ಗೆ ಸಂಪನ್ಮೂಲ ವ್ಯಕ್ತಿಗಳು ತಿಳಿಸುವ ಮಾಹಿತಿಯನ್ನು ವಿದ್ಯಾರ್ಥಿಗಳು ವಿವರವಾಗಿ ತಿಳಿದುಕೊಂಡು ಖಗೋಳ ವಿಜ್ಞಾನದಲ್ಲಿ ಆಸಕ್ತಿಯನ್ನು ಹೆಚ್ಚಿಸಿಕೊಳ್ಳಬೇಕೆಂದು ಕರೆ ನೀಡಿದರು. ಸದರಿ ಕಾರ್ಯಕ್ರಮದ ತಮ್ಮ ವಿದ್ಯಾ ಸಂಸ್ಥೆಯನ್ನು ಆಯ್ಕೆ ಮಾಡಿಕೊಂಡಿದ್ದಕ್ಕಾಗಿ ಕೇಂದ್ರದ ಸಿಬ್ಬಂದಿಗಳಿಗೆ ಧನ್ಯವಾದಗಳನ್ನು ಸಲ್ಲಿಸಿದರು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ವಿಜಯಕುಮಾರ ಕೆ, ವಿಜ್ಞಾನ ಶಿಕ್ಷಕರು, ಶಂಕ್ರಪ್ಪ ಸಕ್ರಿ ಪ್ರೌಢಶಾಲೆ, ಬಾಗಲಕೋಟೆ ರವರು ಮಾತನಾಡಿ ಶೂನ್ಯ ನೆರಳಿನ ದಿನದ ಸ್ವಾರಸ್ಯಕರ ಮಾಹಿತಿಗಳನ್ನು ವಿವರವಾಗಿ ತಿಳಿಸಿದರು. ಅದರಂತೆ, ಖಗೋಳ ವಿಜ್ಞಾನಕ್ಕೆ ಸಂಬಂಧಿಸಿದಂತೆ ವಿವಿಧ ಆಕಾಶ ಕಾಯಗಳು, ನಕ್ಷತ್ರ ಪುಂಜಗಳ ಅಧ್ಯಯನದ ಬಗ್ಗೆ ಅರ್ಥೈಹಿಸಿದರು. ಕಾರ್ಯಕ್ರಮದಲ್ಲಿ ಒಟ್ಟು 64 ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಸೂರ್ಯನ ಚಲನೆಯನ್ನು ವಿಶೇಷ ಸೂರ್ಯ ಮಸೂರಗಳನ್ನು ಬಳಸಿಕೊಂಡು ನೋಡಲಾಯಿತು.

ಒಂದನೇಯ ಪುಟದಿಂದ

ಕನ್ನಡ ಸಾಹಿತ್ಯ ಪರಿಷತ್ತು ಕನ್ನಡಿಗರ ಒಗ್ಗಟ್ಟು, ಆಸ್ಮಿತೆ ಸಂಕೇತ : ಡಾ.ಅಂಬಿಕಾ

ನಡೆಸುತ್ತಿದ್ದಾರೆ ಮತ್ತು ನೀರಮಾನ್ವಿಯಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಿ ನಡೆಸಿಕೊಟ್ಟಿರುವುದು ಸೇರಿದಂತೆ

ಶಾಲಾ ವಿದ್ಯಾರ್ಥಿಗಳಿಗೆ ಕನ್ನಡ ಸಾಹಿತಿಗಳನ್ನು ಹಾಗೂ ಕನ್ನಡ ಸಾಹಿತ್ಯವನ್ನು ಪರಿಚಯಿಸುವ ಕಾರ್ಯವನ್ನು ಮಾಡುತ್ತಿ ದ್ದಾರೆ. ನಮ್ಮ ಬದುಕಿನ ಭಾಷೆ ಮಾತೃಭಾಷೆ ಕನ್ನಡಕ್ಕೆ ಹೆಚ್ಚಿನ

ಅದ್ಯತೆಯನ್ನು ನೀಡಬೇಕಾಗಿದೆ. ಆಂಗ್ಲ ಮಾಧ್ಯಮ ಶಿಕ್ಷಣ ನಮ್ಮ ವೃತ್ತಿಗೆ ಅನುಕೂಲವಾದರು ಕೂಡಾ ನಮ್ಮ ಮಾತೃಬಾಷೆಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ ಎಂದು ತಿಳಿಸಿದರು.ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಕಸಾಪ ಅಧ್ಯಕ್ಷ ಶರಣಬಸವ ನೀರಮಾನ್ವಿ, ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ತಾಯಪ್ಪ ಬಿ ಹೊಸೂರು ಮಾತನಾಡಿದರು. ಪತ್ರಕರ್ತ ಬಸವರಾಜ ಭೋಗಾವತಿ ವಿಶೇಷ ಉಪನ್ಯಾಸ ನೀಡಿ ದರು.ಸನ್ಮಾನ : ನಿವೃತ್ತ ಯೋಧ ಆಂಜನೇ ಯನಾಯಕ ಹಾಗೂ ಹತ್ತನೇ ತರಗತಿಯ ಕನ್ನಡ ವಿಷಯದಲ್ಲಿ 125 ಅಂಕಗಳನ್ನು ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾ ಯಿತು.ಈ ಸಂದರ್ಭದಲ್ಲಿ ಕಸಾಪ ಹೋಬಳಿ ಘಟಕದ ಅಧ್ಯಕ್ಷ ಹನುಮಂತಪ್ಪ ಕೊಟ್ನೆಕಲ್, ಬಿ.ವಿ.ರೆಡ್ಡಿ, ಡಾ.ಸೈಯದ್ ಮುಜೀಬ್ ಅಹ್ಮದ್, ಪತ್ರಕರ್ತ ಸಂಘದ ತಾಲೂಕ ಅಧ್ಯಕ್ಷ ಆಶೋಕ ತಡಕಲ್, ಗೋವಿಂದರಾಜ್ ವಕೀಲ, ಯಂಕಣ್ಣಯಾದವ್, ರಾಮು ಹೊಳೆಯಪ್ಪನವ್ರ, ಜಿ.ಎಸ್.ಬಾಲಾ ಜಿಸಿಂಗ್, ಡಾ.ಚನ್ನಬಸವ ಮಾಡಗಿರಿ, ಮಹಾಂತೇಶ ಗವಿಗಟ್‌ಸೇರಿದಂತೆ ಇನ್ನಿತರ'ರಿದ್ದರು. ಕಸಾಪ ಪ್ರಧಾನಕಾರ್ಯದರ್ಶಿ ಲಕ್ಷ್ಮಣ್ ಜಾನೇಕಲ್ ಪ್ರಾಸ್ತಾವಿಕ ನುಡಿಗಳ ನ್ನಾಡಿದರು ರಾಮು ಹೊಳೆಯಪ್ಪನವರ್ ಪ್ರಾರ್ಥಿಸಿದರು ಪ್ರಾಧ್ಯಾಪಕ ಡಾ.ಚನ್ನಬಸವ ಮಾಡಗಿರಿ ನಿರೂಪಿಸಿದರು ಮಂಜುನಾಥ ಕಮತರ ವಂದಿಸಿದರು.

ರಾಯಚೂರು ಜಿಲ್ಲಾಧಿಕಾರಿಯಾಗಿ ಪೂವಿತಾ ಎಸ್. ನೇಮಕ: ಹೈನುಗಾರನ ಮಗಳಿಂದ ಐಎಎಸ್‌ವರೆಗಿನ ಸ್ಫೂರ್ತಿದಾಯಕ ಪಯಣ

ಸಂಪಾದಿಸಿದ್ದಾರೆ.

ಭೂ ಕಂದಾಯ, ಸ್ಥಳೀಯ ಸ್ವ-ಆಡಳಿತ, ಸಿಬ್ಬಂದಿ ಮತ್ತು ಸಾಮಾನ್ಯ ಆಡಳಿತ ಕ್ಷೇತ್ರಗಳಲ್ಲಿ ಪರಿಣತಿ ಹೊಂದಿರುವ ಅವರು, 2025ರ ಆರಂಭದಲ್ಲಿ ಮುಖ್ಯ ಕಾರ್ಯದರ್ಶಿಗಳ ವಿಶೇಷ ಅಧಿಕಾರಿ ಹಾಗೂ ವಿಶೇಷ ನಗರ ಮೂಲಸೌಕರ್ಯ ನಿರ್ವಹಣಾ ಹುದ್ದೆಗೆ ನಿಯೋಜನೆಗೊಂಡಿದ್ದರು.

ಈಗ ರಾಯಚೂರು ಜಿಲ್ಲೆಯ ಜಿಲ್ಲಾಧಿಕಾರಿಯಾಗಿ ನೇಮಕಗೊಂಡಿರುವ ಪೂವಿತಾ ಎಸ್., ಜಿಲ್ಲೆಯ ಅಭಿವೃದ್ಧಿ ಮತ್ತು ಆಡಳಿತ ಸುಧಾರಣೆಗೆ ಹೊಸ ದಿಕ್ಕು ನೀಡುವ ನಿರೀಕ್ಷೆ ಮೂಡಿಸಿದ್ದಾರೆ. ಅವರ ಜೀವನ ಪಯಣವು ಅನೇಕ ಯುವಕರಿಗೆ ಪ್ರೇರಣೆಯಾಗಿದ್ದು, ಸಂಕಷ್ಟಗಳ ನಡುವೆ ಸಾಧನೆ ಮಾಡುವ ಮನೋಬಲಕ್ಕೆ ಮಾದರಿಯಾಗಿದೆ.

ಕ. ಸಾ. ಪರಿಷತ್ 112 ನೇ ಸಂಸ್ಥಾಪನೆ ದಿನಾಚರಣೆ 21 ವಿದ್ಯಾರ್ಥಿಗಳಿಗೆ ಸನ್ಮಾನ. ಕನ್ನಡ ಭಾಷೆ ಎಲ್ಲಾ ಲಿಪಿಗಳ ರಾಣಿಯಾಗಿದೆ : ಚನ್ನಬಸವ

ನಮ್ಮೆಲ್ಲರ ಅಸ್ಮಿತೆಯಾಗಿದ್ದು ಸರಕಾರಗಳು ಕನ್ನಡ ಶಾಲೆಗಳನ್ನು ಉಳಿಸುವುದು ಬೆಳೆಸುವುದು ಆದ್ಯತೆ ನೀಡಬೇಕು. ಕನ್ನಡ ಭಾಷೆಯನ್ನು ಉಳಿಸುವುದು ಬೆಳೆಸುವುದು ನಮ್ಮೆಲ್ಲರ ಕರ್ತವ್ಯವಾಗಿದ್ದು ನಾಡು ನುಡಿ ಭಾಷೆ ಗಡಿ ಸಮಸ್ಯೆ ಬಂದಾಗ ಕನ್ನಡಿಗರಾದ

ನಾವು ರಕ್ಷಣೆಗೆ ಮುಂದಾಗಬೇಕೆಂದರು. ಆದರೆ ಇಂದಿನ ವಿದ್ಯಾರ್ಥಿಗಳು ಕನ್ನಡ ವಿಷಯದಲ್ಲಿ ಅನುತೀರ್ಣರಾಗುತ್ತಿರುವುದು ದುಃಖದ ಸಂಗತಿಯಾಗಿದೆ ಎಂದರು.

ಈ ಸಂದರ್ಭದಲ್ಲಿ 2025-26 ನೇ ಸಾಲಿನಲ್ಲಿ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಕನ್ನಡ ಭಾಷೆಯಲ್ಲಿ 125 ಕ್ಕೆ 125 ಅಂಕ ಪಡೆದ ವಿದ್ಯಾರ್ಥಿಗಳಿಗೆ ಮತ್ತು ದ್ವಿತೀಯ ಪಿಯುಸಿಯಲ್ಲಿ ನೂರಕ್ಕೆ ನೂರು ಅಂಕ ಪಡೆದ 21 ವಿದ್ಯಾರ್ಥಿಗಳಿಗೆ ಸನ್ಮಾನ ಮಾಡಲಾಯಿತು.

ಕಾರ್ಯಕ್ರಮವನ್ನು ಜೆ ಶರಣಪ್ಪ ಗೌಡ ಉದ್ಘಾಟಿಸಿದರು. ಗೌರವ ಉಪಸ್ಥಿತಿ ಕಸಾಪ ಸಿರವಾರ ತಾಲೂಕ ಅಧ್ಯಕ್ಷ ಮೌನೇಶ ಹಣಗಿ, ಪ್ರ.ಕಾ. ವೆಂಕಟರೇಡ್ಡಿ ಬಲ್ಲಲ್, ಡಾ.ಅಳ್ಳಪ್ಪ ಸಹ ಕಾರ್ಯದರ್ಶಿ, ನಾಗಪ್ಪ ಪತ್ತಾರ, ಪತ್ರಕರ್ತ ಸಂಘದ ತಾಲೂಕ ಅಧ್ಯಕ್ಷ ಹನುಮೇಶ, ವೆಂಕಟೇಶ ದೊರೆ, ವಿನಾಯಕ ಪಿಯು ಕಾಲೇಜ್ ಪ್ರಾಚಾರ್ಯರಾದ ಸತೀಶ್ ಕುಮಾ್ರ ನಿರುಪಣೆಯನ್ನು ಅಮರೇಶ ದಿನ್ನಿ ಮಾಡಿದರು.

ಅಭಿಮಾನೋತ್ಸವ ಯಶಸ್ಸಿಗೆ ಕಾರ್ಯಕರ್ತರು ಸಕ್ರಿಯರಾಗಬೇಕು: ಪ್ರತಾಪ್ ಗೌಡ ಪಾಟೀಲ್



ಮಸ್ಕಿ,ಮೇ.06-

ಕೋಟೆನಾಡು ಚಿತ್ರದುರ್ಗದಲ್ಲಿ ಇದೇ ತಿಂಗಳ ಮೇ 9ರಂದು ನಡೆಯಲಿರುವ ''ಬಿಎಸ್‌ವೈ ಅಭಿಮಾನೋತ್ಸವ'' ಕಾರ್ಯಕ್ರಮದ ಯಶಸ್ವಿ ಆಯೋಜನೆಗಾಗಿ ಮಸ್ಕಿ ವಿಧಾನಸಭಾ ಕ್ಷೇತ್ರದ ವತಿಯಿಂದ ಪೂರ್ವಭಾವಿ ಸಭೆ ಇಂದು ನಡೆಯಿತು.

ಸಭೆಯಲ್ಲಿ ಕಾರ್ಯಕ್ರಮದ ರೂಪರೇಷೆ ಹಾಗೂ ನಿರ್ವಹಣೆ ಕುರಿತು ಚರ್ಚೆ ನಡೆಸಲಾಗಿದ್ದು,

ವಿವಿಧ ಮೋರ್ಚಾ ಪದಾಧಿಕಾರಿಗಳು ಮತ್ತು ಮಹಾಶಕ್ತಿ ಕೇಂದ್ರಗಳ ಅಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿಗಳ ಪದಗ್ರಹಣ ಕಾರ್ಯಕ್ರಮವೂ ನೆರವೇರಿತು.

ಈ ವೇಳೆ ಮಾತನಾಡಿದ ಮಾಜಿ ಶಾಸಕ ಪ್ರತಾಪ್ ಗೌಡ ಪಾಟೀಲ್, ಬೂತ್ ಮಟ್ಟದಿಂದ ಪಕ್ಷ ಸಂಘಟನೆ ಬಲಪಡಿಸುವ ಅಗತ್ಯವಿದೆ ಎಂದು ತಿಳಿಸಿ, ಕಾರ್ಯಕರ್ತರು ಹಾಗೂ ಮುಖಂಡರು ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಬಿಜೆಪಿ ಮಂಡಲ ಅಧ್ಯಕ್ಷ ಶರಣಬಸವ ಸೊಪ್ಪಿಮಠ ಮಾತನಾಡಿ, ಎಲ್ಲಾ ಮೋರ್ಚಾ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು ಹಾಗೂ ಮಹಾಶಕ್ತಿ ಕೇಂದ್ರದ ಪದಾಧಿಕಾರಿಗಳು ಪ್ರತಿಮಾಸ ಮಂಡಲ, ಶಕ್ತಿ ಕೇಂದ್ರ ಮತ್ತು ಬೂತ್ ಮಟ್ಟದಲ್ಲಿ ನಿಯಮಿತ ಸಭೆಗಳನ್ನು ನಡೆಸಬೇಕು ಎಂದು ಸೂಚಿಸಿದರು.

ಪಕ್ಷ ಸಂಘಟನೆಯಲ್ಲಿ ಚುರುಕಾಗಿ ತೊಡಗಿ, ಪ್ರತಾಪ್ ಗೌಡ ಪಾಟೀಲ್ ಅವರ ಗೆಲುವಿಗೆ ಹಾಗೂ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಸ್ಥಾಪನೆಗೆ ಶ್ರಮಿಸಬೇಕೆಂದು ಅವರು ಹೇಳಿದರು.

ಸಭೆಯಲ್ಲಿ ರಾಜ್ಯ ಕಾರ್ಯಕಾರಿ ಸದಸ್ಯ ಬಸವಂತರಾಯ ಕುರಿ, ಜಿಲ್ಲಾ ಉಪಾಧ್ಯಕ್ಷ ಚಂದ್ರಕಾಂತ್ ಪಾಟೀಲ್ ಗುಗೆಬಾಳ್, ಜಿಲ್ಲಾ ಕಾರ್ಯದರ್ಶಿ ಶಾರದ ರಾಥೋಡ್, ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಬಸವರಾಜ್ ಗುಡಿಹಾಳ ಮತ್ತು ರಮೇಶ್ ಉದ್ಬಾಳ್ ಸೇರಿದಂತೆ ಅನೇಕ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಮಸ್ಕಿ ಮಂಡಲದ ಮಹಾಶಕ್ತಿ ಕೇಂದ್ರಗಳಿಗೆ ಅಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿಗಳ ನೇಮಕಾತಿಯನ್ನೂ ಘೋಷಿಸಲಾಯಿತು.

ಮೇ.11ರಂದು ರಾಯಚೂರಿನ ಐಟಿಐ ಕಾಲೇಜಿನಲ್ಲಿ ಶಿಶಿಕ್ಷ ಮೇಳ

ರಾಯಚೂರು ಮೇ.06 -

2026-27ನೇ ಸಾಲಿನಲ್ಲಿ ಪಿ.ಎಮ್.ಎನ್.ಎ. ಎಮ್ ವತಿಯಿಂದ ನಗರದ ಮಾಣಿಕ ರಾಯಚೂರು ನಗರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಮೇ.11ರ ಬೆಳಿಗ್ಗೆ 10ಗಂಟೆಗೆ ಶಿಶಿಕ್ಷ ಮೇಳವನ್ನು ಹಮ್ಮಿಕೊಳ್ಳಲಾಗಿದ್ದು, ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ. ಈ ಶಿಶಿಕ್ಷ ಮೇಳದಲ್ಲಿ ವಿವಿಧ ಉದ್ದಿಮೆಗಳ ಪ್ರತಿನಿಧಿಗಳು ಭಾಗವಹಿಸುತ್ತಿದ್ದು, ಶಿಶಿಕ್ಷ ತರಬೇತಿಗಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳುತ್ತಿರುವುದರಿಂದ ಐಟಿಐ ದ್ವಿತೀಯ ವರ್ಷದಲ್ಲಿ ತರಬೇತಿ ಪಡೆಯುತ್ತಿರುವ ಹಾಗೂ ಈಗಾಗಲೇ ಐಟಿಐ ಉತ್ತೀರ್ಣರಾದ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ಮೇಳದಲ್ಲಿ ಕೆ.ಪಿ.ಸಿ, ವೈ.ಟಿ.ಪಿ.ಎಸ್, ಟೋಯೋಟಾ, ಹೋಂಡಾ ಪ್ರೈವೇಟ್ ಲಿಮಿಟೆಡ್ ಕೋಲಾರ, ಕೇನ್ಸ ಟೆಕ್ನಾಲಜಿ ಇಂಡಿಯಾ ಲಿಮಿಟೆಡ್, ಎಲ್.ಎನ್.ಟಿ, ಜೆ.ಎಸ್,ಡ್ಬ್ಯೂ ಹಾಗೂ ಬೆಂಗಳೂರು ಮತ್ತು ಹೈದ್ರಾಬಾದ್ ನ ಪ್ರತಿಷ್ಟಿತ ಬಹುರಾಷ್ಟ್ರೀಯ (ಮಲ್ಟಿ ನ್ಯಾಷನಲ್) ಕಂಪನಿಗಳು ಭಾಗವಹಿಸಲಿವೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9036684778, 9035198134, 9538003397, 8904784507ಗೆ ಸಂಪರ್ಕ ಮಾಡಬಹುದಾಗಿದೆ ಅಥವಾ ರಾಯಚೂರು ನಗರದ ಮಾಣಿಕ್ ನಗರದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ ಕಚೇರಿಯ ಸಮಯದಲ್ಲಿ ಭೇಟಿ ನೀಡಿ, ಮಾಹಿತಿ ಪಡೆಯಬಹುದಾಗಿದೆ ಎಂದು ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಸೆಸೆಲ್ಸಿ ಫಲಿತಾಂಶ: ಕಲಬುರಗಿ ಜಿಲ್ಲೆಯ ಸರ್ಕಾರಿ ಶಾಲೆಗಳ ಭರ್ಜರಿ ಸಾಧನೆ : ರಾಜ್ಯ ಸರಾಸರಿಗಿಂತ ಶೇ.9.9 ಹೆಚ್ಚು



ಕಲಬುರಗಿ, ಮೇ 05-

ಜಿಲ್ಲೆಯ ಸರ್ಕಾರಿ ಶಾಲೆಗಳು ಈ ಬಾರಿ ಅತ್ಯುತ್ತಮ ಫಲಿತಾಂಶ ದಾಖಲಿಸುವ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಹೊಸ ಮೈಲಿಗಲ್ಲು ಸ್ಥಾಪಿಸಿವೆ. ಜಿಲ್ಲೆಯು ಒಟ್ಟಾರೆಯಾಗಿ ಶೇ. 85.94 ರಷ್ಟು ಫಲಿತಾಂಶವನ್ನು ಹೊಂದುವ ಮೂಲಕ ರಾಜ್ಯ ಸರಾಸರಿಗಿಂತ ಶೇ. 9.9 ರಷ್ಟು ಅಧಿಕ ಸಾಧನೆ ಮಾಡಿ, ರಾಜ್ಯದಲ್ಲೇ ಅತಿ ಹೆಚ್ಚು ಸುಧಾರಣೆ ಕಂಡ ಎರಡನೇ ಜಿಲ್ಲೆಯಾಗಿ ಕಲಬುರಗಿ ಹೊರ ಹೊಮ್ಮಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭಂವರ್ ಸಿಂಗ್ ಮೀನಾ ತಿಳಿಸಿದ್ದಾರೆ.

ಮಂಗಳವಾರ ನಗರದ ಜಿಲ್ಲಾ ಪಂಚಾಯತ್ ಹೊಸ ಸಭಾಂಗಣದಲ್ಲಿ 2025-26ನೇ ಸಾಲಿನ ಜಿಲ್ಲಾವಾರು ಮತ್ತು ತಾಲೂಕುವಾರು ಪರೀಕ್ಷಾ ಫಲಿತಾಂಶದಲ್ಲಿ ಜಿಲ್ಲೆಯ ಸರಕಾರಿ ಶಾಲೆಗಳು ಫಲಿತಾಂಶದಲ್ಲಿ ಭಾರೀ ಏರಿಕೆ ಕುರಿತು ಎಲ್ಲಾ ಸರಕಾರಿ ಶಾಲೆಯ ಮುಖ್ಯೋಪಾಧ್ಯರಿಗೆ ಸನ್ಮಾನಿಸಿ ಮಾತನಾಡಿದ ಅವರು, 298 ಸರ್ಕಾರಿ ಪ್ರೌಢಶಾಲೆಗಳ ಪೈಕಿ ಜಿಲ್ಲೆಯ ಒಟ್ಟು 109 ಶಾಲೆಗಳು ಶೇ. 100 ರಷ್ಟು ಫಲಿತಾಂಶವನ್ನು ದಾಖಲಿಸಿದ್ದು, ಅದರಲ್ಲಿ 61 ಸರ್ಕಾರಿ ಶಾಲೆಗಳಾಗಿರುವುದು ವಿಶೇಷ ಸಾಧನೆ ಮಾಡಿದೆ ಎಂದರು.

ಜಿಲ್ಲೆಯ ಶೈಕ್ಷಣಿಕ ಇತಿಹಾಸದಲ್ಲೇ ಹಿಂದೆಂದೂ ಕಾಣದಂತಹ ಅಭೂತಪೂರ್ವ ಬದಲಾವಣೆಯೊಂದು ನಡೆದಿದ್ದು, 2024-25ನೇ ಸಾಲಿನ ಪರೀಕ್ಷೆ-1 ರಲ್ಲಿದ್ದ ಶೇ.42. 43 ರಷ್ಟು ಫಲಿತಾಂಶವು 2025-26ನೇ ಸಾಲಿನಲ್ಲಿ ಬರೋಬ್ಬರಿ ಶೇ.85.06 ಕ್ಕೆ ಏರಿಕೆಯಾಗಿದೆ. ಒಟ್ಟು 37,352 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, 31,770 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಆಡಳಿತಾತ್ಮಕ ಶೈಕ್ಷಣಿಕ ಸುಧಾರಣೆಗಳು ಯಶಸ್ವಿಯಾಗಿವೆ ಎಂದು ಹೇಳಿದರು. ಕಳೆದ ವರ್ಷದ ಫಲಿತಾಂಶಕ್ಕೆ ಹೋಲಿಸಿದರೆ ಈ ವರ್ಷ ಶೈಕ್ಷಣಿಕ ಪ್ರಗತಿಯಲ್ಲಿ ಸುಮಾರು ಶೇ. 15 ರಷ್ಟು ಅಂತರವನ್ನು ಸರಿದೂಗಿಸ ಲಾಗಿದೆ.

ರಾಜ್ಯ ಸರಾಸರಿಯ ಜೊತೆ ಹೋಲಿಸಿದರೆ ಜಿಲ್ಲೆಯ ಶಾಲಾ ಶಿಕ್ಷಣದ ಫಲಿತಾಂಶದಲ್ಲಿನ ವ್ಯತ್ಯಾಸವನ್ನು ಗಮನಾರ್ಹವಾಗಿ ತಗ್ಗಿಸಲಾಗಿದೆ. ಈ ಅಭಿವೃದ್ಧಿಯ ಹಿಂದೆ ಶಿಕ್ಷಕರ, ಅಧಿಕಾರಿಗಳ ಹಾಗೂ ವಿದ್ಯಾರ್ಥಿಗಳ ಶ್ರಮವಿದ್ದು, ಮುಂಬರುವ ದಿನಗಳಲ್ಲಿ ಇನ್ನಷ್ಟು ಉತ್ತಮ ಸಾಧನೆ ಮಾಡುವ ಗುರಿಯನ್ನು ಹೊಂದಲಾಗಿದೆ ಎಂದು ತಿಳಿಸಿದರು. ಶಾಲಾ ಶಿಕ್ಷಣ ಇಲಾಖೆಯ ವತಿಯಿಂದ ಸಾದನೆ ಮಾಡಿದ ಸರ ಕಾರಿ ಶಾಲೆಯ ಪ್ರೌಢಶಾಲಾ ಮುಖ್ಯೋಪಾಧ್ಯಾಯರು, ತಾಲೂ ಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಹಾಗೂ ಶಿಕ್ಷಕರನ್ನು ಸನ್ಮಾನಿಸ ಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಉಪನಿರ್ದೇಶಕ ಬಸವರಾಜ ಶೆಟ್ಟಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಶಂಕ ರಮ್ಮ ಡವಳಗಿ ಹಾಗೂ ಪ್ರೌಢಶಾಲಾ ಮುಖ್ಯೋಪಾಧ್ಯಾಯರು, ತಾಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.

ಚಿತ್ತಾಪುರಕ್ಕೆ ಉಸ್ಮಾನಾಬಾದಿ ಮೇಕೆ ತಳಿ ಅಭಿವೃದ್ಧಿ ಕೇಂದ್ರ: ಲಾಡ್ಲಾಪುರದಲ್ಲಿ ಸ್ಥಳ ಪರಿಶೀಲನೆ



ವಾಡಿ,ಮೇ.05- ಚಿತ್ತಾಪುರ ತಾಲ್ಲೂಕಿಗೆ ಮಂಜೂರಾದ ಉಸ್ಮಾನಾಬಾದಿ ಮೇಕೆ ತಳಿ ಅಭಿವೃದ್ಧಿ ಕೇಂದ್ರ ಸ್ಥಾಪನೆಗೆ ಸಂಬಂಧಿಸಿದಂತೆ ಅಧಿಕಾರಿಗಳು ಮಂಗಳವಾರ ಲಾಡ್ಲಾಪುರ ಗ್ರಾಮದಲ್ಲಿ ಸ್ಥಳ ಪರಿಶೀಲನೆ ನಡೆಸಿದರು.

ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದಿಂದ ಅನುಮೋದನೆಗೊಂಡಿರುವ ಈ ಕೇಂದ್ರವನ್ನು ಲಾಡ್ಲಾಪುರದಲ್ಲಿ ಸ್ಥಾಪಿಸುವಂತೆ ಸ್ಥಳೀಯ ನಿವಾಸಿ ಸಿದ್ದರಾಜ ಮಲ್ಕಂಡಿ ಅವರು ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಪಶುಪಾಲನಾ ಇಲಾಖೆಗೆ ಮನವಿ ಸಲ್ಲಿಸಿದ್ದರು.

ರಾಷ್ಟ್ರೀಯ ಹೆದ್ದಾರಿ 150ರ ಪಕ್ಕದಲ್ಲಿ ಗುರುತಿಸಲಾದ ಜಾಗವನ್ನು ಪರಿಶೀಲಿಸಿದ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವೀಂದ್ರಪ್ಪ ಮರತೂರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳ ತಂಡ, ಸ್ಥಳವು ಸೂಕ್ತವಾಗಿದೆ ಎಂದು ಅಭಿಪ್ರಾಯಪಟ್ಟರು.

ಹೆದ್ದಾರಿ ಸಮೀಪದಲ್ಲಿರುವುದರಿಂದ ಸಂಪರ್ಕ ಸೌಲಭ್ಯ ಉತ್ತಮವಾಗಿದ್ದು, ಕೇಂದ್ರ ಸ್ಥಾಪನೆಗೆ ಅನುಕೂಲವಾಗಲಿದೆ. ನಿಗಮಕ್ಕೆ ಜಮೀನು ಹಸ್ತಾಂತರವಾದ ಬಳಿಕ ಬಜೆಟ್ ಅನುಮೋದನೆ ಪಡೆದು ಕಟ್ಟಡ ನಿರ್ಮಾಣ ಕಾರ್ಯ ಆರಂಭಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದರು. ಈ ಸಂದರ್ಭದಲ್ಲಿ ತಕ್ಷಣ ಸರ್ವೇ ನಡೆಸಿ ವರದಿ ಸಲ್ಲಿಸುವಂತೆ ತಹಶೀಲ್ದಾರ್ ನಾಗಯ್ಯ ಹಿರೇಮಠ ಅವರಿಗೆ ಸೂಚನೆ ನೀಡಲಾಯಿತು.

ಈ ಸಂದರ್ಭದಲ್ಲಿ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ಉಪ ನಿರ್ದೇಶಕ ಡಾ.ರವೀಂದ್ರನಾಥ, ತಹಶೀಲ್ದಾರ್ ನಾಗಯ್ಯ ಹಿರೇಮಠ, ಪಶುಪಾಲನಾ ಮತ್ತು ಪಶುವೈದ್ಯಕೀಯ ಇಲಾಖೆ ಸಹಾಯಕ ನಿರ್ದೇಶಕ ಡಾ. ಶಂಕರ ಕಣ್ಣಿ, ಕಂದಾಯ ನಿರೀಕ್ಷಕ ಪ್ರಶಾಂತ ರಾಠೋಡ, ಗ್ರಾಪಂ ಮಾಜಿ ಅಧ್ಯಕ್ಷ ಈರಣ್ಣ ಮಲ್ಕಂಡಿ, ಗ್ರಾಮಲೆಕ್ಕಿಗ ಸಂಗಮೇಶ, ಶಿವಕುಮಾರ ದಂಡಬಾ ಹಾಗೂ ಇನ್ನಿತರರು ಇದ್ದರು.

ಮೇ 10 ರಂದು ಕೊಪ್ಪಳದಲ್ಲಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ

ಕೊಪ್ಪಳ ಮೇ 05-

ಕೊಪ್ಪಳ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿಯನ್ನು ಮೇ 10 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಕಿನ್ನಾಳ ರಸ್ತೆಯಲ್ಲಿರುವ ಶ್ರೀ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಆಯೋಜಿಸಲಾಗಿದೆ.

ಜ್ಞಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ತಂಗಡಗಿ ಶಿವರಾಜ ಸಂಗಪ್ಪ ಅವರು ಕಾರ್ಯಕ್ರಮ ಉದ್ಘಾಟಿಸುವರು. ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ಶಾಸಕರಾದ ದೊಡ್ಡನಗೌಡ ಹನುಮಗೌಡ ಪಾಟೀಲ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕರಾದ ಬಸವರಾಜ ರಾಯರಡ್ಡಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಸಮಾರಂಭದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಗಂಗಾವತಿ ಶಾಸಕರಾದ ಜಿ.ಜನಾರ್ಧನ ರೆಡ್ಡಿ, ವಿಧಾನ ಪರಿಷತ್ ಸದಸ್ಯರುಗಳಾದ ಶರೀಲ್ ಜಿ. ನಮೋಶಿ, ಡಾ. ಚಂದ್ರಶೇಖರ ಬಿ. ಪಾಟೀಲ, ಶರಣಗೌಡ ಅನ್ನದಾನಗೌಡ ಪಾಟೀಲ ಬಯ್ಯಾಪೂರ ಹಾಗೂ ಹೇಮಲತಾ ನಾಯಕ, ಮುನಿರಾಬಾದ್ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ತುಂಗಭದ್ರಾ ಯೋಜನೆಯ ಅಧ್ಯಕ್ಷರಾದ ಹಸನಸಾಬ ನಬಿಸಾಬ ದೋಟಿಹಾಳ, ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರಸನ್ನ ವಿ. ಗಡಾದ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಅವರು ಪಾಲ್ಗೊಳ್ಳಗಳುವರು.

ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ



ಕಲಬುರರ್ಗಿಮೇ.05-

ಯಾವುದೇ ಭಾಷೆ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸಬೇಕಾದರೆ ಮಾತೃಭಾಷೆಯ ಕಲಿಕೆ ಅತ್ಯಗತ್ಯ ಎಂದು ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ ಅಭಿಪ್ರಾಯಪಟ್ಟರು.

ನಗರದ ಕನ್ನಡ ಭವನದ ಸುವರ್ಣ ಸಭಾಭವನದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಆಯೋಜಿಸಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ, ಪುಸ್ತಕ ಪ್ರದರ್ಶನ ಹಾಗೂ ಸತ್ಕಾರ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು, ಭಾಷಾ ಕಲಿಕೆಯಿಂದ ಜ್ಞಾನ ವೃದ್ಧಿಯಾಗುತ್ತದೆ ಎಂದು ತಿಳಿಸಿದರು. ಕಲ್ಯಾಣ ಕರ್ನಾಟಕ ಭಾಗದ ಸಮಸ್ಯೆಗಳಿಗೆ ರಾಜ್ಯ ಸರ್ಕಾರ ಸ್ಪಂದಿಸಿ ಪರಿಹಾರಕ್ಕೆ ಮುಂದಾಗಬೇಕು ಎಂದು ಮನವಿ ಮಾಡಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಮಾತನಾಡಿ, ತಾಯಿಗೆ ನೀಡುವ ಪ್ರೀತಿ, ಗೌರವವನ್ನು ಕನ್ನಡ ಭಾಷೆಗೂ ನೀಡಬೇಕು. ಪತ್ರಿಕೆ ಓದು ಮತ್ತು ಬರವಣಿಗೆಯ ಮೂಲಕ ಭಾಷೆಯನ್ನು ಉಳಿಸಿ ಬೆಳೆಸಬೇಕಾಗಿದೆ ಎಂದು ಹೇಳಿದರು. ನಾಡು-ನುಡಿ ಉಳಿಸುವಲ್ಲಿ ಹಿರಿಯರು ಸ್ಥಾಪಿಸಿದ ಸಂಸ್ಥೆಗಳ ಪಾತ್ರವನ್ನು ಸ್ಮರಿಸಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಮಾತನಾಡಿ, 112 ವರ್ಷಗಳ ಇತಿಹಾಸದಲ್ಲಿ ಪರಿಷತ್ತು ನಾಡಿನ ಅಸ್ಮಿತೆಯನ್ನು ಪ್ರತಿಬಿಂಬಿಸುವಂತೆ ಕಾರ್ಯನಿರ್ವಹಿಸಿದೆ. ಕೇವಲ ಸಾಹಿತಿಗಳಿಗೆ ಸೀಮಿತವಾಗದೆ, ಸಾಮಾನ್ಯ ಜನರಿಗೂ ವೇದಿಕೆ ಕಲ್ಪಿಸುವ ಕೆಲಸ ಮಾಡಲಾಗಿದೆ ಎಂದರು.

ಕೆಕೆಸಿಸಿಐ ಅಧ್ಯಕ್ಷ ಶರಣು ಪಪ್ಪಾ ಹಾಗೂ ಸಂಶೋಧಕ ಸಾಹಿತಿ ಮುಡುಬಿ ಗುಂಡೇರಾವ ಅವರು ಮಾತನಾಡಿ, ಜಿಲ್ಲಾ ಪರಿಷತ್ ಕಾರ್ಯಗಳು ಯುವ ಸಾಹಿತಿಗಳಿಗೆ ಸ್ಫೂರ್ತಿ ಯಾಗಿದ್ದು, ಕಲಬುರಗಿ ಕಸಾಪ ರಾಜ್ಯಕ್ಕೆ ಮಾದರಿಯಾಗಿದೆ ಎಂದು ಪ್ರಶಂಸಿಸಿದರು.

ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ, ವೈದ್ಯ ಸೇವಕಿ ಡಾ. ನಾಗವೇಣಿ ಪಾಟೀಲ, ನಗರ ಸಂಚಾರ ಉಪ ವಿಭಾಗದ ಪೊಲೀಸ್ ಸಹಾಯಕ ಆಯುಕ್ತರಾದ ಡಿ.ಟಿ. ಪ್ರಭು, ಜಿಲ್ಲಾ ಕಸಾಪ ದ ಶಿವರಾಜ ಅಂಡಗಿ, ಧರ್ಮಣ್ಣ ಎಚ್ ಧನ್ನಿ, ಶರಣರಾಜ ಛಪ್ಪರಬಂದಿ, ಸಿದ್ದಲಿಂಗ ಜಿ ಬಾಳಿ, ಸೈಯ್ಯದ್ ನಜಿರುದ್ದಿನ್ ಮುತ್ತವಲ್ಲಿ, ಶಿವಲೀಲಾ ಕಲಗುರ್ಕಿ, ಪ್ರಭುಲಿಂಗ ಮೂಲಗೆ, ರವಿಕುಮಾರ ಶಹಾಪೂರಕರ್ ರಾಜೇಂದ್ರ ಮಾಡಬೂಳ, ದಿನೇಶ ಮದಕರಿ, ಬಾಬುರಾವ ಪಾಟೀಲ, ಧರ್ಮರಾಜ ಜವಳಿ, ಅಮೃತಪ್ಪ ಅಣೂರ, ಜಗದೀಶ ಮರಪಳ್ಳಿ ಉಪಸ್ಥಿತರಿದ್ದರು. ಸಾಹಿತಿಗಳಾದ ನಾರಾಯಣ ಕುಲಕರ್ಣಿ, ಈಶ್ವರ ಇಂಗನ್, ಡಾ. ಅಂಬುಜಾ ಮಳಖೇಡಕರ್ ಸಿದ್ದಲಿಂಗಯ್ಯ ಸ್ವಾಮಿ, ಪಂಚಾಕ್ಷರಿ ಪೂಜಾರಿ, ಡಾ. ಗೀತಾ ಪಾಟೀಲ, ಪತ್ರಕರ್ತರಾದ ಜಯತೀರ್ಥ ಪಾಟೀಲ, ಶೇಷಮೂರ್ತಿ ಅವಧಾನಿ, ಭವಾನಿಸಿಂಗ್ ಠಾಕೂರ್ ಡಿ. ಶಿವಲಿಂಗಪ್ಪ, ಶಿವರಾಯ ದೊಡ್ಮನಿ, ಬಸವರಾಜ ಚಿನಿವಾರ, ದೇವೇಂದ್ರಪ್ಪ ಆವಂಟಿ, ವಿ.ಎನ್. ಮಲ್ಲಿಕಾರ್ಜುನ, ಚಂದ್ರಕಾಂತ ಹಾವನೂರ, ಕಸಾಪ ಹಿರಿಯ ಸದಸ್ಯರಾದ ಡಾ.ಸಿದ್ರಾಮಯ್ಯಾ ಮಠ, ಸಂಗನಬಸಪ್ಪ ಹಿರೇಗೌಡ, ಶ್ರೀಶೈಲ ಮೂಲಗೆ, ನವೀನ್ ಕಲಬುರಗಿ, ವೀರಭದ್ರಪ್ಪ ಓತಿ, ಸಿದ್ದರಾಮು ನಿರೋಣಿ, ಬಿ. ಜಯಸಿಂಗ್, ಮಲ್ಲಪ್ಪ ಮದನಕರ್ ಶಿವಕುಮಾರ ಅಲ್ಲೂರ್ ಸಂಚಾರಿ ವಿಭಾಗದ ಅಧಿಕಾರಿಗಳಾದ ಶಾಂತಾಬಾಯಿ ಪತ್ತಾರ, ಅನೀಲ ಜೈನ್, ಅರ್ಜುನ ಸಿಂಗ್ ಠಾಕೂರ್ ಜಗದೇವ ಎಂಟಮನಿ, ಬಸವರಾಜ ಯಳಸಂಗಿ, ರಾಜಕುಆರ ಹಡಪದ ಅವರನ್ನು ವಿಶೇಷವಾಗಿ ಗೌರವಿಸಲಾಯಿತು.

ಕಲಕೇರಿ ಗ್ರಾಮದಲ್ಲಿ ನರೇಗಾ ಐಇಸಿ ಕಾರ್ಯಕ್ರಮದಡಿ ರೋಜಗಾರ್ ದಿವಸ್ ಆಚರಣೆ ನರೇಗಾ ಕಾಮಗಾರಿಯಲ್ಲಿ ಎಲ್ಲಾ ಕೂಲಿಕಾರರು ಕೆಲಸಕ್ಕೆ ಹಾಜರಾಗಿರಿ: ಶ್ರೀನಿವಾಸ ಚಿತ್ರಗಾರ



ಕೊಪ್ಪಳ ಮೇ 06

ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಎಲ್ಲಾ ಕೂಲಿಕಾರರು ಫಾರಂ ನಂ.6 ಸಲ್ಲಿಸುವ ಮೂಲಕ ಕೂಲಿ ಕೆಲಸಕ್ಕೆ ಹಾಜರಾಗುವಂತೆ ಜಿಲ್ಲಾ ಪಂಚಾಯತ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ ಕರೆ ನೀಡಿದರು. ಕಲಕೇರಿ ಗ್ರಾಮ ಪಂಚಾಯತಿಯ ವತಿಯಿಂದ ಮಂಗಳವಾರ ಕಲಕೇರಿ ಗ್ರಾಮದ ಸಂತ ಷರೀಪರ ದೇವಸ್ಥಾನದ ಆವರಣದಲ್ಲಿ ಆಯೋಜಿಸಿದ್ದ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಐಇಸಿ ಕಾರ್ಯಕ್ರಮದಡಿ ರೋಜಗಾರ್ ದಿವಸ್ ಕಾರ್ಯಕ್ರಮದಲ್ಲಿ ಕೂಲಿಕಾರರನ್ನು ಉದ್ದೇಶಿಸಿ ಮಾತನಾಡಿದರು.

ಪ್ರತಿ ಮಾನವ ದಿನಕ್ಕೆ ರೂ. 370 ಕೂಲಿ ನಿಗದಿಪಡಿಸಿದ್ದು, ಸಂಪೂರ್ಣವಾಗಿ ಕೂಲಿ ಕೆಲಸ ನಿರ್ವಹಿಸಿ ಪೂರ್ತಿ ಹಣ ಪಡೆದುಕೊಳ್ಳಬೇಕು. ಬಿಸಿಲಿನ ಪ್ರಮಾಣ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದ್ದು ಕೆಲಸದ ಜೊತೆಗೆ ಆರೋಗ್ಯ ಕಡೆ ಕಾಳಜಿವಹಿಸಬೇಕು. 18 ವರ್ಷ ಮೇಲ್ಪಟ್ಟ ಕುಟುಂಬದ ಸದಸ್ಯರು ಜಾಬಕಾರ್ಡ ಬಳಕೆ ಮಾಡಿಕೊಂಡು ಕೂಲಿ ಕೆಲಸ ಪಡೆಯಲು ಕಡ್ಡಾಯವಾಗಿ ನಮೂನೆ-6 ಸಲ್ಲಿಸಬೇಕು. ಮೇ ಮತ್ತು ಜೂನ್ ವರೆಗೆ 60 ದಿನಗಳ ಕೂಲಿ ಕೆಲಸ ಪಡೆಯಬೇಕೆಂದರು.

ಕೂಲಿ ಹಣದಿಂದ ಮಕ್ಕಳ ಶಾಲಾ, ಕಾಲೇಜು ಶುಲ್ಕ ಭರಿಸಲು, ಮಕ್ಕಳ ಸ್ಪರ್ಧಾತ್ಮಕ ಪರೀಕ್ಷೆಗೆ ಶುಲ್ಕ ಹಾಗೂ ಕುಟುಂಬ ನಿರ್ವಹಣೆಗೆ ಅನುಕೂಲವಾಗುತ್ತದೆ ಎಂದರು.ಜಾಬಕಾರ್ಡನಲ್ಲಿರುವ ಕುಟುಂಬದ ಎಲ್ಲ ಸದಸ್ಯರು ಇ-ಕೆವೈಸಿ ಹೊಂದಿದ ನಂತರವೇ ಎನ್‌ಎಂಆರ್ ಪ್ರಕಾರ ಕೂಲಿಕಾರರು ಕೂಲಿ ಕೆಲಸಕ್ಕೆ ಹಾಜರಾಗಬೇಕು. 1 2ನೇ ಹಾಜರಾತಿ ಕಡ್ಡಾಯವಾಗಿರುತ್ತದೆ ಎಂದು ಹೇಳಿದರು.

ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ ಮಾತನಾಡಿ, ಪ್ರತಿ ಜಾಬಕಾರ್ಡಗೆ 100 ಮಾನವ ದಿನಗಳ ಕೂಲಿ ಕೆಲಸ ನೀಡಲಾಗುತ್ತಿದ್ದು, ಇದರ ಸದುಪಯೋಗ ಪಡೆಯಬೇಕು. ಗ್ರಾಮೀಣ ಭಾಗದ ಕೂಲಿಕಾರರು ಕೂಲಿ ಅರಸಿ ಗುಳೆ ಹೋಗುವದನ್ನು ನಿಯಂತ್ರಿಸಿ ಸ್ಥಳೀಯವಾಗಿ ಉದ್ಯೋಗ ಒದಗಿಸಿ ಅವರಿಗೆ ಕೂಲಿ ಹಣ ಪಾವತಿಸಿ ಸ್ವಾವಂಬಿ ಜೀವನ ನಡೆಸಲು ಯೋಜನೆಯ ಸದುದ್ದೇಶವಾಗಿದೆ. ಎಲ್ಲಾ ಕೂಲಿಕಾರರು ಸಾಮಾಜಿಕ ಭದ್ರತೆ ವಿಮೆಗಳಾದ ಪಿಎಂಜೆಜೆಬಿವೈ, ಪಿಎಂಎಸ್‌ಬಿವೈ.ಗಳಲ್ಲಿ ನೊಂದಣೆ ಮಾಡಿಕೊಳ್ಳುವಂತೆ ಕರೆ ನೀಡಿದರು.

ಗ್ರಾಮ ಪಂಚಾಯತಿ ಡಿಇಒ ಕುಮಾರ ಪರಗಿ, ಬೇರ್‌ಫೂಟ್ ಟೆಕ್ನಿಷಿಯನ್ ಮಾರುತಿ ವಾಲ್ಮೀಕಿ, ಗ್ರಾಮ ಕಾಯಕ ಮಿತ್ರ ರಾಧಾ, ಕಾಯಕ ಬಂಧುಗಳಾದ ನಾಗರಾಜ ಮಲಾಜಿ, ಮುತ್ತು ಲಮಾಣಿ, ಕುಮಾರ ಚವ್ಹಾಣ್, ರಾಮಣ್ಣ ಉಪ್ಪಾರ, ವಿರೇಶ ಹರಿಜನ, ಕೂಲಿಕಾರರು ಉಪಸ್ಥಿತರಿದ್ದರು.

ಕೂಡಲಸಂಗಮ : ಡಿಪ್ಲೋಮಾ ಕೋರ್ಸಗೆ ಪ್ರವೇಶ

ಬಾಗಲಕೋಟೆ, ಮೇ 06

ಕೂಡಲಸಂಗಮ ಸರಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಿಂದ ಎಸ್.ಎಸ್.ಎಲ್.ಸಿ ಪಾಸಾದ ವಿದ್ಯಾರ್ಥಿಗಳಿಂದ ಮೂರು ಡಿಪ್ಲೋಮಾ ಕೋರ್ಸಗಳ ಪ್ರವೇಶಕ್ಕೆ ಅರ್ಜಿ ಆಹ್ವಾನಿಸ'ಲಾಗಿದೆ. ಟೂಲ್ ಅಂಡ್ ಡೈ ಮೇಕಿಂಗ್,

ಮೆಕಟ್ರಾನಿಕ್ಸ್ , ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್ ಕೋರ್ಸಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನ ಮೇ 10 ಆಗಿದೆ. ಈ ಕೋರ್ಸಗಳು 3+1 ವರ್ಷದ ಅವಧಿಯದಾಗಿದ್ದು, ನಾಲ್ಕನೇ ವರ್ಷದಲ್ಲಿ ಪ್ರತಿಷ್ಠಿತ ಕಂಪನಿಗಳಲ್ಲಿ ಕಡ್ಡಾಯವಾಗಿ ಒಂದು ವರ್ಷದ ತರಬೇತಿಗೆ ಕಳುಹಿಸಲಾಗುತ್ತದೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ಬೆಂಗಳೂರನ್ನು ನರಕವನ್ನಾಗಿಸುತ್ತಿರುವುದು ಮಳೆಯಲ್ಲ, ದುರ್ಬಲ ಆಡಳಿತ



ಮೊದಲ ಮಳೆಯೇ ನಗರವನ್ನು ಮೊಣಕಾಲೂರಿಸುವ ಸ್ಥಿತಿಗೆ ತಳ್ಳಿದರೆ, ಮುಂದಿನ ಮುಂಗಾರು ಇನ್ನೂ ಭೀಕರವಾಗುವ ಸಾಧ್ಯತೆ ಇದೆ. ಕಾಂಗ್ರೆಸ್ ಸರ್ಕಾರ, ಈ ಮಳೆಯನ್ನು, ಇದರಿಂದಾದ ಅವಘಡವನ್ನು ಒಂದು ಎಚ್ಚರಿಕೆ ಎಂದು ಸ್ವೀಕರಿಸಬೇಕು. ಬೆಂಗಳೂರನ್ನು ನರಕವನ್ನಾಗಿಸುತ್ತಿರುವುದು ಮಳೆಯಲ್ಲ, ದುರ್ಬಲ ಆಡಳಿತ ಎನ್ನುವುದನ್ನು ಮೊದಲು ಅರ್ಥ ಮಾಡಿಕೊಳ್ಳಬೇಕು.

ಬಿರುಬೇಸಿಗೆಯ ಉರಿಬಿಸಿಲಿನಿಂದ ಬೆಂದುಹೋಗಿದ್ದ ಬೆಂಗಳೂರಿಗೆ ಸುರಿದ ಮುಂಗಾರು ಪೂರ್ವ ಮಳೆ ತಂಪಾಗಿಸಿತು. ಆದರೆ ಏಪ್ರಿಲ್ ತಿಂಗಳಲ್ಲಿ ಇದುವರೆಗೆ ಕಂಡು ಕೇಳದ ಅತಿ ಹೆಚ್ಚು ಮಳೆ ಸುರಿದು, 10 ಜನರ ಪ್ರಾಣ ಕಸಿದುಕೊಂಡಿತು. ದೇಶದ ಐಟಿ ಹಬ್ ಎಂದು ಹೆಸರಾದ ಬೆಂಗಳೂರು, ಕೇವಲ ಒಂದೇ ಒಂದು ಮಳೆಗೆ ಅಸ್ತವ್ಯಸ್ತವಾಯಿತು. ಜನರ ಜೀವನ ಕಷ್ಟಕ್ಕೆ ಸಿಲುಕಿತು.

ದಶಕಗಳ ಹಿಂದೆ ಬೆಂಗಳೂರು, ಹಿತಕರ ಹವೆಗೆ ಹೆಸರುವಾಸಿಯಾಗಿತ್ತು. ಬೇಸಿಗೆಯಲ್ಲೂ ಬೆಂಗಳೂರಿನ ವಾತಾವರಣ ತಣ್ಣಗಿರುತ್ತಿತ್ತು. ದೇಶದ ನಾನಾ ಭಾಗಗಳಿಂದ ಜನ ಬೆಂಗಳೂರನ್ನು ಬಯಸಿ ಬರುತ್ತಿದ್ದರು. ಆದರೆ, ಬರಬರುತ್ತಾ ಬೆಂಗಳೂರಿನ ಬದುಕು ನರಕಸದೃಶವಾಗಿದೆ. ಅದಕ್ಕೆ ಮುಖ್ಯ ಕಾರಣ, ಇಡೀ ರಾಜ್ಯಕ್ಕೆ ಬೆಂಗಳೂರು ಕೇಂದ್ರವಾಗಿರುವುದು. ಐಟಿ-ಬಿಟಿ, ಕೈಗಾರಿಕೆಗಳು, ಕಚೇರಿಗಳು, ರಾಜಕಾರಣ, ಶಿಕ್ಷಣ, ಉದ್ಯೋಗ, ವಲಸೆ- ಎಲ್ಲಕ್ಕೂ ಬೆಂಗಳೂರೇ ಆಗಬೇಕಾಗಿದೆ. ಅಷ್ಟೇ ಅಲ್ಲ, ಬೆಂಗಳೂರು ಈಗ ನ್ಯಾಷನಲ್ ಕ್ಯಾಪಿಟಲ್ ಆಗುವತ್ತ ದಾಪುಗಾಲು ಹಾಕುತ್ತಿದೆ. ವಾಹನ ಸಂಚಾರ ಸಹಿಸಲಸಾಧ್ಯವಾದ ಹಂತ ತಲುಪಿದೆ. ಮನುಷ್ಯರಿಗಿಂತ ವಾಹನಗಳ ಸಂಖ್ಯೆ ಹೆಚ್ಚಾಗಿದೆ. ಧೂಳು, ಹೊಗೆ, ಧಗೆಯಿಂದಾಗಿ ಬೆಂಗಳೂರು ಬದುಕುವುದಕ್ಕೆ ಯೋಗ್ಯವೆ ಎನ್ನುವ ಪ್ರಶ್ನೆಗಳು ಮುನ್ನೆಲೆಗೆ ಬಂದಿವೆ.

ಬೆಂಗಳೂರು ನಗರವು ಇಂದು ಅತ್ಯಂತ ವಿಸ್ತಾರವಾಗಿ ಬೆಳೆದಿದೆ. ಕೆರೆ-ಕಟ್ಟೆ, ಬೆಟ್ಟ-ಗುಡ್ಡಗಳನ್ನು ನುಂಗಿ ಬೃಹದಾಕಾರವಾಗಿ ಬೆಳೆಯುತ್ತಲೇ ಇದೆ. 70ರ ದಶಕದಲ್ಲಿದ್ದ ನಗರಯೋಜನೆ ಈಗ ಫೈಲ್‌ಗಳಿಗಷ್ಟೇ ಸೀಮಿತವಾಗಿದೆ. ಹೀಗಿರುವಾಗ ಒಂದೇ ಒಂದು ಬಿರುಮಳೆಗೂ ತಗ್ಗು ಪ್ರದೇಶಗಳು ಕೆರೆಗಳಂತಾಗುತ್ತವೆ. ಹಿಂದೆ ಒಂದು ಕಾಲದಲ್ಲಿ ಬೆಂಗಳೂರಿನಲ್ಲಿ ಸಾವಿರಕ್ಕೂ ಹೆಚ್ಚು ಕೆರೆಗಳಿದ್ದವು. 60ರ ದಶಕದಲ್ಲಿ ಕೆರೆಗಳ ಸಂಖ್ಯೆ 280ಕ್ಕೆ ಇಳಿಯಿತು. ಈಗ 50 ಕೂಡ ಇಲ್ಲ. ಕೆರೆಗಳಿದ್ದ ಜಾಗವೆಲ್ಲ ಬಡಾವಣೆಗಳಾಗಿವೆ. ಅಂತಹ ಜನವಸತಿ ಪ್ರದೇಶಗಳು ಮಳೆಗಾಲದಲ್ಲಿ ಪ್ರವಾಹಕ್ಕೆ ಸಿಲುಕಿ, ತೇಲುತ್ತವೆ. ಮಳೆ ನೀರು ತುಂಬಿದ ಅಂಡರ್‌ಪಾಸ್‌ಗಳು ಮೃತ್ಯುಕೂಪಗಳಾಗುತ್ತವೆ. ರಸ್ತೆ ಗುಂಡಿಗಳು, ರಸ್ತೆ ಪಕ್ಕದ ಮರಗಳು, ವಿದ್ಯುತ್ ಕಂಬಗಳು ಮುರಿದುಬೀಳುವುದು, ಹಲವು ಜೀವಗಳನ್ನು ಬಲಿ ಪಡೆಯುವುದು ಸಾಮಾನ್ಯವಾಗಿದೆ.

ಬೆಂಗಳೂರಿನ ಜನ ಮಳೆಗಾಲದಲ್ಲಿ ಏನೆಲ್ಲ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೋ ಅದಕ್ಕೆಲ್ಲ ಕಾರಣ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮತ್ತು ರಾಜ್ಯ ಸರ್ಕಾರ. ಬೆಂಗಳೂರಿನ ಯಾವುದೇ ಪ್ರದೇಶಕ್ಕೆ ಹೋದರೂ, ಅಭಿವೃದ್ಧಿ ನೆಪದ ಕಾಮಗಾರಿ ಎದ್ದುಕಾಣುತ್ತದೆ. ರಸ್ತೆ ಅಗೆದಿರುವುದು, ಅರ್ಧಂಬರ್ಧ ಕೆಲಸ ಮಾಡಿ ಹಾಗೆ ಬಿಟ್ಟಿರುವುದು, ಗುಂಡಿ-ಕೆಸರುಗಳಿಂದ ಓಡಾಡಲು ಕಷ್ಟವಾಗುವುದು- ಸಾಮಾನ್ಯವಾಗಿದೆ. ನಡೆಯುವ ಪ್ರತಿ ಕಾಮಗಾರಿಯಲ್ಲೂ ಗುತ್ತಿಗೆದಾರರು, ಅಧಿಕಾರಿಗಳು ಹಾಗೂ ಅಧಿಕಾರಸ್ಥರ ಲಂಚಾವತಾರವಿದೆ. ಕೋಟಿ ಕೋಟಿ ರೂಪಾಯಿಗಳ ಭ್ರಷ್ಟಾಚಾರವಿದೆ. ಅದನ್ನು ಗುತ್ತಿಗೆದಾರರ ಸಂಘದ ಪದಾಧಿಕಾರಿಗಳೇ ಬಹಿರಂಗವಾಗಿ ಹೇಳಿಕೊಂಡಿದ್ದೂ ಇದೆ. ಇವರೆಲ್ಲ ಸೇರಿಕೊಂಡು ಒಂದು ಕಾಲದ ಸುಂದರ ನಗರವನ್ನು ಮೃತ್ಯುಕೂಪವನ್ನಾಗಿ ಮಾರ್ಪಡಿಸಿದ್ದಾರೆ.

ಗ್ರೇಟರ್ ಬೆಂಗಳೂರು ಅಥಾರಿಟಿ ಅಡಿಯಲ್ಲಿ ವಿವಿಧ ಸಂಸ್ಥೆಗಳನ್ನು ಒಗ್ಗೂಡಿಸಲಾಗಿದೆ ಎನ್ನಲಾದರೂ, ಅವುಗಳ ನಡುವಿನ ಸಮನ್ವಯದ ಕೊರತೆ, ಈಗ ಸುರಿಯುತ್ತಿರುವ ಮಳೆಯಲ್ಲಿ ಬಯಲಾಗಿದೆ. ಚಿಂತಾಜನಕ ಸಂಗತಿ ಎಂದರೆ, ಬೆಂಗಳೂರು ಇಂದಿಗೂ ಓಬಿರಾಯನ ಕಾಲದ ಅಭಿವೃದ್ಧಿ ಯೋಜನೆಯನ್ನೇ ಆಧಾರವಾಗಿಸಿಕೊಂಡಿದೆ. 2026ರ ಸವಾಲುಗಳನ್ನು ದಶಕಗಳ ಹಿಂದಿನ ನಕ್ಷೆಯೊಂದಿಗೆ ಎದುರಿಸಲು ನೋಡಿ ನಗೆಪಾಟಲಿಗೀಡಾಗುತ್ತಿದೆ. ಸಮಸ್ಯೆಗಳೇನು ಎಂಬುದು ಎಲ್ಲರಿಗೂ ಗೊತ್ತಿದೆ. ಇಲ್ಲದಿರುವುದು ಅವುಗಳನ್ನು ಎದುರಿಸುವ ರಾಜಕೀಯ ಮತ್ತು ಆಡಳಿತಾತ್ಮಕ ಇಚ್ಛಾಶಕ್ತಿ.


ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು, ಇದೇ ಮೇ 20ಕ್ಕೆ ಮೂರು ವರ್ಷಗಳಾಗುತ್ತದೆ. ಇದೇ ಸಮಯದಲ್ಲಿ ಮಳೆ ಬಿದ್ದು ನಗರವಾಸಿಗಳ ಬದುಕು ನರಕವಾಗಿದೆ. ಆದರೆ, ಜಿಬಿಎ ಅಧ್ಯಕ್ಷ ಸಿದ್ದರಾಮಯ್ಯನವರು ಮತ್ತು ಬೆಂಗಳೂರು ನಗರ ಅಭಿವೃದ್ಧಿ ಖಾತೆ ಸಚಿವ ಡಿ.ಕೆ. ಶಿವಕುಮಾರ್ ಅವರ ನಡುವೆ ಅಧಿಕಾರ ಹಂಚಿಕೆಯ ರಾಜಕೀಯ ನಾಟಕ- ಈ ಕ್ಷಣಕ್ಕೂ ಚಾಲ್ತಿಯಲ್ಲಿದೆ. ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಪದವಿಯಿಂದ ದೂರವಿಡಬೇಕೆಂಬ ಏಕಮಾತ್ರ ಕಾರಣದಿಂದ, ಅವರು ಕೇಳಿದ್ದನ್ನು ಕೊಡಲಾಗಿದೆ. ಅವರು ಮಾಡಿದ್ದನ್ನು ಮೌನವಾಗಿದ್ದು ಸಮ್ಮತಿಸಲಾಗುತ್ತಿದೆ. ಸಿದ್ದರಾಮಯ್ಯನವರು ಸಿಎಂ ಕುರ್ಚಿ ತಂಟೆಗೆ ಬರದಿದ್ದರೆ ಸಾಕು ಎಂದು ಸುಮ್ಮನಾದಂತಿದೆ. ವಿರೋಧ ಪಕ್ಷಗಳು ಪ್ರಶ್ನಿಸುವ ಮೂಲಭೂತ ಕರ್ತವ್ಯವನ್ನೇ ಮರೆತು ಕೂತಿವೆ.

ಜಿಬಿಎಗೆ ಚುನಾವಣೆಗಳಾಗಿ ಹನ್ನೊಂದು ವರ್ಷಗಳಾದರೂ, ಜೂನ್ 30ರೊಳಗೆ ಚುನಾವಣೆ ಮುಗಿಸಬೇಕೆಂದು ಸುಪ್ರೀಂ ಕೋರ್ಟ್ ಸೂಚಿಸಿದ್ದರೂ, ಚುನಾವಣೆ ನಡೆಯುವುದೇ ಅನುಮಾನವಾಗಿದೆ. ನಗರದ ಧಾವಂತದ ಬದುಕಿಗೆ ಒಗ್ಗಿಹೋಗಿರುವ ಜನರಿಗೆ ಶಾಸಕರು-ಸಂಸದರನ್ನು ಹುಡುಕಲು, ಸಮಸ್ಯೆ ಹೇಳಿಕೊಳ್ಳಲು ಸಮಯವಿಲ್ಲ. ಇತ್ತೀಚಿನ ದಿನಗಳಲ್ಲಿ ಆಳುವ ಸರ್ಕಾರದ ವಿರುದ್ಧ ಬೀದಿಗಿಳಿದು ಪ್ರಶ್ನಿಸುವ, ಪ್ರತಿಭಟಿಸುವ ಕೆಚ್ಚು ಕೂಡ ಜನರಲ್ಲಿ ಕಾಣುತ್ತಿಲ್ಲ. ಜನರ ಈ ಹೊಂದಿಕೊಂಡು ಹೋಗುವ ಗುಣ ಅಧಿಕಾರಿಗಳು ಮತ್ತು ಅಧಿಕಾರಸ್ಥ ರಾಜಕಾರಣಿಗಳಿಗೆ ಅನುಕೂಲಕರ ಸನ್ನಿವೇಶವನ್ನು ಸೃಷ್ಟಿಸುತ್ತಿದೆ.

ಬೆಂಗಳೂರು ನಗರ ಅಭಿವೃದ್ಧಿ ಖಾತೆ ಸಚಿವ ಡಿ.ಕೆ. ಶಿವಕುಮಾರ್, ದೂರದೃಷ್ಟಿಯುಳ್ಳ ವ್ಯಕ್ತಿ, ಪ್ರಭಾವಿ ಸಚಿವ, ಧೈರ್ಯಸ್ಥ ಎನ್ನುವವರಿದ್ದಾರೆ. ಅದನ್ನು ಅವರು ಸಾಬೀತುಪಡಿಸುವವರಂತೆ, ಸ್ಕೈ-ಡೆಕ್, ಎರಡನೇ ವಿಮಾನ ನಿಲ್ದಾಣ, ಸುರಂಗರಸ್ತೆ, ಫ್ಲೈ ಓವರ್, ಮೆಟ್ರೋ ಕುರಿತು ಕನಸುಗಾರನಂತೆ ಮಾತನಾಡುತ್ತಾರೆ. ಸಿಲಿಕಾನ್ ಸಿಟಿಯನ್ನು ವಿಶ್ವಮಟ್ಟಕ್ಕೆ ಏರಿಸಿ ಬ್ರ್ಯಾಂಡ್ ಬೆಂಗಳೂರು-ವೈಬ್ರ್ಯಾಂಟ್ ಬೆಂಗಳೂರು ಮಾಡುತ್ತೇನೆ ಎನ್ನುತ್ತಾರೆ. ಮಾತೆತ್ತಿದರೆ ಸಾವಿರಾರು ಕೋಟಿಗಳ ಹೊಸ ಹೊಸ ಯೋಜನೆಗಳನ್ನು ಕಣ್ಮುಂದೆ ತಂದು ನಿಲ್ಲಿಸುತ್ತಾರೆ. ಎದುರಾಗುವ ಅವಘಡಗಳನ್ನು ಅವಕಾಶವನ್ನಾಗಿ ಮಾರ್ಪಡಿಸುತ್ತಾರೆ. ಆದರೆ, ಜನರ ಮೂಲಭೂತ ಸಮಸ್ಯೆಗಳನ್ನು ಪ್ರಜ್ಞಾಪೂರ್ವಕವಾಗಿಯೇ ಮರೆಯುತ್ತಾರೆ. ಇಲ್ಲವೇ ಅಧಿಕಾರಿಗಳ ಮೇಲೆ ಹಾಕಿ, ನುಣುಚಿಕೊಳ್ಳುತ್ತಾರೆ.

ಮೊದಲ ಮಳೆಯೇ ನಗರವನ್ನು ಮೊಣಕಾಲೂರಿಸುವ ಸ್ಥಿತಿಗೆ ತಳ್ಳಿದರೆ, ಮುಂದಿನ ಮುಂಗಾರು ಇನ್ನೂ ಭೀಕರವಾಗುವ ಸಾಧ್ಯತೆ ಇದೆ. ಕಾಂಗ್ರೆಸ್ ಸರ್ಕಾರ, ಈ ಮಳೆಯನ್ನು, ಇದರಿಂದಾದ ಅವಘಡವನ್ನು ಒಂದು ಎಚ್ಚರಿಕೆ ಎಂದು ಸ್ವೀಕರಿಸಬೇಕು. ಸತ್ತವರಿಗೆ ಪರಿಹಾರ ಘೋಷಿಸುವುದಲ್ಲ, ಬದುಕಿರುವವರಿಗೆ ನೆಮ್ಮದಿಯಿಂದ ಬದುಕುವ ವಾತಾವರಣ ಸೃಷ್ಟಿಸಬೇಕು. ಬೆಂಗಳೂರನ್ನು ನರಕವನ್ನಾಗಿಸುತ್ತಿರುವುದು ಮಳೆಯಲ್ಲ, ದುರ್ಬಲ ಆಡಳಿತ ಎನ್ನುವುದನ್ನು ಮೊದಲು ಅರ್ಥ ಮಾಡಿಕೊಳ್ಳಬೇಕು. ಅರ್ಥ ಮಾಡಿಕೊಳ್ಳದಿದ್ದರೆ, ಕಾಂಗ್ರೆಸ್ ನಾಯಕರು ಮುಂದಿನ ಚುನಾವಣೆಯಲ್ಲಿ ಮತದಾರರನ್ನು ಎದುರಿಸುವುದು ಕಷ್ಟವಿದೆ.

ಮಾನ್ವಿ ಪ್ರಾ.ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾಗಿ ಸಬ್ಜಲಿ, ಪ್ರ.ಕಾ.ಮಲ್ಲಿಕಾರ್ಜುನ, ಖಜಾಂಚಿ ಮಮತಾ ಅವಿರೋಧ ಆಯ್ಕೆ



ಮಾನ್ವಿ, ಮೇ.06-

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕ ಅಧ್ಯಕ್ಷರಾಗಿ ಸಬ್ಜಲಿಸಾಬ್, ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಹಾಗೂ ಖಜಾಂಚಿಯಾಗಿ ಮಮತಾ.ಎಸ್.ಎಮ್. ಇವರು ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ ಎಂದು ಚುನಾವಣಾಧಿಕಾರಿ ಪ್ರಮೋದಕುಮಾರ ತಿಳಿಸಿದ್ದಾರೆ.ಮೇ.1ರಂದು ನಡೆದ ಚುನಾವಣೆಯಲ್ಲಿ ಸುರೇಶ ಕುರ್ಡಿ ಪೆನಾಲ್ ನಾಲ್ಕು ಜನರು ಜಯಶಾಲಿಯಾಗಿದ್ದರು. ಶಿಕ್ಷಕರ ಸಂಘದ ಅಧ್ಯಕ್ಷ, ಪ್ರಧಾನಕಾರ್ಯದರ್ಶಿ, ಖಜಾಂಚಿ ಸ್ಥಾನಕ್ಕೆ ನಾಮಪತ್ರಗಳನ್ನು ಸಲ್ಲಿಸಿದ್ದರು. ಬೇರೆ ಯಾರು ನಾಮಪತ್ರಗಳನ್ನು ಸಲ್ಲಿಸಿದ ಕಾರಣ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕ ಅಧ್ಯಕ್ಷರಾಗಿ ಸಬ್ಜಲಿಸಾಬ್, ಪ್ರಧಾನಕಾರ್ಯದರ್ಶಿ ಮಲ್ಲಿಕಾರ್ಜುನ ಹಾಗೂ ಖಜಾಂಚಿಯಾಗಿ ಮಮತಾ.ಎಸ್.ಎಮ್. ಇವರು ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ.

ಪಶ್ಚಿಮ ಬಂಗಾಳ; ಮೋದಿಯನ್ನ ಸೋಲಿಲ್ಲದ ಸರದಾರ ಮಾಡಿದ ಚು.ಆಯೋಗ!

ಪಶ್ಚಿಮ ಬಂಗಾಳದ ರಾಜಕೀಯ ರಣಾಂಗಣ ಯಾವಾಗಲೂ ಕುತೂಹಲ ಮತ್ತು ಸಂಘರ್ಷಗಳ ಕೇಂದ್ರಬಿಂದು. ಆದರೆ, ಇತ್ತೀಚಿನ ಚುನಾವಣಾ ಫಲಿತಾಂಶಗಳು ಇಡೀ ದೇಶದ ಗಮನ ಸೆಳೆದಿರುವುದು ಕೇವಲ ಅಧಿಕಾರ ಬದಲಾವಣೆಯಿಂದಲ್ಲ, ಬದಲಾಗಿ ಆ ಗೆಲುವಿನ ಹಿಂದೆ ಅಡಗಿರುವ ಕುತಂತ್ರ ಮತ್ತು ಸಾಂವಿಧಾನಿಕ ಸ್ವಾಯತ್ತ ಸಂಸ್ಥೆಗಳ ದುರ್ಬಳಕೆಯಿಂದ. ಮಮತಾ ಬ್ಯಾನರ್ಜಿ ನೇತೃತ್ವದ ತೃಣಮೂಲ ಕಾಂಗ್ರೆಸ್ ()ಯ ಭದ್ರಕೋಟೆಯನ್ನು ಬಿಜೆಪಿ ಭೇದಿಸಿದ ರೀತಿಗೆ ಹಲವು ಅನುಮಾನಗಳ ನೆರಳು ಬಿದ್ದಿದೆ. ಮತಗಳ ಚೌರ್ಯದಿಂದ ಹಿಡಿದು ಜನರ ಪೌರತ್ವ ಕಸಿಯುವವರೆಗೆ ನಡೆದಿದೆ ಎನ್ನಲಾದ ಬೆಳವಣಿಗೆಗಳು ಪ್ರಜಾಪ್ರಭುತ್ವದ ಆಶಯಗಳನ್ನೇ ಪ್ರಶ್ನಿಸುವಂತೆ ಮಾಡಿವೆ.

ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಗೆಲುವಿನ ಹಿಂದೆ ಅತ್ಯಂತ ದೊಡ್ಡ ಮಟ್ಟದ ಚರ್ಚೆಗೆ ಗ್ರಾಸವಾಗಿರುವುದು ಎಸ್‌ಐಆರ್ () ಪ್ರಕ್ರಿಯೆ. ರಾಜಕೀಯ ವಿಶ್ಲೇಷಕ ಯೋಗೇಂದ್ರ ಯಾದವ್ ಅವರು ಬಿಚ್ಚಿಟ್ಟಿರುವ ಅಂಕಿಅಂಶಗಳು ಬೆಚ್ಚಿಬೀಳಿಸುವಂತಿವೆ. ಅವರ ಪ್ರಕಾರ, ಎಸ್‌ಐಆರ್ ಹೆಸರಿನಲ್ಲಿ ಸುಮಾರು 27 ಲಕ್ಷ ಮತದಾರರನ್ನು ಮತದಾರರ ಪಟ್ಟಿಯಿಂದ ವ್ಯವಸ್ಥಿತವಾಗಿ ತೆಗೆದುಹಾಕಲಾಗಿದೆ. ಇದು ಒಟ್ಟು ಮತದಾರರ ಸುಮಾರು 4.3% ರಷ್ಟರ ಭಾಗವಾಗಿದೆ. ಅಚ್ಚರಿಯ ವಿಷಯವೆಂದರೆ, ಬಿಜೆಪಿ ಮತ್ತು ಟಿಎಂಸಿ ನಡುವಿನ ಮತ ಹಂಚಿಕೆಯ ವ್ಯತ್ಯಾಸ ( ) ಕೇವಲ 4.5% ಮಾತ್ರ ಇರುವುದು.

ಯಾವ ಕ್ಷೇತ್ರಗಳಲ್ಲಿ 5 ಸಾವಿರದಿಂದ 25 ಸಾವಿರದವರೆಗೆ ಮತದಾರರ ಹೆಸರುಗಳನ್ನು ಡಿಲೀಟ್ ಮಾಡಲಾಗಿದೆಯೋ, ಅಂತಹ ಕ್ಷೇತ್ರಗಳಲ್ಲೇ ಬಿಜೆಪಿ ಹೆಚ್ಚಿನ ಅಂತರದಿಂದ ಗೆಲುವು ಸಾಧಿಸಿದೆ. ಇದು ಕೇವಲ ಕಾಕತಾಳೀಯವಾಗಿರಲು ಸಾಧ್ಯವೇ? ಮತದಾರರ ಪಟ್ಟಿಯಿಂದ ಒಂದು ನಿರ್ದಿಷ್ಟ ಸಮುದಾಯ ಅಥವಾ ಸಿದ್ಧಾಂತದ ಬೆಂಬಲಿಗರನ್ನು ಕೈಬಿಡುವ ಮೂಲಕ ಗೆಲುವಿನ ಹಾದಿಯನ್ನು ಸುಗಮಗೊಳಿಸಲಾಯಿತೇ ಎಂಬ ಪ್ರಶ್ನೆ ಈಗ ಬಲವಾಗಿ ಕೇಳಿಬರುತ್ತಿದೆ. ಅದಕ್ಕೆ ಕಾರಣ ಕೂಡ ಇದೆ.

ಪಶ್ಚಿಮ ಬಂಗಾಳದಲ್ಲಿ 2011ರಲ್ಲಿ ದಶಕಗಳ ಎಡರಂಗದ ಆಡಳಿತವನ್ನು ಅಂತ್ಯಗೊಳಿಸಿ ಮೊದಲ ಬಾರಿಗೆ ಅಧಿಕಾರಕ್ಕೆ ಬಂದ ಮಮತಾ ಬ್ಯಾನರ್ಜಿ ಅವರು, 2016 ಮತ್ತು 2021ರ ಚುನಾವಣೆಗಳಲ್ಲೂ ಭರ್ಜರಿ ಜಯ ಸಾಧಿಸಿ ಸತತ ಮೂರು ಬಾರಿ ಮುಖ್ಯಮಂತ್ರಿಯಾದರು. ವಿಶೇಷವೆಂದರೆ, 2016ರಲ್ಲಿ ಕೇವಲ 3 ಸ್ಥಾನ ಗೆದ್ದಿದ್ದ ಬಿಜೆಪಿ, 2021ರ ವೇಳೆಗೆ 77 ಸ್ಥಾನಗಳಿಗೆ ಏರಿಕೆ ಕಂಡು ಪ್ರಬಲ ಪ್ರತಿಪಕ್ಷವಾಗಿ ಹೊರಹೊಮ್ಮಿತು. ಆದರೆ, 2024ರ ಲೋಕಸಭಾ ಚುನಾವಣೆಯಲ್ಲಿ ಕೇವಲ 12 ಸೀಟುಗಳಿಗೆ ಕುಸಿದಿದ್ದ ಬಿಜೆಪಿ, 2026ರ ವಿಧಾನಸಭಾ ಚುನಾವಣೆಯಲ್ಲಿ ದಿಢೀರನೆ 190 ಕ್ಷೇತ್ರಗಳಲ್ಲಿ ಜಯಗಳಿಸಿರುವುದು ದೊಡ್ಡ ಮಟ್ಟದ ಚರ್ಚೆಗೆ ನಾಂದಿ ಹಾಡಿದೆ. ಕೇವಲ ಐದು ವರ್ಷಗಳಲ್ಲಿ ಬಿಜೆಪಿ ಇಷ್ಟೊಂದು ದೊಡ್ಡ ಮಟ್ಟದ ಏರಿಕೆ ಕಾಣಲು ಪಶ್ಚಿಮ ಬಂಗಾಳದಲ್ಲಿ ನಡೆದ ಎಸ್‌ಐಆರ್ () ಪ್ರಕ್ರಿಯೆಯೇ ಕಾರಣ ಎಂಬ ಗಂಭೀರ ಆರೋಪ ಕೇಳಿಬರುತ್ತಿದೆ. ಈ ಪ್ರಕ್ರಿಯೆಯ ಮೂಲಕ ಸುಮಾರು 27 ಲಕ್ಷ ಮತದಾರರ ಹಕ್ಕನ್ನು ಕಸಿದುಕೊಳ್ಳಲಾಗಿದೆ. ವಿಶೇಷವಾಗಿ ಕಳೆದ ಬಾರಿ ಟಿಎಂಸಿ ಕಡಿಮೆ ಅಂತರದಿಂದ ಗೆದ್ದಿದ್ದ ಕ್ಷೇತ್ರಗಳನ್ನೇ ಗುರಿಯಾಗಿಸಿ ಅಲ್ಲಿನ ಶೇ. 5 ರಿಂದ ಶೇ. 10 ರಷ್ಟು ಟಿಎಂಸಿ ಮತದಾರರ ಹೆಸರನ್ನು ಪಟ್ಟಿಯಿಂದ ಡಿಲೀಟ್ ಮಾಡಲಾಗಿದೆ ಎಂಬ ಸಂಶಯ ವ್ಯಕ್ತವಾಗಿದೆ. ಇಷ್ಟೆಲ್ಲಾ ಸವಾಲುಗಳ ನಡುವೆಯೂ ಮಮತಾ ಬ್ಯಾನರ್ಜಿ ಅವರ ತೃಣಮೂಲ ಕಾಂಗ್ರೆಸ್ 81 ಸ್ಥಾನಗಳನ್ನು ಉಳಿಸಿಕೊಳ್ಳುವ ಮೂಲಕ ಪ್ರಬಲ ಪ್ರತಿರೋಧ ತೋರಿದೆ.

ಪಶ್ಚಿಮ ಬಂಗಾಳದಲ್ಲಿ ಜಾರಿಯಾದ ಎಸ್‌ಐಆರ್ ಪ್ರಕ್ರಿಯೆಯು ರಾಜ್ಯದ ಮತದಾರರ ಪಟ್ಟಿಯಲ್ಲಿ ಭಾರಿ ಬದಲಾವಣೆ ತಂದಿದ್ದು, ಸುಮಾರು 90 ಲಕ್ಷ (90,62,188) ಹೆಸರುಗಳನ್ನು ಅಳಿಸಿಹಾಕಲಾಗಿದೆ. ಇದು ಒಟ್ಟು ಮತದಾರರ ಸಂಖ್ಯೆಯಲ್ಲಿ ಶೇ. 12 ರಷ್ಟು ದೊಡ್ಡ ಮಟ್ಟದ ಕುಸಿತವಾಗಿದ್ದು, ಚುನಾವಣಾ ಫಲಿತಾಂಶಗಳ ಮೇಲೆ ನೇರ ಪರಿಣಾಮ ಬೀರಿದೆ. ಎಸ್‌ಐಆರ್ ಪ್ರಕ್ರಿಯೆಗಿಂತ ಮೊದಲು 7.66 ಕೋಟಿ ಇದ್ದ ಮತದಾರರ ಸಂಖ್ಯೆಯು ಅಂತಿಮವಾಗಿ 6.75 ಕೋಟಿಗೆ ಇಳಿಕೆಯಾಗಿದೆ. ಗಮನಿಸಬೇಕಾದ ಅಂಶವೆಂದರೆ, ಅಳಿಸಿಹಾಕಲಾದವರಲ್ಲಿ ಶೇ. 63.42 ರಷ್ಟು ಜನರು ಹಿಂದೂಗಳಾಗಿದ್ದರೆ, ಶೇ. 34.32 ರಷ್ಟು ಜನರು ಮುಸ್ಲಿಂ ಸಮುದಾಯಕ್ಕೆ ಸೇರಿದವರಾಗಿದ್ದಾರೆ. ಅದರಲ್ಲೂ ವಿಶೇಷವಾಗಿ ಬಾಂಗ್ಲಾದೇಶದಿಂದ ಬಂದಿರುವ ಹಿಂದೂ ಮತುವಾ ಸಮುದಾಯದ ಪ್ರಭಾವವಿರುವ ಉತ್ತರ 24 ಪರಗಣ ಮತ್ತು ನಾದಿಯಾ ಜಿಲ್ಲೆಗಳಿಂದಲೇ ಸುಮಾರು 2.42 ಲಕ್ಷ ಹೆಸರುಗಳನ್ನು ತೆಗೆಯಲಾಗಿದೆ. ಒಟ್ಟಾರೆಯಾಗಿ, ಸುಮಾರು 58 ಲಕ್ಷ ಹೆಸರುಗಳನ್ನು ಒಂದು ವರ್ಗದಲ್ಲಿ ಹಾಗೂ ಮತ್ತೊಂದು ಹಂತದಲ್ಲಿ 27 ಲಕ್ಷ ಹೆಸರುಗಳನ್ನು ಅಳಿಸಲಾಗಿದ್ದು, ಈ ಪೈಕಿ ಮುಸ್ಲಿಂ ಮತದಾರರ (ಸುಮಾರು 17 ಲಕ್ಷ) ಸಂಖ್ಯೆ ಗಣನೀಯವಾಗಿದೆ ಎಂದು ಈ ಅಂಕಿಅಂಶಗಳು ವಿವರಿಸುತ್ತವೆ.

ಅಷ್ಟೇ ಅಲ್ಲ, ಈ ಬಾರಿಯ ಚುನಾವಣಾ ಫಲಿತಾಂಶಗಳನ್ನು



ಸೂಕ್ಷ್ಮವಾಗಿ ಗಮನಿಸಿದರೆ, ಮತದಾರರ ಪಟ್ಟಿಯಿಂದ ಹೆಸರುಗಳನ್ನು ಕೈಬಿಟ್ಟಿರುವುದಕ್ಕೂ ಮತ್ತು ಬಿಜೆಪಿಯ ಗೆಲುವಿಗೂ ಒಂದು ಅಚ್ಚರಿಯ ನಂಟಿರುವುದು ಕಂಡುಬರುತ್ತದೆ. ರಾಜ್ಯದಲ್ಲಿ ಜಾರಿಯಾದ ಪ್ರಕ್ರಿಯೆಯ ಮೂಲಕ ಸುಮಾರು 90 ಲಕ್ಷ ಅಂದರೆ ಶೇಕಡಾ 12 ರಷ್ಟು ಮತದಾರರನ್ನು ವ್ಯವಸ್ಥಿತವಾಗಿ ಪಟ್ಟಿಯಿಂದ ಹೊರಹಾಕಲಾಗಿದ್ದು, ಇದು ಬಿಜೆಪಿಯ ಹಾದಿಯನ್ನು ಸುಗಮಗೊಳಿಸಿದೆ ಎಂಬ ಗಂಭೀರ ಆರೋಪವಿದೆ. ಅಂಕಿಅಂಶಗಳ ಪ್ರಕಾರ, 25 ಸಾವಿರಕ್ಕೂ ಅಧಿಕ ಮತದಾರರ ಹೆಸರು ಡಿಲೀಟ್ ಆದ 147 ಕ್ಷೇತ್ರಗಳ ಪೈಕಿ ಬಿಜೆಪಿ 87 ಸ್ಥಾನಗಳನ್ನು ಗೆದ್ದುಕೊಂಡಿದೆ. ಹಾಗೆಯೇ, 5 ಸಾವಿರದಿಂದ 25 ಸಾವಿರದವರೆಗೆ ಮತದಾರರನ್ನು ಕೈಬಿಟ್ಟ 133 ಕ್ಷೇತ್ರಗಳಲ್ಲಿ ಬಿಜೆಪಿ 90 ಸ್ಥಾನಗಳನ್ನು ತನ್ನದಾಗಿಸಿಕೊಂಡಿದೆ. ಅಷ್ಟೇ ಅಲ್ಲದೆ, ಕೇವಲ 5 ಸಾವಿರಕ್ಕಿಂತ ಕಡಿಮೆ ಹೆಸರುಗಳನ್ನು ಅಳಿಸಿದ 13 ಕ್ಷೇತ್ರಗಳ ಪೈಕಿ 12ರಲ್ಲಿ ಬಿಜೆಪಿ ಜಯಭೇರಿ ಬಾರಿಸಿದೆ. ಈ ಎಲ್ಲಾ ಲೆಕ್ಕಾಚಾರಗಳನ್ನು ನೋಡಿದರೆ ಅಲ್ಪಸಂಖ್ಯಾತ ಮತದಾರರನ್ನು ಗುರಿಯಾಗಿಸಿ ಪಟ್ಟಿಯಿಂದ ಹೊರಹಾಕಿದ ಒಂದು ವ್ಯವಸ್ಥಿತ ಕುತಂತ್ರದ ಫಲ ಎಂದು ವಿಶ್ಲೇಷಿಸಲಾಗುತ್ತಿದೆ. ಒಟ್ಟಾರೆಯಾಗಿ, ಮತದಾರರ ಪಟ್ಟಿಯಲ್ಲಿ ನಡೆದ ಈ ಭಾರಿ ಪ್ರಮಾಣದ ಕಡಿತವೇ ಚುನಾವಣಾ ಸಮೀಕರಣಗಳನ್ನು ಬಿಜೆಪಿಗೆ ಪೂರಕವಾಗಿ ಬದಲಿಸಿದೆ ಎಂಬುದು ಸ್ಪಷ್ಟವಾಗಿ ಗೋಚರಿಸುತ್ತಿದೆ.

ಯಾವುದೇ ಪ್ರಜಾಪ್ರಭುತ್ವದಲ್ಲಿ ಚುನಾವಣಾ ಆಯೋಗವು ನಿಷ್ಪಕ್ಷಪಾತವಾಗಿ ಕೆಲಸ ಮಾಡಬೇಕು. ಆದರೆ, ಬಂಗಾಳದ ವಿಷಯದಲ್ಲಿ ಆಯೋಗವು ಬಿಜೆಪಿ ಜೊತೆ ಕೈಜೋಡಿಸಿದೆ ಎಂಬ ಗಂಭೀರ ಆರೋಪಗಳಿವೆ. ಯೋಗೇಂದ್ರ ಯಾದವ್ ಅವರ ವಿಶ್ಲೇಷಣೆಯಂತೆ, ರಾಜ್ಯದಲ್ಲಿ ಮಮತಾ ಬ್ಯಾನರ್ಜಿ ಸರ್ಕಾರದ ವಿರುದ್ಧ ಆಡಳಿತ ವಿರೋಧಿ ಅಲೆ ಇರುವುದು ನಿಜವಾಗಿದ್ದರೂ, ಅವರು ಸೋಲುವ ಹಂತಕ್ಕೆ ಅದು ತಲುಪಿರಲಿಲ್ಲ. ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ನಡೆದಿದ್ದರೆ ದೀದಿಯೇ ಮತ್ತೆ ಅಧಿಕಾರಕ್ಕೆ ಬರುತ್ತಿದ್ದರು. ಬಿಜೆಪಿ ಹಾಗೂ ಟಿಎಂಸಿ ನಡುವಿನ ಅಂತರ ಕಡಿಮೆ ಇರ್ತಾ ಇತ್ತು. ಆದರೆ, ಸ್ಟ್ರಾಂಗ್ ರೂಮ್‌ಗಳ ವಿಡಿಯೋಗಳು ಸೋರಿಕೆಯಾದದ್ದು ಮತ್ತು ಇವಿಎಂ ಯಂತ್ರಗಳ ಸುರಕ್ಷತೆಯ ಬಗ್ಗೆ ಎದ್ದಿರುವ ಪ್ರಶ್ನೆಗಳು ಚುನಾವಣಾ ಆಯೋಗದ ವಿಶ್ವಾಸಾರ್ಹತೆಯನ್ನು ಕುಗ್ಗಿಸಿವೆ. ಕೇಂದ್ರ ಸರ್ಕಾರವು ಬಿಜೆಪಿಯೇತರ ರಾಜ್ಯಗಳನ್ನು ಹತ್ತಿಕ್ಕಲು ಸಾಂವಿಧಾನಿಕ ಸ್ವಾಯತ್ತ ಸಂಸ್ಥೆಗಳನ್ನು ಬಳಸಿಕೊಳ್ಳುತ್ತಿದೆ ಎಂಬ ವಾದಕ್ಕೆ ಇದು ಮತ್ತಷ್ಟು ಪುಷ್ಟಿ ನೀಡಿದೆ. ಇನ್ನು ಬಂಗಾಳದಲ್ಲಿ ಬಿಜೆಪಿ ಗೆದ್ದ ಮೇಲೆ ಮುಖ್ಯಮಂತ್ರಿ ಯಾರು ಎಂಬ ಪ್ರಶ್ನೆಗೆ ಉತ್ತರವಾಗಿ ಜ್ಞಾನೇಶ್ ಕುಮಾರ್ ಅವರ ಹೆಸರು ಕೇಳಿಬರುತ್ತಿರುವುದು ವಿಪರ್ಯಾಸದ ಸಂಗತಿ.

ಆರ್ಥಿಕ ದಿಗ್ಬಂಧನ ಮತ್ತು ಅಧಿಕಾರಿಗಳ ನಿಯೋಜನೆ

ಕೇಂದ್ರದ ಬಿಜೆಪಿ ಸರ್ಕಾರವು ಮಮತಾ ಸರ್ಕಾರದ ವಿರುದ್ಧ ಕೇವಲ ಚುನಾವಣಾ ಕಣದಲ್ಲಿ ಮಾತ್ರವಲ್ಲದೆ, ಆಡಳಿತಾತ್ಮಕವಾಗಿಯೂ ಸಮರ ಸಾರಿತ್ತು. ಪಶ್ಚಿಮ ಬಂಗಾಳಕ್ಕೆ ಬರಬೇಕಾದ ಕೇಂದ್ರದ ಅನುದಾನಗಳನ್ನು ತಡೆಹಿಡಿಯುವುದು, ನರೇಗಾ () ಹಣವನ್ನು ಸರಿಯಾಗಿ ಬಿಡುಗಡೆ ಮಾಡದೆ ರಾಜ್ಯದಲ್ಲಿ ಆರ್ಥಿಕ ಸಂಕಷ್ಟ ಸೃಷ್ಟಿಸುವುದು ಬಿಜೆಪಿಯ ತಂತ್ರಗಾರಿಕೆಯ ಭಾಗವಾಗಿತ್ತು. ಇದರ ಜೊತೆಗೆ ಅಜಯ್ ಪಾಲ್ ಶರ್ಮಾ ಮತ್ತು ಗಂಗಾಧರ್ ಬತ್ತುಲಾ ಅವರಂತಹ ವಿವಾದಿತ ಹಿನ್ನೆಲೆಯ ಅಧಿಕಾರಿಗಳನ್ನು ಬಂಗಾಳಕ್ಕೆ ಕರೆತಂದಿದ್ದರ ಉದ್ದೇಶವೇನು? ಬಿಜೆಪಿ ಈ ಅಧಿಕಾರಿಗಳನ್ನ ಎನ್‌ಕೌಂಟರ್ ಸ್ಪೆಷಲಿಸ್ಟ್ ಅಂತಾನೇ ಫೇಮಸ್ ಮಾಡಿ, ಇಂತಹವನ್ನ ಬಂಗಾಳಕ್ಕೆ ತಂದಿದ್ದು ಯಾರನ್ನ ಹೆದರಿಸುವ ಸಲುವಾಗಿ? ಯಾವ ಪ್ರಕ್ರಿಯೆಯನ್ನು ಹಳಿ ತಪ್ಪಿಸಲು ಈ ಎನ್‌ಕೌಂಟರ್ ಸ್ಪೆಷಲಿಸ್ಟ್ ಅಧಿಕಾರಗಳನ್ನ ಬಳಸಿಕೊಳ್ಳಲಾಯಿತು ಎಂಬುದು ತನಿಖೆಯಾಗಬೇಕಾದ ವಿಷಯ.

ಒಂದೆಡೆ ಮತಪಟ್ಟಿಯಿಂದ ಹೆಸರುಗಳನ್ನು ತೆಗೆಯುತ್ತಿದ್ದರೆ, ಮತ್ತೊಂದೆಡೆ ಜನರ ಮೂಲ ಪೌರತ್ವವನ್ನು ಕಸಿದುಕೊಳ್ಳುವ ಬೆದರಿಕೆ ಜನರ ಮನಸ್ಸಿನಲ್ಲಿ ಭಯ ಹುಟ್ಟಿಸಿದೆ. ಇದೀಗ ಡಿಲಿಮಿಟೇಷನ್ (ಕ್ಷೇತ್ರ ಪುನರ್ ವಿಂಗಡಣೆ) ಪ್ರಕ್ರಿಯೆಗೆ ಕೈ ಹಾಕುವ ಮೂಲಕ ರಾಜಕೀಯ ಲಾಭ ಪಡೆಯಲು ಬಿಜೆಪಿ ಮುಂದಾಗಿದೆ. ಇದು ಕೇವಲ ಚುನಾವಣೆ ಗೆಲ್ಲುವ ತಂತ್ರವಲ್ಲ, ಬದಲಾಗಿ ಒಂದು ರಾಜ್ಯದ ರಾಜಕೀಯ ಅಸ್ಮಿತೆಯನ್ನೇ ಬದಲಿಸುವ ಪ್ರಯತ್ನ.

ಚುನಾವಣಾ ಫಲಿತಾಂಶದ ನಂತರ ರಾಜ್ಯದಲ್ಲಿ ಶಾಂತಿ ನೆಲೆಸಬೇಕಿತ್ತು. ಆದರೆ, ಬಿಜೆಪಿ ಕಾರ್ಯಕರ್ತರು ಟಿಎಂಸಿ ಕಚೇರಿಗಳ ಮೇಲೆ ದಾಳಿ ಮಾಡುವುದು ಮತ್ತು ಮಮತಾ ಬ್ಯಾನರ್ಜಿ ಅವರ ನಿವಾಸದ ಮುಂದೆ ಜೈ ಶ್ರೀರಾಮ್ ಘೋಷಣೆಗಳನ್ನು ಕೂಗುವ ಮೂಲಕ ಕೆಣಕುತ್ತಿರುವುದು ಕಂಡುಬಂದಿದೆ. ಧಾರ್ಮಿಕ ಘೋಷಣೆಗಳನ್ನು ರಾಜಕೀಯ ಸೇಡಿಗೆ ಬಳಸಿಕೊಳ್ಳುತ್ತಿರುವುದು ವಿಕೃತಿಯ ಪರಾಕಾಷ್ಠೆಯಾಗಿದೆ. ದೀದಿಯ ಈ ಸೋಲು ಜನರ ಇಚ್ಛೆಯಲ್ಲ, ಬದಲಾಗಿ ವ್ಯವಸ್ಥಿತವಾಗಿ ರೂಪಿಸಲಾದ ಸೋಲು ಎಂಬುದು ಸುಳ್ಳಲ್ಲ.

ಇಲ್ಲಿ ಇನ್ನೊಂದು ವಿಚಾರವನ್ನ ನಾವು ಗಮನಿಸಬೇಕು. ಮೋದಿ ಸರ್ಕಾರವು ಹಠಾತ್ತನೆ ಸಂಸತ್ತಿನ ವಿಶೇಷ ಅಧಿವೇಶನವನ್ನು ಕರೆದು ಮಹಿಳಾ ಮೀಸಲಾತಿ ಬಿಲ್ ಮಂಡಿಸಿದ್ದು ಕೇವಲ ಮಹಿಳಾ ಸಬಲೀಕರಣದ ಉದ್ದೇಶಕ್ಕೋ ಅಥವಾ ಪಶ್ಚಿಮ ಬಂಗಾಳದ ಮಹಿಳಾ ಮತದಾರರನ್ನು ಸೆಳೆಯಲು ನಡೆಸಿದ ವ್ಯವಸ್ಥಿತ ರಾಜಕೀಯ ತಂತ್ರವೋ ಎಂಬ ಬಲವಾದ ಪ್ರಶ್ನೆ ಈಗ ಮೂಡುತ್ತಿದೆ. ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿ ಅವರ ಅತಿದೊಡ್ಡ ಶಕ್ತಿಯೇ ಅಲ್ಲಿನ ಮಹಿಳಾ ಮತದಾರರು. ದಶಕಗಳಿಂದ ದೀದಿಯ ಬೆನ್ನಿಗೆ ನಿಂತಿರುವ ಈ ಮಹಿಳಾ ಬ್ಯಾಂಕ್ ಅನ್ನು ಒಡೆಯಲು ಬಿಜೆಪಿ ಈ ಮೀಸಲಾತಿ ಅಸ್ತ್ರವನ್ನು ಪ್ರಯೋಗಿಸಿದಂತಿದೆ. ವರ್ಷಗಳಿಂದ ಧೂಳು ಹಿಡಿಯುತ್ತಿದ್ದ ವಿಧೇಯಕವನ್ನು ಚುನಾವಣೆಗೂ ಮುನ್ನವೇ ಇಷ್ಟು ಅವಸರವಾಗಿ ಜಾರಿಗೆ ತರಲು ಮುಂದಾದದ್ದು ಬಂಗಾಳದ ಮಹಿಳೆಯರನ್ನು ಒಲಿಸಿಕೊಳ್ಳುವ ಒಂದು ನಾಟಕವೇ ಸರಿ ಎಂಬ ಅನುಮಾನಗಳು ರಾಜಕೀಯ ವಲಯದಲ್ಲಿ ದಟ್ಟವಾಗಿವೆ. ದೀದಿಯ ಭದ್ರಕೋಟೆಯನ್ನು ಭೇದಿಸಲು ಇಂತಹ ಭಾವನಾತ್ಮಕ ಮತ್ತು ಸಾಂವಿಧಾನಿಕ ದಾಳಗಳನ್ನು ಬಿಜೆಪಿ ಬಳಸಿಕೊಂಡಿದೆ ಎನ್ನುವುದು ಈಗ ದೇಶಾದ್ಯಂತ ಚರ್ಚೆಯಾಗುತ್ತಿರುವ ವಿಚಾರ.

ಇನ್ನು ನಮ್ಮ ಪ್ರಧಾನಿಗಳು ದಿನಕ್ಕೆ 18 ಗಂಟೆ ಕೆಲಸ ಮಾಡುತ್ತಾರೆ ಎಂದು ಕೇಳಿದ್ದೇವೆ. ಆದರೆ, ಆ 18 ಗಂಟೆಗಳಲ್ಲಿ ದೇಶದ ಅಭಿವೃದ್ಧಿಗಿಂತ ಹೆಚ್ಚಾಗಿ ''ಮುಂದಿನ ಯಾವ ರಾಜ್ಯದಲ್ಲಿ ಸರ್ಕಾರ ಉರುಳಿಸಬೇಕು?'', ''ಯಾವ ರಾಜ್ಯದಲ್ಲಿ ಸುಳ್ಳು ಗ್ಯಾರೆಂಟಿಗಳನ್ನು ಘೋಷಿಸಬೇಕು?'' ಮತ್ತು ''ಮತಗಳನ್ನು ಹೇಗೆ ಕೊಳ್ಳೆ ಹೊಡೆಯಬೇಕು?'' ಎಂಬ ಪ್ಲಾನ್ ಮಾಡುವುದರಲ್ಲೇ ಕಳೆಯುತ್ತಿದ್ದಾರೆ. ಇನ್ನುಳಿದ ಸಮಯದಲ್ಲಿ ವಿದೇಶ ಪ್ರವಾಸ, ಮೋಜು-ಮಸ್ತಿ ಇರಲೇ ಇರುತ್ತದೆ. ಅಧ್ವಾನಗಳ ನಡುವೆಯೂ 30 ವರ್ಷಗಳ ಕಾಲ ಸರ್ಕಾರ ನಡೆಸುವ ಕನಸು ಕಾಣುವುದು ಇವರ ಆತ್ಮವಿಶ್ವಾಸಕ್ಕೆ ಸಾಕ್ಷಿ. ಇದು ಬರೀ ಮೋದಿ ರಾಜಕೀಯವಲ್ಲ, ಒಂದು ದೀರ್ಘಕಾಲೀನ ಬಿಸಿನೆಸ್ ಮಾಡೆಲ್ ಅಂತಾನೇ ಹೇಳಬಹುದು.

ಇವಿಎಂ () ಎಂಬ ಮಷೀನು ಮತ್ತು ಮೇನ್ ಸ್ಟ್ರೀಮ್ ಮೀಡಿಯಾ ಎಂಬ ಭಜನಾ ಮಂಡಳಿ ಇರುವವರೆಗೆ ಮೋದಿಯವರಿಗೆ ಸೋಲು ಎಂಬುದು ಕೇವಲ ಒಂದು ಪದವಷ್ಟೇ. ಮಾಧ್ಯಮಗಳು ವಾಸ್ತವವನ್ನು ಮುಚ್ಚಿಟ್ಟು, ಸುಳ್ಳನ್ನೇ ಸತ್ಯವೆಂದು ಬಿಂಬಿಸುತ್ತಿದ್ದರೆ, ಮಷೀನುಗಳು ಜನರ ನಾಡಿಮಿಡಿತಕ್ಕಿಂತ ಹೆಚ್ಚಾಗಿ ಆಳುವವರ ಇಚ್ಛಾಶಕ್ತಿಯನ್ನು ಪ್ರತಿಬಿಂಬಿಸುತ್ತಿವೆ. ಪ್ರಜಾಪ್ರಭುತ್ವದ ನಾಲ್ಕು ಅಂಗಗಳೂ ಈಗ ಸ್ವಾಧೀನ ಕಳೆದುಕೊಂಡಿವೆ. ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗ ಮತ್ತು ಮಾಧ್ಯಮ ಈ ನಾಲ್ಕೂ ಈಗ ಒಂದೇ ಮಾಲೀಕನ ಅಡಿಯಲ್ಲಿ ಕೆಲಸ ಮಾಡುತ್ತಿರುವಂತೆ ತೋರುತ್ತಿದೆ. ಇದರಿಂದ ಪ್ರಜಾಪ್ರಭುತ್ವ ಅವನತಿಯತ್ತ ಸಾಗುತ್ತಿದೆ. ಆದರೆ ಇದನ್ನು ನಾವು ಹೇಳಿದರೆ ''ನೀವು ದೇಶ ವಿರೋಧಿ, ಇವರು ದೇಶದ್ರೋಹಿಗಳು'' ಎಂಬ ಲೇಬಲ್ ಬೀಳುತ್ತದೆ. ಹೀಗೆ ಟೀಕೆಯನ್ನು ತಡೆಯುವ ವ್ಯವಸ್ಥೆ ಬೆಳೆಯುತ್ತಿರುವುದು.

ಒಟ್ಟಾರೆಯಾಗಿ, ಪಶ್ಚಿಮ ಬಂಗಾಳದ ಈ ಚುನಾವಣಾ ಫಲಿತಾಂಶವು ಪ್ರಜಾಪ್ರಭುತ್ವದ ದೃಷ್ಟಿಯಿಂದ ಆಶಾದಾಯಕವಾಗಿಲ್ಲ. ಒಂದು ವೇಳೆ ಸ್ವಾಯತ್ತ ಸಂಸ್ಥೆಗಳೇ ಒಂದು ಪಕ್ಷದ ಪರವಾಗಿ ಕೆಲಸ ಮಾಡಲು ಶುರು ಮಾಡಿದರೆ, ಸಾಮಾನ್ಯ ಮತದಾರನ ಮತಕ್ಕೆ ಮೌಲ್ಯವೇ ಇರುವುದಿಲ್ಲ. ಎಸ್‌ಐಆರ್ ಪ್ರಕ್ರಿಯೆಯ ಅಕ್ರಮಗಳು ಮತ್ತು ಕೇಂದ್ರದ ಹಸ್ತಕ್ಷೇಪದ ಬಗ್ಗೆ ದೇಶದಾದ್ಯಂತ ದೊಡ್ಡ ಮಟ್ಟದ ಚರ್ಚೆ ನಡೆಯುವ ಅಗತ್ಯವಿದೆ. ಇಲ್ಲವಾದರೆ, ಮುಂದಿನ ದಿನಗಳಲ್ಲಿ ಇತರ ರಾಜ್ಯಗಳಲ್ಲೂ ಇದೇ ಮಾದರಿಯನ್ನು ಅನುಸರಿಸುವ ಅಪಾಯವಿದೆ. ಬಂಗಾಳದ ಈ ಗೆಲುವು ಬಿಜೆಪಿಗೆ ಅಧಿಕಾರ ತಂದಿರಬಹುದು. ಆದರೆ, ಅದು ನ್ಯಾಯ ಸಮ್ಮತವೇ ಎಂಬ ಪ್ರಶ್ನೆ ಇತಿಹಾಸದಲ್ಲಿ ಉಳಿಯಲಿದೆ.

ಆರ್‌ಜಿ ಕರ್ ಅತ್ಯಾಚಾರ ಸಂತ್ರಸ್ತೆ ತಾಯಿಗೆ ಟಿಕೆಟ್: ಹಾಥರಸ್ ಯುವತಿ, ಅಂಕಿತಾ ಪೋಷಕರಿಗೆ ಬಿಜೆಪಿ ಟಿಕೆಟ್ ಘೋಷಿಸಲಿ

ವಾಸ್ತವದಲ್ಲಿ ಆರ್‌ಜಿ ಕರ್ ಪ್ರಕರಣದಲ್ಲಿ ಬಿಜೆಪಿ ತೋರುತ್ತಿರುವ ಆಸಕ್ತಿಯು ಮಾನವೀಯತೆಯಲ್ಲ, ಪಶ್ಚಿಮ ಬಂಗಾಳದಲ್ಲಿ ತನ್ನ ನೆಲೆಯನ್ನು ಭದ್ರಪಡಿಸಿಕೊಳ್ಳುವ ಕಾರ್ಯತಂತ್ರದ ಭಾಗ ಎಂಬುದು ಸ್ಪಷ್ಟ.

ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜಿನ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಸಂತ್ರಸ್ತೆಯ ತಾಯಿ ರತ್ನಾ ದೇಬ್ನಾಥ್ ಅವರಿಗೆ ಬಿಜೆಪಿ ಟಿಕೆಟ್‌ನಲ್ಲಿ ಸ್ಪರ್ಧಿಸಿರುವುದು ಈ ಹಿಂದೆಯೇ ರಾಜಕೀಯ ವಲಯದಲ್ಲಿ ದೊಡ್ಡ ಚರ್ಚೆಗೆ ಕಾರಣವಾಗಿರುವ ವಿಷಯ. ಸದ್ಯ ದೇಬ್ನಾಥ್ ಗೆಲುವಿನ ಹಾದಿ ಹಿಡಿದಿದ್ದಾರೆ. ಈ ನಡುವೆ ನಮ್ಮ ದೃಷ್ಟಿ ಕೊಂಚ ಹಾಥರಸ್, ಅಂಕಿತಾ ಭಂಡಾರಿ ಮೊದಲಾದ ಅತ್ಯಾಚಾರ ಪ್ರಕರಣದೆಡೆ ಹಾಯುತ್ತಿದೆ. ಹಾಥರಸ್ ಯುವತಿ, ಅಂಕಿತಾ ಪೋಷಕರಿಗೂ ಬಿಜೆಪಿ ಟಿಕೆಟ್ ಘೋಷಿಸಬೇಕಿಲ್ಲವೇ?

ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ 2024ರ ಆಗಸ್ಟ್ 9ರಂದು ತರಬೇತಿ ನಿರತ ಮಹಿಳಾ ವೈದ್ಯೆಯ ಮೇಲಿನ ಅತ್ಯಾಚಾರ ಮತ್ತು ಕೊಲೆ ನಡೆದಿದೆ. ಈ ಪ್ರಕರಣವು ದೇಶಾದ್ಯಂತ ತೀವ್ರ ಆಕ್ರೋಶಕ್ಕೆ ಕಾರಣವಾಗಿತ್ತು. ಕೋಲ್ಕತ್ತಾ ಪೊಲೀಸರು ಪ್ರಕರಣಕ್ಕೆ ಸಂಬಂಧಿಸಿದಂತೆ ಸಂಜಯ್ ರಾಯ್ ಎಂಬ ಸಿವಿಕ್ ವಾಲಂಟಿಯರ್‌ನನ್ನು ಬಂಧಿಸಿದ್ದರು. ಅದಾದ ಬಳಿಕ ಕೋಲ್ಕತ್ತಾ ಹೈಕೋರ್ಟ್ ನಿರ್ದೇಶನದಂತೆ ತನಿಖೆಯನ್ನು ಸಿಬಿಐ ವಹಿಸಿಕೊಂಡಿದೆ. ಜನವರಿ 20ರಂದು ವಿಚಾರಣಾ ನ್ಯಾಯಾಲಯವು ಆರೋಪಿ ಸಂಜಯ್ ರಾಯ್‌ಗೆ ಜೀವಾವಧಿ ಶಿಕ್ಷೆ ವಿಧಿಸಿ ತೀರ್ಪು ನೀಡಿತು. ಆದರೆ, ಆರೋಪಿಗೆ ಮರಣದಂಡನೆ ಶಿಕ್ಷೆ ವಿಧಿಸಬೇಕೆಂದು ಕೋರಿ ಪಶ್ಚಿಮ ಬಂಗಾಳ ಸರ್ಕಾರವು ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದೆ. ಸದ್ಯ ಈ ವಿಚಾರಣೆ ನಡೆಯುತ್ತಿದೆ.

ಇವೆಲ್ಲವುದರ ನಡುವೆ ಸಂತ್ರಸ್ತೆ ವೈದ್ಯೆಯ ತಾಯಿ ರತ್ನ ಅವರಿಗೆ ಬಿಜೆಪಿ ಟಿಕೆಟ್ ನೀಡಿತು. ಪಾಣಿಹಟಿ ಕ್ಷೇತ್ರದಿಂದ ರತ್ನ ಸ್ಪರ್ಧಿಸಿದರು. ಸದ್ಯ ಗೆಲುವಿನ ಹಾದಿ ಹಿಡಿದಿದ್ದಾರೆ. ಈ ವೇಳೆ ಇತರೆ ಅತ್ಯಾಚಾರ, ಕೊಲೆ ಸಂತ್ರಸ್ತರ ತಾಯಿಯಂದಿರಿಗೂ ಬಿಜೆಪಿ ಟಿಕೆಟ್ ನೀಡಬಹುದಿತ್ತಲ್ಲವೇ? ಆರ್‌ಜಿ ಕರ್ ಪ್ರಕರಣದ ಸಂತ್ರಸ್ತೆ ತಾಯಿಗೆ ಮಾತ್ರ ಟಿಕೆಟ್ ನೀಡಿದ್ದು ಯಾಕೆ ಎಂಬ ಪ್ರಶ್ನೆಗಳಿವೆ.

ಪಶ್ಚಿಮ ಬಂಗಾಳದಲ್ಲಿ ಟಿಎಂಸಿ ವಿರುದ್ಧ ಮಹಿಳಾ ಸುರಕ್ಷತೆ ಎಂಬುದು ಪ್ರಬಲ ಅಸ್ತ್ರವನ್ನು ಇಟ್ಟುಕೊಂಡೇ ಬಿಜೆಪಿ ಆರ್‌ಜಿ ಕರ್ ಅತ್ಯಾಚಾರ ಸಂತ್ರಸ್ತೆ ತಾಯಿಗೆ ಟಿಕೆಟ್ ನೀಡಿರುವುದು. ಸಂತ್ರಸ್ತೆಯ ಕುಟುಂಬಕ್ಕೆ ಟಿಕೆಟ್ ನೀಡಿ ಬಿಜೆಪಿ ಆಕ್ರೋಶದ ಕೇಂದ್ರಬಿಂದು ಆಗಲು ಮತ್ತು ಮತವನ್ನು ತನ್ನತ್ತ ಸೆಳೆಯುವ ಎಲ್ಲ ಪ್ರಯತ್ನ ಮಾಡಿದೆ. ಟಿಕೆಟ್ ನೀಡುವುದನ್ನೇ ಸಂತ್ರಸ್ತರಿಗೆ ಅಧಿಕಾರ ನೀಡುವುದು ಎಂಬಂತೆ ಬಿಜೆಪಿ ಬಿಂಬಿಸಿದೆ.

ಅಷ್ಟಕ್ಕೂ ಬಿಜೆಪಿ ಅತ್ಯಾಚಾರ-ಕೊಲೆಯಾದ ಸಂತ್ರಸ್ತರ ಪರವಾಗಿ ನಿಲ್ಲುವ ನಿಟ್ಟನಲ್ಲಿ ಸಂತ್ರಸ್ತೆ ತಾಯಿಗೆ ಟಿಕೆಟ್ ನೀಡಿದೆ ಎಂದು ಹೇಳಿಕೊಳ್ಳುವುದಾದರೆ ಈ ನಿಲುವು ಉತ್ತರ ಪ್ರದೇಶ ಅಥವಾ ಉತ್ತರಾಖಂಡ ಮೊದಲಾದ ರಾಜ್ಯಗಳಲ್ಲಿ ಅನ್ವಯವಾಗುವುದಿಲ್ಲವೇ? ರಾಜ್ಯದಿಂದ ರಾಜ್ಯಕ್ಕೆ ಬಿಜೆಪಿ ನಿಲುವು ಬದಲಾಗುವುದೇ? ಉತ್ತರ ಪ್ರದೇಶದ ಹಾಥರಸ್, ಅಂಕಿತಾ ಭಂಡಾರಿ ಮೊದಲಾದ ಅತ್ಯಾಚಾರ-ಕೊಲೆ ಪ್ರಕರಣಗಳಲ್ಲಿ ಬಿಜೆಪಿ ವಿಭಿನ್ನವಾಗಿ ನಡೆದುಕೊಂಡಿದ್ದು ಯಾಕೆ? ಬಿಜೆಪಿಯ ಈ ಮಹಿಳಾಪರ ನಿಲುವು ವಿಪಕ್ಷಗಳು ಅಧಿಕಾರದಲ್ಲಿರುವ ರಾಜ್ಯದಲ್ಲಿ ಮಾತ್ರ ಅನ್ವಯವಾಗುವುದೇ?

ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ವಿರೋಧ ಪಕ್ಷದಲ್ಲಿದೆ. ಇಲ್ಲಿ ಸರ್ಕಾರದ ವೈಫಲ್ಯವನ್ನು ಎತ್ತಿ ತೋರಿಸುವುದು ಬಿಜೆಪಿಗೆ ಲಾಭದಾಯಕ. ಅದೇ ಉತ್ತರ ಪ್ರದೇಶ, ಉತ್ತರಾಖಂಡದಲ್ಲಿ ಆಡಳಿತ ಪಕ್ಷವಾಗಿರುವ ಬಿಜೆಪಿಗೆ ಈ ಅತ್ಯಾಚಾರ ಸಂತ್ರಸ್ತೆಯರ ಕುಟುಂಬ ಕಾಣುವುದಿಲ್ಲವೇ? ಇಲ್ಲಿ ಸಂತ್ರಸ್ತರ ಪೋಷಕರಿಗೆ ಟಿಕೆಟ್ ನೀಡಿದರೆ, ಅದು ಪರೋಕ್ಷವಾಗಿ ತಮ್ಮದೇ ಸರ್ಕಾರದ ವೈಫಲ್ಯವನ್ನು ಒಪ್ಪಿಕೊಂಡಂತೆ ಆಗುತ್ತದೆ ಎಂಬ ಆತಂಕ ಬಿಜೆಪಿಗೆ ಇರಬಹುದೇನೋ!

ಏನೇ ಆದರೂ ಹಾಥರಸ್ ಅಥವಾ ಗಾಜೀಪುರದ ಪೋಷಕರಿಗೂ ಬಿಜೆಪಿ ಟಿಕೆಟ್ ನೀಡಲು ಸಿದ್ಧವಾಗಬೇಕು. ಈ ಮೂಲಕ ಬಿಜೆಪಿಯ ಮಹಿಳಾಪರ ನಿಲುವು ಎತ್ತಿ ತೋರಿಸಲಿ! ವಾಸ್ತವದಲ್ಲಿ ಆರ್‌ಜಿ ಕರ್ ಪ್ರಕರಣದಲ್ಲಿ ಬಿಜೆಪಿ ತೋರುತ್ತಿರುವ ಆಸಕ್ತಿಯು ಮಾನವೀಯತೆಯಲ್ಲ, ಬಂಗಾಳದಲ್ಲಿ ತನ್ನ ನೆಲೆಯನ್ನು ಭದ್ರಪಡಿಸಿಕೊಳ್ಳುವ ಕಾರ್ಯತಂತ್ರದ ಭಾಗ ಎಂಬುದು ಸ್ಪಷ್ಟ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR